ಸಂಪುಟ: 04 ಸಂಚಿಕೆ: 203 ಪುಟಗಳು: 08 ಶನಿವಾರ 05 ಅಕ್ಟೋಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು
ಅವರು ಮೊದಲು ನಿಮ್ಮನ್ನು ನಿರ್ಲಕ್ಷಿಸುತ್ತಾರೆ, ನಂತರ ನಿಮ್ಮನ್ನು ನೋಡಿ ನಗುತ್ತಾರೆ, ಬಳಿಕ ನಿಮ್ಮೊಂದಿಗೆ ಸಂಘರ್ಷಕ್ಕಿಳಿಯುತ್ತಾರೆ, ಆಗ ನೀವು ಗೆದ್ದಂತೆ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಸತೀಶ ಜಾರಕಿಹೊಳಿ, ಖರ್ಗೆ ಭೇಟಿ; ವಿಶೇಷ ಏನಿಲ್ಲ ಎಂದ ಹೆಬ್ಬಾಳಕರ್

• ಉದಯವಾಹಿನಿ, ಬೆಳಗಾವಿ

'ಮಲ್ಲಿಕಾರ್ಜುನ ಖರ್ಗೆ ನಮ್ಮ ಪಕ್ಷದ ಸರ್ವೋಚ್ಚ ನಾಯಕರು. ಕೆಲಸವಿದ್ದಾಗ ಅವರನ್ನು ಭೇಟಿಯಾಗುವುದು ಸಹಜ. ಸತೀಶ ಜಾರಕಿಹೊಳಿ ಅವರು ಖರ್ಗೆ ಭೇಟಿಯಾಗಿದ್ದರಲ್ಲಿ ಏನೂ ವಿಶೇಷ ಇಲ್ಲ' ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ಹೇಳಿದರು. 'ಯಾರೇ ಮುಖ್ಯಮಂತ್ರಿ ಸ್ಥಾನದ ರೇಸ್‌ನಲ್ಲಿದ್ದರೂ, ನಮ್ಮ ಪಕ್ಷದ ಹೈಕಮಾಂಡ್‌ನವರು ತೀರ್ಮಾನ ಕೈಗೊಳ್ಳುತ್ತಾರೆ. ವರಿಷ್ಠರ ನಿರ್ದೇಶನ ಮತ್ತು 136 ಜನ ಶಾಸಕರ ಇಚ್ಛೆಮೇರೆಗೆ ಮುಖ್ಯಮಂತ್ರಿ ಆಯ್ಕೆ ನಡೆಯುತ್ತದೆ' ಎಂದರು. 'ಗೃಹಲಕ್ಷ್ಮಿ ಯೋಜನೆ ಟೀಕಿಸಿದ ಬಿಜೆಪಿಗರು, ಹರಿಯಾಣದಲ್ಲಿ ಗೃಹಲಕ್ಷ್ಮಿ ಮಾದರಿ ಯೋಜನೆ ಘೋಷಿಸಿದ್ದಾರೆ. ಕಾಂಗ್ರೇಸ್‌ನ ಎಲ್ಲಾ ಕಾರ್ಯಕ್ರಮಗಳನ್ನು ಆರಂಭದಲ್ಲಿ ಟೀಕಿಸುವ ಬಿಜೆಪಿಯವರು, ನಂತರ ಅದೇ ಮಾದರಿ ಯೋಜನೆ ಅನುಷ್ಠಾನಗೊಳಿಸುವ ಹವ್ಯಾಸ ರೂಢಿಸಿಕೊಂಡಿದ್ದಾರೆ ಎಂದರು.

ಸಿದ್ದರಾಮಯ್ಯ ಹಿಂಬಾಲಕರೇ ಅವರಿಗೆ ಖೆಡ್ಡಾ ತೋಡಿದ್ದಾರೆ

• ಉದಯವಾಹಿನಿ, ಚಿತ್ರದುರ್ಗ

ಮುಡಾ ಹಗರಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಹಿಂದೆ 14 ಸೈಟ್ ಗಳ ಬೆಲೆ ರೂ.62 ಕೋಟಿ ರೂಪಾಯಿ ಕೊಡಿ ಎಂದು ಹೇಳಿಕೆ ನೀಡಿದ್ದರು. ಈ ಹೇಳಿಕೆಯನ್ನು ಅವರ ಹಿಂಬಾಲಕರಿಂದ ಕೇಳಿ ಹೇಳಿದ್ದರಿಂದ ಹಾಗಾಗಿ ಅವರ ಹಿಂಬಾಲಕರೇ ಅವರಿಗೆ ಖೆಡ್ಡಾ ತೋಡಿದ್ದಾರೆ ಎಂದು ಚಿತ್ರದುರ್ಗದಲ್ಲಿ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಹೇಳಿಕೆ ನೀಡಿದರು. ಮುಡಾ ಹಗರಣದ ಸೈಟ್ ಬೆಲೆ 80 ರಿಂದ 90 ಲಕ್ಷ ಎಂದೇ ಭಾವಿಸಿದ್ದೆವು. ಸಿಎಂ ಹಿಂದೆ ಇದ್ದ ವ್ಯಕ್ತಿ ಹೇಳಿದ್ದು ಕೇಳಿ 62 ಕೋಟಿ ಎಂದಿದ್ದರು ಸಿಎಂ ಸಿದ್ದರಾಮಯ್ಯ ಹಿಂಬಾಲಕರೇ ಅವರಿಗೆ ಖೆಡ್ಡಾ ತೋಡಿದ್ದಾರೆ ಎಂದು ಚಿತ್ರದುರ್ಗದಲ್ಲಿ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಹೇಳಿಕೆ ನೀಡಿದರು.

ರೋಲ್ಕಾಲ್ ಸ್ವಾಮಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ

• ಉದಯವಾಹಿನಿ, ಬೆಂಗಳೂರು

ಉದ್ಯಮಿ ವಿಜಯ್ ತಾತ ಅವರು ಕೇಂದ್ರ ಸಚಿವ ಎಚ್ ಡಿ ಕುಮಾರ ಸ್ವಾಮಿ ಜೀವ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿ ನಿನ್ನೆ ಅಮೃತ ಹಳ್ಳಿ ಪೊಲೀಸ್ ಠಾಣೆಯಲ್ಲಿ ಎಚ್‌ಡಿಕೆ ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು. ಇದೀಗ ಈ ಒಂದು ವಿಚಾರಕ್ಕೆ ಸಂಬಂಧಪಟ್ಟಂತೆ ಕಾಂಗ್ರೇಸ್ ರೋಲ್ಕಾಲ್ ಸ್ವಾಮಿಯವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ ಎಂದು ತಿರುಗೇಟು ನೀಡಿದೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾನ್ಯ ರೋಲ್ಕಾಲ್ ಸ್ವಾಮಿಯವರ ವಿರುದ್ಧ 50 ಕೋಟಿ ರೂಪಾಯಿ ವಸೂಲಿಗಾಗಿ ಜೀವ ಬೆದರಿಕೆ ಹಾಕಿದ್ದಕ್ಕೆ ಎಫ್‌ಐಆರ್ ದಾಖಲಾಗಿದೆ. ದೂರು ನೀಡಿದ್ದು ಸ್ವತಃ ಜೆಡಿಎಸ್ ಪಕ್ಷದ ಪದಾಧಿಕಾರಿ. ಹಿಂದೆ ಕುಮಾರಸ್ವಾಮಿಯವರ ಮಾನಸಪುತ್ರ ಪ್ರಜ್ವಲ್ ರೇವಣ್ಣನೇ ಜೆಡಿಎಸ್ ನಲ್ಲಿನ ಸೂಟ್ಕೇಸ್ ಸಂಸ್ಕೃತಿಯನ್ನು ತೆರೆದಿಟ್ಟಿದ್ದರು, ಕುಮಾರಸ್ವಾಮಿ ಅವರೇ, ನಿಮ್ಮನ್ನು ರೋಲ್ಕಾಲ್ ಸ್ವಾಮಿ ಎನ್ನೋಣವೇ, ಸೂಟ್ಕೇಸ್ ಸ್ವಾಮಿ ಎನ್ನೋಣವೇ? ರಾಜಕಾರಣವನ್ನು ಮಾಫಿಯಾಕರಣ ಮಾಡಿದ ರೋಲ್ಕಲ್ ಸ್ವಾಮಿಯವರು ರಾಜ್ಯವನ್ನು ಲೂಟಿ ಹೊಡೆದಿದ್ದಷ್ಟೇ ಅಲ್ಲ, ರಾಜ್ಯದ ಭೂಮಿ ಕಬಳಿಸಿದ್ದಷ್ಟೇ ಅಲ್ಲ, ಸ್ವಪಕ್ಷದ ಕಾರ್ಯಕರ್ತರ ಲೂಟಿಗೂ ಇಳಿದಿರುವುದು ಶೋಚನೀಯ ಎಂದರು.

ಸಿದ್ದರಾಮಯ್ಯ ಅವರನ್ನ ಕಂಡರೆ ಮೋದಿ, ಅಮಿತ್ ಶಾಗೆ ಭಯ

• ಉದಯವಾಹಿನಿ, ಕೊಪ್ಪಳ

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಸಿಎಂ ಸಿದ್ದರಾಮಯ್ಯ ಅವರನ್ನು ಕಂಡರೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರಿಗೆ ಹೆದರಿಕೆ ಇದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕರ್ನಾಟಕಕ್ಕೆ 30, 35 ಬಾರಿ ಭೇಟಿ ನೀಡಿದ್ದರು ಸಹ ಕರ್ನಾಟಕ ಜನತೆ ಕಾಂಗ್ರೇಸ್ ಪಕ್ಷವನ್ನು ಗೆಲ್ಲಿಸಿದ್ದಾರೆ. ಹಾಗಾಗಿ ಅವರಿಗೆ ಸಿದ್ದರಾಮಯ್ಯ ಅವರನ್ನು ಕಂಡರೆ ಭಯವಿದೆ ಎಂದು ಸಚಿವ ಶಿವರಾಜ್ ತಂಗಡಗಿ ತಿಳಿಸಿದರು. ಮುಡಾ ಹಗರಣ ಯಾವ ಸರ್ಕಾರದಲ್ಲಿ ಆಗಿದೆ? ಸಿಎಂ ಸಿದ್ದರಾಮಯ್ಯ ಕಡತಕ್ಕೆ ಏನಾದರೂ ಸಹಿ ಹಾಕಿದ್ದಾರಾ? ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಅವರ ಏನು ಪಾತ್ರವಿಲ್ಲ. ಸಿದ್ದರಾಮಯ್ಯ ಅವರನ್ನು ಕಂಡರೆ ಮೋದಿ ಅಮಿತ್ ಶಾ ಗೆ ಭಯ ಎಂದು ಅವರು ತಿಳಿಸಿದರು. ಮುಡಾ ಬೆಳವಣಿಗೆ ನೋಡಿದರೆ ರಾಜಕೀಯ ಷಡ್ಯಂತ್ರ ಎಂದು ಸ್ಪಷ್ಟವಾಗಿ ಗೊತ್ತಾಗುತ್ತದೆ. ಮುಡಾ ಅನ್ನೋ ವಿಚಾರ ಪ್ರಸ್ತಾಪ ಮಾಡುತ್ತಿದ್ದೀರಲ್ಲ ಆಗ ಯಾವ ಸರ್ಕಾರ ಇತ್ತು? ಪ್ರಧಾನಿ ಮೋದಿ ಅವರಿಗೆ ಮತ್ತು ಅಮಿತ್ ಶಾ ಅವರಿಗೆ ಸಿದ್ದರಾಮಯ್ಯ ಅವರನ್ನು ಕೊಂಡರೆ ಹೆದರಿಕೆ. 35 ಬಾರಿ ಕರ್ನಾಟಕಕ್ಕೆ ಭೇಟಿ ನೀಡಿ ಚುನಾವಣಾ ಪ್ರಚಾರ ಮಾಡಿದ್ದರು ಕೂಡ ಕರ್ನಾಟಕ ಜನತೆ ನಮ್ಮನ್ನು ನಂಬಲಿಲ್ಲ ಎಂದರು.

• ತಿರುಪತಿ ಲಡ್ಡು ವಿವಾದ: ಸ್ವತಂತ್ರ ಎಸ್‌ಐಟಿ ತನಿಖೆಗೆ ಸುಪ್ರೀಂ ಕೋರ್ಟ್ ಆದೇಶ • ಸದಸ್ಯರ ಸ್ವತಂತ್ರ ಎಸ್‌ಐಟಿ ರಚನೆ ತಿರುಪತಿ ವಿವಾದ ಬಳಿಕ ದೇಶದಾದ್ಯಂತ ನಂದಿನಿ ಬ್ರ್ಯಾಂಡ್‌ಗೆ ಮನ್ನಣೆ • ರಾಜಕೀಯದಿಂದ ದೇವರುಗಳನ್ನು ದೂರವಿಡಬೇಕಿತ್ತು • ರಾಜ್ಯ ಎಸ್‌ಐಟಿಯಿಂದ ತನಿಖೆ ತಾತ್ಕಾಲಿಕ ಸ್ಥಗಿತ

ತಿಮ್ಮಪ್ಪನ ಲಡ್ಡು ಪರೀಕ್ಷೆ ಎಸ್‌ಐಟಿ ಮೇಲೆ ಸುಪ್ರೀಂ ನಿರೀಕ್ಷೆ

ಇದು ಲಡ್ಡು ಲಡಾಯಿ ಕಹಾನಿ

1. ತಿರುಪತಿ ಲಡ್ಡು ಪ್ರಸಾದ ತಯಾರಿಕೆಯಲ್ಲಿ ಪ್ರಾಣಿಗಳ ಕೊಬ್ಬು ಬಳಸಿರುವ ಆರೋಪ ವಿವಾದ
2. ಸಿಬಿಐ, ಆಂಧ್ರ ಪೊಲೀಸ್ ಮತ್ತು ಎಫ್‌ಎಸ್‌ಎಸ್‌ಎಐ ಅಧಿಕಾರಿಗಳನ್ನು ಒಳಗೊಂಡ ಎಸ್‌ಐಟಿ
3. ರಾಜಕೀಯ ನಾಟಕವನ್ನು ಪರಿಗಣಿಸೊಲ್ಲ , ಭಕ್ತರ ಭಾವನೆಗಳಿಗಾಗಿ ತನಿಖೆ ಎಂದ ಸುಪ್ರೀಂಕೋರ್ಟ್

• ಉದಯವಾಹಿನಿ, ಹೊಸದಿಲ್ಲಿ

ಆಂಧ್ರ ಪ್ರದೇಶದ ಜಗದ್ವಿಖ್ಯಾತ ತಿರುಪತಿ ದೇವಸ್ಥಾನದ ಲಡ್ಡು ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬು ಬಳಸಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡವೊಂದರಿಂದ ಸ್ವತಂತ್ರ ತನಿಖೆಗೆ ಸುಪ್ರೀಂ ಕೋರ್ಟ್ ಆದೇಶಿಸಿದೆ. ಈ ವಿಶೇಷ ತನಿಖಾ ತಂಡವು ಇಬ್ಬರು ಸಿಬಿಐ ಅಧಿಕಾರಿಗಳು, ಇಬ್ಬರು ರಾಜ್ಯ ಪೊಲೀಸ್ ಅಧಿಕಾರಿಗಳು ಮತ್ತು ಭಾರತೀಯ ಆಹಾರ ಸುರಕ್ಷತೆ, ಗುಣಮಟ್ಟ ಪ್ರಾಧಿಕಾರದ (ಎಫ್‌ಎಸ್‌ಎಸ್‌ಎಐ) ಹಿರಿಯ ಅಧಿಕಾರಿಯನ್ನು ಒಳಗೊಂಡಿರಲಿದೆ ಎಂದು ಕೋರ್ಟ್ ತಿಳಿಸಿದೆ.

ಈ ವಿವಾದದ ಕುರಿತಾಗಿನ ರಾಜಕೀಯ ಪಕ್ಷಗಳ ಆರೋಪಗಳನ್ನು ಸುಪ್ರೀಂ ಕೋರ್ಟ್ ಪರಿಗಣಿಸಿಲ್ಲ. ಬದಲಾಗಿ, ಲಡ್ಡು ವಿವಾದದಿಂದ ಶ್ರೀವೆಂಕಟೇಶ್ವರ ದೇವರ ಕೋಟ್ಯಂತರ ಭಕ್ತರ ಭಾವನೆಗಳಿಗೆ ಉಂಟಾಗಿರುವ ನೋವನ್ನು ಗಮನಿಸಿ ಎಸ್‌ಐಟಿ ತನಿಖೆಗೆ ಒಪ್ಪಿಸುತ್ತಿರುವುದಾಗಿ ಹೇಳಿದೆ.

ಇದು ಜಗತ್ತಿನಾದ್ಯಂತ ಇರುವ ಕೋಟ್ಯಂತರ ಭಕ್ತರ ನಂಬಿಕೆಯ ಪ್ರಶ್ನೆಯಾಗಿರುವುದರಿಂದ ಈ ವಿಚಾರವಾಗಿ ರಾಜಕೀಯ ನಾಟಕವನ್ನು ಬಯಸುವುದಿಲ್ಲ ಎಂದು ನ್ಯಾಯಮೂರ್ತಿಗಳಾದ ಬಿಆರ್ ಗವಾಯಿ ಮತ್ತು ಕೆವಿ ವಿಶ್ವನಾಥನ್ ಅವರನ್ನು ಒಳಗೊಂಡ ನ್ಯಾಯಪೀಠ ಹೇಳಿದೆ.

ಜಗತ್ತಿನ ಮೂಲೆ ಮೂಲೆಯಲ್ಲಿ ಇರುವ ಭಕ್ತರ ಭಾವನೆಗಳಿಗೆ ಈ ಆರೋಪಗಳು ಧಕ್ಕೆ ಉಂಟುಮಾಡಿರುವ ಸಾಧ್ಯತೆ ಇದೆ ಎಂದ ಪೀಠ, ಆದರೆ ರಾಜಕೀಯ ಆರೋಪಗಳನ್ನು ತಾನು ಪರಿಗಣಿಸುವುದಿಲ್ಲ ಎಂದು ತಿಳಿಸಿದೆ.

ನಾವು ಆರೋಪಗಳು ಮತ್ತು ಪ್ರತ್ಯಾರೋಪಗಳ ಒಳ ಹೊಕ್ಕಿಲ್ಲ ಎಂಬುದನ್ನು ನಾವು ಸ್ಪಷ್ಟಪಡಿಸುತ್ತೇವೆ. ರಾಜಕೀಯ ಹಿನ್ನೆಲೆಯಲ್ಲಿ ನ್ಯಾಯಾಲಯವನ್ನು ಬಳಸಿಕೊಳ್ಳಲು ನಾವು ಅವಕಾಶ ನೀಡುವುದಿಲ್ಲ ಎಂದು ಆಂಧ್ರ ಪ್ರದೇಶದ ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷಗಳ ಕಡೆ ಸುಪ್ರೀಂ ಕೋರ್ಟ್ ಚಾಟಿ ಬೀಸಿದೆ. ಹಿಂದಿನ ಜಗನ್ ಮೋಹನ್ ರೆಡ್ಡಿ ನೇತೃತ್ವದ ವೈಎಸ್‌ಆರ್ ಕಾಂಗ್ರೇಸ್ ಪಕ್ಷವು ಕಳಪೆ ಹಾಗೂ ಕಲಬೆರಕೆ ತುಪ್ಪ ಮತ್ತು ಸಾಮಗ್ರಿಗಳನ್ನು ಬಳಸಿ ಲಡ್ಡು ತಯಾರಿಸಿದೆ ಎಂದು ಹಾಲಿ ಸಿಎಂ ಚಂದ್ರಬಾಬು ನಾಯ್ಡು ಅವರ ಟಿಡಿಪಿ ಆರೋಪಿಸಿದೆ.

ದೇವರ ಮೇಲೆ ನಂಬಿಕೆ ಭಕ್ತರ ಭಾವನೆಗಳಿಗೆ ಧಕ್ಕೆ

ಜನರ ಭಾವನೆಗಳಿಗೆ ಘಾಸಿ

ಈ ಆರೋಪಗಳು ವಿಶ್ವಾದ್ಯಂತ ಜನರ ಭಾವನೆಗಳನ್ನು ಘಾಸಿಗೊಳಿಸುವ ಸಾಮರ್ಥ್ಯವನ್ನು ಹೊಂದಿವೆ, ಆದರೆ ರಾಜಕೀಯ ಆರೋಪಗಳಿಗೆ ಹೋಗುವುದಿಲ್ಲ ಎಂದು ಪೀಠ ಹೇಳಿದೆ. 'ಆರೋಪ ಮತ್ತು ಪ್ರತ್ಯಾರೋಪಗಳ ವಿಚಾರಕ್ಕೆ ಹೋಗುವುದಿಲ್ಲ ಎಂದು ನಾವು ಸ್ಪಷ್ಟಪಡಿಸುತ್ತೇವೆ. ನ್ಯಾಯಾಲಯವನ್ನು ರಾಜಕೀಯಕ್ಕೆ ಬಳಸಲು ನಾವು ಅನುಮತಿಸುವುದಿಲ್ಲ' ಎಂದು ನ್ಯಾಯಮೂರ್ತಿ ಗವಾಯಿ ಹೇಳಿದರು.

ಸ್ವತಂತ್ರ ತನಿಖೆಯಿಂದ ವಿಶ್ವಾಸ

ಕೇಂದ್ರದ ಪರವಾಗಿ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ದೇಶದ ಮೂಲೆ ಮೂಲೆಯಿಂದ ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡುತ್ತಾರೆ. ಅಲ್ಲದೆ, ಆಹಾರ ಸುರಕ್ಷತಾ ಕಾರಣಗಳು ಕೂಡ ಇವೆ. ಹೀಗಾಗಿ ಈ ಘಟನೆಯನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದರು. ಆರೋಪಗಳಲ್ಲಿ ಹುರುಳಿದ್ದರೆ ಇದು ಬಹಳ ಗಂಭೀರ ಪ್ರಕರಣ ಎನ್ನುವುದರಲ್ಲಿ ಅನುಮಾನವೇ ಇಲ್ಲ ಎಂದು ನ್ಯಾಯಮೂರ್ತಿ ಗವಾಯಿ ಹೇಳಿದರು. ಆರೋಪದ ಕುರಿತು ಆಂಧ್ರ ಪ್ರದೇಶ ರಾಜ್ಯ ಎಸ್‌ಐಟಿ ತನಿಖೆ ನಡೆಸುವುದರಲ್ಲಿ ಯಾವ ತಪ್ಪೂ ಇಲ್ಲ. ಅದರ ಮೇಲೆ ಕೇಂದ್ರ ಅಧಿಕಾರಿಯ ನಿಗಾವಣೆ ಇರಿಸಬಹುದು ಎಂದು ಮೆಹ್ತಾ ಹೇಳಿದರು. ಆದರೆ ಸಿಬಿಐ, ರಾಜ್ಯ ಸರ್ಕಾರದ ಅಧಿಕಾರಿಗಳು ಮತ್ತು ಎಫ್‌ಎಸ್‌ಎಸ್‌ಎಐ ಅಧಿಕಾರಿಗಳನ್ನು ಒಳಗೊಂಡ ಸ್ವತಂತ್ರ ಎಸ್‌ಐಟಿ ತನಿಖೆಗೆ ಕೋರ್ಟ್ ಆದೇಶಿಸಿತು. ಆಹಾರ ಪರೀಕ್ಷೆಯಲ್ಲಿ ಎಫ್‌ಎಸ್‌ಎಸ್‌ಎಐ ಅತ್ಯಂತ ಪರಿಣತ ಸರ್ವೋಚ್ಚ ಸಂಸ್ಥೆ. ಈ ಘಟನೆಯನ್ನು ನಾವು ರಾಜಕೀಯ ನಾಟಕವನ್ನಾಗಿಸಲು ಬಯಸುವುದಿಲ್ಲ. ಸ್ವತಂತ್ರ ಸಂಸ್ಥೆಯ ತನಿಖೆ ನಡೆದರೆ ವಿಶ್ವಾಸ ಮೂಡುತ್ತದೆ ಎಂದು ನ್ಯಾ. ಗವಾಯಿ ಹೇಳಿದರು.

ತನಿಖೆಗೆ ಸಿಎಂ ಸ್ವಾಗತ

ತಿರುಪತಿ ಲಡ್ಡು ವಿಚಾರಣೆಗೆ ಸುಪ್ರೀಂಕೋರ್ಟ್ ಸಿಬಿಐ ನೇತೃತ್ವದ ವಿಶೇಷ ತನಿಖಾ ತಂಡದ ಮೂಲಕ ತನಿಖೆ ನಡೆಯಬೇಕು ಎನ್ನುವ ಆದೇಶವನ್ನು ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಸ್ವಾಗತಿಸಿದ್ದಾರೆ. ಸುಪ್ರೀಂಕೋರ್ಟ್ ಕ್ರಮ ಸ್ವಾಗತಾರ್ಹ. ಸತ್ಯ ಮೇವ ಜಯತೆ , ನಮೋ ವೆಂಕಟೇಶಾಯ ನಮಃ ಎಂದು ಟ್ವೀಟ್ ಮಾಡಿದ್ದಾರೆ.

ಆಂಧ್ರಪ್ರದೇಶದಲ್ಲಿ ಹಿಂದಿನ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ನೇತೃತ್ವದ ಸರ್ಕಾರ ತಿರುಪತಿ ಲಡ್ಡು ತಯಾರಿಕೆಯಲ್ಲಿ ಪ್ರಾಣಿಗಳ ಕೊಬ್ಬು ಹಾಗೂ ಗುಣಮಟ್ಟವಿಲ್ಲದ ತುಪ್ಪ ಬಳಸಿದೆ ಎಂಬ ಆರೋಪ ಕುರಿತು ಸಿಬಿಐ ಮೇಲ್ವಿಚಾರಣೆಯಲ್ಲಿ ಐವರು ಸದಸ್ಯರ ಸ್ವತಂತ್ರ ತಂಡ ರಚಿಸುವಂತೆ ಸುಪ್ರೀಂಕೋರ್ಟ್ ಇಂದು ಆದೇಶಿಸಿದೆ. ಎಸ್‌ಐಟಿಯಲ್ಲಿ ಸಿಬಿಐನ ಇಬ್ಬರು, ಮತ್ತು ಇಬ್ಬರು ರಾಜ್ಯ ಪೊಲೀಸ್ ಅಧಿಕಾರಿಗಳು ಮತ್ತು ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ–ಎಫ್‌ಎಸ್‌ಎಸ್‌ಎಐ ಒಬ್ಬ ಸದಸ್ಯರನ್ನು ಒಳಗೊಂಡಿದೆ. ಸ್ವತಂತ್ರ ತನಿಖೆ ನಡೆಸುವಂತೆ ಸಲ್ಲಿಸಿದ್ದ ಅರ್ಜಿ ವಿಚಾರಣೆ ಕೈಗೆತ್ತಿಕೊಂಡ ನ್ಯಾಯಮೂರ್ತಿಗಳಾದ ಬಿಆರ್ ಗವಾಯಿ ಮತ್ತು ಕೆವಿ ವಿಶ್ವನಾಥನ್ ಅವರನ್ನೊಳಗೊಂಡ ದ್ವಿಸದಸ್ಯ ಪೀಠ ಸಿಬಿಐ ನಿರ್ದೇಶಕರ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸುವಂತೆ ಸೂಚಿಸಿದೆ. ತಿರುಪತಿ ಲಡ್ಡು ವಿಷಯದ ಆರೋಪಗಳು ವಿಶ್ವಾದ್ಯಂತ ಜನರ ಭಾವನೆಗಳಿಗೆ ಧಕ್ಕೆ ತರುವ ಸಾಮರ್ಥ್ಯ ಹೊಂದಿವೆ ಎಂದು ಹೇಳಿರುವ ಸುಪ್ರೀಂಕೋರ್ಟ್, ಎಸ್‌ಐಟಿ ತನಿಖೆ ಸಿಬಿಐ ನಿರ್ದೇಶಕರು ಮೇಲ್ವಿಚಾರಣೆ ಮಾಡಲಿದ್ದಾರೆ ''ಕೋಟ್ಯಂತರ ಜನರ ಭಾವನೆಗಳನ್ನು ತಣಿಸುವ ಸಲುವಾಗಿ, ಪ್ರತಿನಿಧಿ ಒಳಗೊಂಡಿರುವ ಸ್ವತಂತ್ರ ಎಸ್‌ಐಟಿಯ ತನಿಖೆ ಸಮಗ್ರ ಮಾಹಿತಿ ನೀಡುವಂತೆ ನಿರ್ದೇಶಿಸಿದೆ.

ಮುಡಾ ಮಳ್ಳ ಮುಖ್ಯಮಂತ್ರಿ, ಭೂಗಳ್ಳ ಸಿಡಿ ಶಿವು ಉಪ ಮುಖ್ಯಮಂತ್ರಿ!

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯ ರಾಜಕಾರಣದಲ್ಲಿ ಟೀಕೆ ಟಿಪ್ಪಣಿಗಳು, ವಾಕ್ಸಮರ ಜೋರಾಗಿಯೇ ನಡೆದಿದೆ. ಅದರಲ್ಲೂ ಜೆಡಿಎಸ್ ಹಾಗೂ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಪ್ರತಿನಿತ್ಯ ಅವಕಾಶ ಸಿಕ್ಕಾಗಲೆಲ್ಲಾ ಸಿಎಂ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಮೇಲೆ ಪ್ರಹಾರ ನಡೆಸುತ್ತಲೇ ಬಂದಿದ್ದಾರೆ. ಸದ್ಯ ಜೆಡಿಎಸ್ ಟ್ವೀಟ್ ಒಂದನ್ನು ಮಾಡಿದ್ದು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ತೀವ್ರವಾಗಿ ಕಾಲೆಳೆದಿದ್ದಾರೆ.

ಡಿಕೆಶಿ–ಸಿದ್ದರಾಮಯ್ಯ ವಿರುದ್ಧ ಜೆಡಿಎಸ್ ಆಕ್ರೋಶ :ಜೆಡಿಎಸ್ ಪಕ್ಷದ ಅಧಿಕೃತ ಎಕ್ಸ್ ಖಾತೆಯಲ್ಲಿ ಟ್ವೀಟ್ ಒಂದನ್ನು ಮಾಡಿರುವ ಜೆಡಿಎಸ್ ಮುಡಾ ಮಳ್ಳ ಮುಖ್ಯಮಂತ್ರಿ! ಭೂಗಳ್ಳ ಸಿಡಿ ಶಿವು ಉಪ ಮುಖ್ಯಮಂತ್ರಿ!. ಇದು ಕನ್ನಡಿಗರಿಗೆ ಕಾಂಗ್ರೇಸ್ ಕೊಟ್ಟಿರುವ ಕಳಂಕಿತರ ಭಾಗ್ಯ!!! ಎಂದು ವ್ಯಂಗ್ಯವಾಗಿ ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಆಕ್ರೋಶ ಹೊರಹಾಕಿದ್ದಾರೆ.

ಇನ್ನೂ ಜೆಡಿಎಸ್ ಟ್ವೀಟ್‌ನಲ್ಲಿ ಕದ್ದ ವಾಚ್ ಕಟ್ಟಿದವರು ಯಾರು?. ಮುಡಾವನ್ನು ಮುಕ್ಕಿದ ಮುಖ್ಯಮಂತ್ರಿ ಯಾರು?. ಸೈಟುಗಳಿಗೆ ಬೆಲೆ ಕಟ್ಟಿದ ರಿಯಲ್ ಎಸ್ಟೇಟ್ ವ್ಯಾಪಾರಿ ಯಾರು? ಲೂಟಿ, ದಂಧೆಗಳ ಅಪರಾವತಾರ, ಗುತ್ತಿಗೆದಾರರನ್ನು ಹಿಂಸಿಸಿ ಕೊಳ್ಳೆ ಹೊಡೆದ ಕಲೆಕ್ಷನ್ ಕಿಂಗ್ ಡೂಪ್ಲಿಕೇಟ್ ಸಿಎಂ ಯಾರು? ಪ್ರವಾಹ ಸಂತ್ರಸ್ತರ ಹಣವನ್ನು, ಅದರಲ್ಲೂ ಜನರು ದೇಣಿಗೆ ಕೊಟ್ಟ ಹಣವನ್ನು ವಿಮಾನದ ಟಿಕೆಟ್ಟಿಗೆ, ಫೈವ್ ಸ್ಟಾರ್ ಹೋಟೆಲ್ ಮೋಜುಮಸ್ತಿಗೆ ಧಾರೆ ಎರೆದಿದ್ದು ಯಾರು? ಯಾವ ಪಕ್ಷ? ಹೇಳುವಿರಾ ಕಪಟಿ ಕುಮಾರಸ್ವಾಮಿ ಎಂದು ಕಾಂಗ್ರೇಸ್ ಪಕ್ಷವನ್ನು ಟ್ಯಾಗ್ ಮಾಡಿ ಹಲವು ಪ್ರಶ್ನೆಗಳನ್ನು ಕೇಳಿದ್ದಾರೆ.

ಒಂದು ಹೆಗಲ ಮೇಲೆ ರಿಯಲ್ ಎಸ್ಟೇಟ್ ರಾಮಯ್ಯ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಮಾತಾ ಅಮೃತಾನಂದಮಯೀ

ಸಾವಿರದೊಂಬೈನೂರಾ ತೊಂಭತ್ಮೂರರ ಆಚೀಚೆ. ಬೆಂಗಳೂರು ಬಸವನಗುಡಿ ಶಂಕರಮಠದಲ್ಲಿ ಅಮ್ಮನ ದರ್ಶನ. ರಾಮಕೃಷ್ಣ ವಿದ್ಯಾರ್ಥಿಮಂದಿರದಿಂದ ಅದೇ ಮಾರ್ಗವಾಗಿ ಸಂಸ್ಕೃತ ಕಾಲೇಜಿಗೆ ಹೋಗುತ್ತಿದ್ದೆ. ಎಲ್ಲರಂತೆ ಅಪ್ಪಿಕೊಳ್ಳುವ ಅಮ್ಮನ ಕಾಣುವಾಶೆ. ಭಕ್ತರ ಸರದಿಯಲ್ಲಿ ನಿಂತೆ. ಅಮ್ಮನಿಗಾಗ ನಲವತ್ತು. ಸಾವಿರಾರು ಹೆಣ್ಣುಗಂಡು ಭಕ್ತರನ್ನು ಅಪ್ಪಿಕೊಂಡು ಆಶೀರ್ವದಿಸುತ್ತಿದ್ದರು. ಕಾಮವಿಕಾರವಿಲ್ಲ, ಆಯಾಸವಿಲ್ಲ. ಮುಖದಲ್ಲಿ ಕುಂದದ ನಗು, ಹೃದಯದಲ್ಲಿ ಮಾತೃವಾತ್ಸಲ್ಯ. ಕಳಂಕ ತಾಗದಿರದು ಎಂದ ವರಸಂಖ್ಯೆ. ಆದರೆ ಅಮ್ಮ ಇದನ್ನೆಲ್ಲ ಹುಸಿಗೊಳಿಸಿ ಉತ್ತುಂಗಕ್ಕೇರಿದರು. ಕೇರಳದ ಸಣ್ಣ ಹಳ್ಳಿಯಲ್ಲಿ ಬಡ ಬೆಸ್ತರ ಕುಟುಂಬದಲ್ಲಿ ಹುಟ್ಟಿದ ಅಮ್ಮ ಮದುವೆ ನಿರಾಕರಿಸಿದರು. ಅಮೃತಾನಂದಮಯೀ ಮಠ, ಶಿಕ್ಷಣಸಂಸ್ಥೆ ಸ್ಥಾಪಿಸಿದರು. ಅವರಿಗೀಗ ಎಪ್ಪತ್ತೊಂದು. ದೇಶ ವಿದೇಶಗಳಲ್ಲಿ ಅವರ ಮಠ ಶಿಕ್ಷಣಸಂಸ್ಥೆ ಭಕ್ತಗಣ ವ್ಯಾಪಿಸಿವೆ. ಅಮೃತ ವಿಶ್ವವಿದ್ಯಾಪೀಠ ಅವರದ್ದೇ ವಿಶ್ವವಿದ್ಯಾಲಯ. ಎರಡು ಸಾವಿರದ ಹದಿನೈದರಲ್ಲಿ ಕೇಂದ್ರ ಸರ್ಕಾರದ ನಮಾಮಿ ಗಂಗೆಗೆ ಅಮ್ಮ ನೂರು ಕೋಟಿ ಕೊಟ್ಟರು. ಇದೀಗ ವಯನಾಡಿನ ಭೂಕುಸಿತ ಮುನ್ನೆಚ್ಚರಿಕೆ ವ್ಯವಸ್ಥೆಗೆ ಹದಿನೈದು ಕೋಟಿಯ ಯೋಜನೆ. ವಿಶ್ವದಾದ್ಯಂತ ಗೌರವ ಡಾಕ್ಟರೇಟ್ ಮುಂತಾದ ಅಸಂಖ್ಯ ಮನ್ನಣೆ ಹರಿದು ಬಂದಿವೆ. ಭಾರತದ ಸಂಸತ್ತಿನ ವಿಶ್ವರತ್ನ ಪುರಸ್ಕಾರ ಸಂದಿದೆ. ಆದರೂ ಕೆಲ ಅಪವಾದ ತಪ್ಪಿಲ್ಲ. ಅವನ್ನವರು ಲೆಕ್ಕಿಸಿಲ್ಲ. ಎರಡು ಸಾವಿರದೈದರಲ್ಲಿ ಬುದ್ಧಿಮಾಂದ್ಯ ಪವಿತ್ರನ್ ಇರಿತಕ್ಕೆ ಮುಂದಾದಾಗ ಕ್ಷಮಿಸಿದರು. ಒಬ್ಬ ಮಹಿಳೆ ಏನೆಲ್ಲ ಸಾಧಿಸಬಹುದೆಂಬುದಕ್ಕೆ ಅಮ್ಮ ಮಾದರಿ.

ಜಡ್ಜ್ ಮುಂದೇನೆ ಶಾಸಕ ಮುನಿರತ್ನ ರಕ್ತದ ಮಾದರಿ ಸಂಗ್ರಹ!

• **ಉದಯವಾಹಿನಿ, ಬೆಂಗಳೂರು**

ಮಹಿಳೆ ಮೇಲೆ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಆರ್ ಆರ್ ನಗರದ ಬಿಜೆಪಿ ಶಾಸಕ ಮುನಿರತ್ನ ಅವರ ಡಿಎನ್ ಎ ಪರೀಕ್ಷೆ ಮಾಡಿಸಲು ನ್ಯಾಯಾಧೀಶರ ಅನುಮತಿ ಕೇಳಲು ಎಸ್‌ಐಟಿ ಅಧಿಕಾರಿಗಳು ಬಂದಿದ್ದರು. ಈ ವೇಳೆ ನ್ಯಾಯಲಯ ಡಿಎನ್ ಎ ಪರೀಕ್ಷೆ ನಡೆಸಲು ಅನುಮತಿ ನೀಡಿತು.ನ್ಯಾಯಾಧೀಶರ ಸಮ್ಮುಖದಲ್ಲಿಯೇ ಮುನಿರತ್ನ ರಕ್ತದ ಮಾದರಿ ಸಂಗ್ರಹ ಮಾಡಲು ಮುಂದಾದರು. ಹೌದು ಎಸ್ ಐಟಿ ಅಧಿಕಾರಿಗಳು ವೈದ್ಯರೊಂದಿಗೆ ಕೋರ್ಟ್‌ಗೆ ಹಾಜರಾಗಿದ್ದರು. ಈ ವೇಳೆ ಮುನಿರತ್ನವ ಅವರು, ತಮ್ಮ ವಕೀಲರು ಬರಬೇಕು, ಅವರ ಮುಂದೆಯೇ ಸ್ಯಾಂಪಲ್ಸ್ ತೆಗೆದುಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ. ಮನವಿಯನ್ನ ಪುರಸ್ಕರಿಸಿ, ವಕೀಲರು ಬಂದ ಮೇಲೆ ಸ್ಯಾಂಪಲ್ಸ್ ತೆಗೆದುಕೊಳ್ಳಲು ಎಸ್‌ಐಟಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.ಬಳಿಕ ಶಾಸಕ ಮುನಿರತ್ನ ಅವರ ವಕೀಲರು ಕೋರ್ಟಿಗೆ ಆಗಮಿಸಿದ್ದಾರೆ.ಈ ವೇಳೆ ನ್ಯಾಯಾಧೀಶರು ಮುನಿರತ್ನ ಅವರ ರಕ್ತದ ಮಾದರಿ ಸಂಗ್ರಹಿಸಲು ಸೂಚನೆ ನೀಡಿದ್ದಾರೆ. ಹಾಗಾಗಿ ನ್ಯಾಯಾಧೀಶರ ಮುಂದೆ ಶಾಸಕ ಮುನಿರತ್ನ ಅವರ ರಕ್ತದ ಮಾದರಿಯನ್ನು ಸಂಗ್ರಹಿಸಲಾಗಿದೆ ಎಂದು ತಿಳಿದುಬಂದಿದೆ.

ಕಾಂಪೌಂಡ್ ಗೋಡೆ ಕುಸಿದು ಓರ್ವ ಕಾರ್ಮಿಕ ಸಾವು, ಮತ್ತೊರ್ವನಿಗೆ ಗಾಯ!

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನಲ್ಲಿ ನಿರ್ಮಾಣ ಹಂತದ ಕಾಂಪೌಂಡ್ ಕುಸಿದು ಬಿದ್ದು ಕೂಲಿ ಕಾರ್ಮಿಕ ಸಾವನ್ನಪ್ಪಿರುವ ಘಟನೆ ಆನೇಕಲ್ಲಿನ ಬೊಮ್ಮಸಂದ್ರ ಕೈಗಾರಿಕಾ ಪ್ರದೇಶದಲ್ಲಿ ಈ ಒಂದು ಅವಘಡ ಸಂಭವಿಸಿದೆ. ರಾಯಚೂರು ಜಿಲ್ಲೆಯ ದೇವದುರ್ಗ ಮೂಲದ ಪರಶುರಾಮ (24) ಸಾವನ್ನಪ್ಪಿದ್ದಾನೆ ಎಂದು ತಿಳಿದುಬಂದಿದೆ. ಈ ವೇಳೆ ಮತ್ತೊಬ್ಬ ಕಾರ್ಮಿಕನಿಗೆ ಗಂಭೀರವಾದ ಗಾಯಗಳಾಗಿದ್ದು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಪೈಪ್ ಅಳವಡಿಕೆಗೆ ಮಣ್ಣು ಹಾಗೆ ಇರುವಾಗ ಕಾಂಪೌಂಡ್ ಕುಸಿದು ಬಿದ್ದಿದೆ. ರಾಯಚೂರು ಮೂಲದ ಐದರಿಂದ ಆರು ಕಾರ್ಮಿಕರು ಕೆಲಸ ಮಾಡುತ್ತಿದ್ದರು.ಈ ವೇಳೆ ಏಕಾಏಕಿ ಕಾರ್ಮಿಕರ ಮೇಲೆ ಕಾಂಪೌಂಡ್ ಗೋಡೆ ಕುಸಿದು ಬಿದ್ದಿದೆ ಹೆಬ್ಬಗೋಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೆಸ್ಕಾಂ ಆನ್‌ಲೈನ್ ಸೇವೆಯಲ್ಲಿ ವ್ಯತ್ಯಯ!

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ ಮಾಹಿತಿ ತಂತ್ರಜ್ಞಾನ ವ್ಯವಸ್ಥೆಯ ಉನ್ನತೀಕರಣದ ಹಿನ್ನೆಲೆಯಲ್ಲಿ ಆನ್‌ಲೈನ್ ಸೇವೆಗಳು ಅಕ್ಟೋಬರ್ 5 ನಾಳೆ, ಅಕ್ಟೋಬರ್.6ರ ನಾಡಿದ್ದು ಲಭ್ಯ ಇರುವುದಿಲ್ಲ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.ಐಟಿ ಅಪ್ಲಿಕೇಶನ್‌ಗಳ ಉನ್ನತೀಕರಣಕ್ಕೆ ಸಮಯ ನಿಗದಿಯಾಗಿರುವ ಹಿನ್ನೆಲೆಯಲ್ಲಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ ಅಪ್ಲಿಕೇಶನ್ ಸೇವೆಗಳು ಅಕ್ಟೋಬರ್ 5, 6 ರಂದು ಲಭ್ಯ ಇರುವುದಿಲ್ಲ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.ಐಪಿಡಿಎಸ್ ಐಟಿ ಹಂತ-2ರ ಯೋಜನೆಯ ಭಾಗವಾಗಿ ಆರ್‌ಎಪಿಡಿಆರ್‌ಪಿ ಅಪ್ಲಿಕೇಷನ್ ಸೇವೆ ಲಭ್ಯ ಇರುವುದಿಲ್ಲ. ಸಿಸ್ಟಂ ಡೌನ್‌ಟೈಮ್ ಅಕ್ಟೋಬರ್ 4ರ ರಾತ್ರಿ 9ರಿಂದ ಆರಂಭವಾಗಿ 7ರ ಬೆಳಗ್ಗೆ 6ಕ್ಕೆ ಕೊನೆಗೊಳ್ಳುತ್ತದೆ. ಐಟಿ ಮೂಲಸೌಕರ್ಯ ವರ್ಧನೆ ಮತ್ತು ಕಾರ್ಯಾಚರಣೆ ಪ್ರದೇಶಗಳಲ್ಲಿ ಸೇವೆಯ ಗುಣಮಟ್ಟ ಸುಧಾರಿಸುವ ನಿಟ್ಟಿನಲ್ಲಿ ಬೆಸ್ಕಾಂ ಈ ಕಾರ್ಯ ಕೈಗೊಂಡಿದೆ.

ರಾಷ್ಟ್ರೀಕೃತ ಬ್ಯಾಂಕ್ ಸಿಬ್ಬಂದಿಗಳ ಮನೆ ಮೇಲೆ ಇಡಿ ದಾಳಿ

• **ಉದಯವಾಹಿನಿ, ಬೆಂಗಳೂರು**

ಬೆಳ್ಳಂಬೆಳಗ್ಗೆ ಇಡಿ ಅಧಿಕಾರಿಗಳು ರಾಷ್ಟ್ರೀಕೃತ ಬ್ಯಾಂಕ್ ಸಿಬ್ಬಂದಿಗಳಿಗೆ ಶಾಕ್ ನೀಡಿದ್ದು, ಬೆಳಿಗ್ಗೆ ಏಕಾಏಕಿ ದೆಹಲಿಯ ಇಡಿ ಅಧಿಕಾರಿಗಳಿಂದ ರಾಷ್ಟ್ರೀಕೃತ ಬ್ಯಾಂಕ್ ಸಿಬ್ಬಂದಿಗಳ ಮೇಲೆ ದಾಳಿ ನಡೆದಿದೆ.ಹೌದು ರಾಷ್ಟ್ರೀಕೃತ ಬ್ಯಾಂಕ್ ಸಿಬ್ಬಂದಿಗಳ ಮನೆಯ ಮೇಲೆ ಇಡಿ ಅಧಿಕಾರಿಗಳು ಇಂದು ದಾಳಿ ನಡೆಸಿದ್ದು, ಬೆಂಗಳೂರಿನ 5 ಕಡೆ ದಾಳಿ ನಡೆಸಿ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ದೆಹಲಿಯ ಇಡಿ ಅಧಿಕಾರಿಗಳ ತಂಡದಿಂದ ದಾಳಿ ಮಾಡಲಾಗಿದೆ ಎಂದು ತಿಳಿದುಬಂದಿದ್ದು, ಸಿಬ್ಬಂದಿಗಳ ಮನೆಯಲ್ಲಿ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.ದಾಳಿಯ ಕುರಿತಂತೆ ಅಧಿಕಾರಿಗಳಿಂದ ಇನ್ನಷ್ಟು ಮಾಹಿತಿ ನಿರೀಕ್ಷಿಸಲಾಗುತ್ತಿದೆ.

ಗ್ರಾಮ ಆಡಳಿತಾಧಿಕಾರಿಗಳ ಮುಷ್ಕರ ವಾಪಸ್

• **ಉದಯವಾಹಿನಿ, ಬೆಂಗಳೂರು**

ಕಳೆದು ಒಂದು ವಾರಗಳಿಂದ ತಮ್ಮ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ರಾಜ್ಯಾಧ್ಯಂತ ಗ್ರಾಮ ಆಡಳಿತಾಧಿಕಾರಿಗಳು ಪ್ರತಿಭಟನೆ ನಡೆಸುತ್ತಿದ್ದರು. ಇಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಜೊತೆಗಿನ ಮಾತುಕತೆ ಸಕ್ಸಸ್ ಆಗಿರುವ ಕಾರಣ, ಮುಷ್ಕರವನ್ನು ವಾಪಾಸ್ ಪಡೆದಿದ್ದಾರೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆಯಲ್ಲಿ ಕಂದಾಯ ಸಚಿವ ಕೃಷ್ಣಬೈರೇಗೌಡ ಮಾಹಿತಿ ನೀಡಿದ್ದು, ಕಳೆದ ಒಂದು ವಾರದಿಂದ ಪ್ರತಿಭಟನೆ ನಿರತರಾಗಿದ್ದ ಗ್ರಾಮ ಆಡಳಿತ ಅಧಿಕಾರಿಗಳು ಇಂದು ನನ್ನನ್ನು ಭೇಟಿಯಾಗಿ ಚರ್ಚಿಸಿದರು. ಎಲ್ಲರೂ ಒಟ್ಟಾಗಿ ಜನಪರ ಕೆಲಸಕ್ಕೆ ಮುಂದಾಗೋಣ ಎಂಬ ಮಾತನ್ನು ಗೌರವಿಸಿ ತಮ್ಮ ಹೋರಾಟವನ್ನು ಹಿಂಪಡೆದಿದ್ದಾರೆ ಎಂದು ತಿಳಿಸಿದ್ದಾರೆ.

ಈ ವೇಳೆ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ಅಧ್ಯಕ್ಷರು ಕಾರ್ಯದರ್ಶಿ ಹಾಗೂ ಪದಾಧಿಕಾರಿಗಳನ್ನು ಒಳಗೊಂಡ ತಂಡ ಸಚಿವ ಕೃಷ್ಣಬೈರೇಗೌಡ ಅವರಿಗೆ ಹೂಗುಚ್ಚ ನೀಡಿ ಸಂತಸ ವ್ಯಕ್ತಪಡಿಸಿದರು ಎಂದಿದ್ದಾರೆ.

ಬಿಡಿಎ ಭೂ ವಿವಾದ: ಆರೋಪಗಳಿಗೆ ಆರ್.ಅಶೋಕ್ ತಿರುಗೇಟು

ನನ್ನ ವರ್ಚಸ್ಸಿಗೆ ಕಳಂಕ ತರುವ ಪ್ರಯತ್ನ, ನ್ಯಾಯಾಲಯದ ಮೆಟ್ಟಿಲೇರುವ ಮುನ್ನವೇ ಜಮೀನು ವಾಪಸ್

• **ಉದಯವಾಹಿನಿ, ಬೆಂಗಳೂರು**

ಕಾಂಗ್ರೇಸ್ ಸರ್ಕಾರದ ನಾಲ್ವರು ಸಚಿವರು ನನ್ನ ಬಗ್ಗೆ ಕಳಂಕ ಸೃಷ್ಟಿಸಲು ಹಳೆಯ ಪ್ರಕರಣದ ಬಗ್ಗೆ ಮಾತನಾಡಿದ್ದಾರೆ. ಇದರಲ್ಲಿ ನೈತಿಕತೆಯ ಪ್ರಶ್ನೆ ಎತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮುಡಾ ಹಗರಣದಲ್ಲಿ ಅರಿಶಿನ-ಕುಂಕುಮದ ಮೂಲಕ ಭೂಮಿ ಬಂದಿದೆ.

ಆದರೆ ನಾನು ಹಣ ಕೊಟ್ಟು ಭೂಮಿ ಖರೀದಿ ಮಾಡಿದ್ದೇನೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ತಿರುಗೇಟು ನೀಡಿದ್ದಾರೆ.

ತಮ್ಮ ಮೇಲಿನ ಆರೋಪಕ್ಕೆ ಸ್ಪಷ್ಟನೆ ನೀಡಿದ ಅವರು, ನನ್ನನ್ನು ಭೂ ಕಬಳಿಕೆದಾರ ಎಂದು ಕರೆದಿರುವ ಕಾಂಗ್ರೆಸ್‌ನ ನಾಲ್ಕು ಸಚಿವರು ನೈತಿಕತೆಯ ಪ್ರಶ್ನೆ ಎತ್ತಿದ್ದಾರೆ.

ಆದರೆ ಇದೇ ಕಾಂಗ್ರೆಸ್‌ನ ಕೇಂದ್ರ ಸರ್ಕಾರ ಅಂದು ನೇಮಿಸಿದ್ದ ರಾಜ್ಯಪಾಲರು ಮತ್ತು ಘನ ನ್ಯಾಯಾಲಯ ನಾನು ತಪ್ಪಿತಸ್ಥ ಅಲ್ಲ ಎಂದು ಅಭಿಪ್ರಾಯಪಟ್ಟಿದೆ. ಆದರೂ ಕಾಂಗ್ರೆಸ್‌ಪಕ್ಷ ನ್ಯಾಯಾಲಯಕ್ಕಿಂತ ದೊಡ್ಡದಾಗಲು ಯತ್ನಿಸಿ ತೀರ್ಪು ನೀಡಲು ಮುಂದಾಗಿದೆ ಎಂದು ಹೇಳಿದರು.

ಕಾಂಗ್ರೇಸ್ ಪಕ್ಷ ನ್ಯಾಯಾಲಯಕ್ಕಿಂತ ದೊಡ್ಡದಲ್ಲ

ಇದು ನನ್ನ ವರ್ಚಸ್ಸಿಗೆ ಕಳಂಕ ತರುವ ಪ್ರಯತ್ನ ಎಂದು ಬಣ್ಣಿಸಿರುವ ಬಿಜೆಪಿಯ ಹಿರಿಯ ನಾಯಕ, ಭೂ ವ್ಯವಹಾರದಲ್ಲಿ ಎಲ್ಲವೂ ಕಾನೂನು ಬದ್ಧವಾಗಿದೆ. ಈ ಪ್ರಕರಣದ ಬಗ್ಗೆ ಆರೋಪ ಬಂದಾಗ ರಾಜ್ಯದಲ್ಲಿ ಕಾಂಗ್ರೆಸ್‌ನ ಕೇಂದ್ರ ಸರ್ಕಾರವೇ ನೇಮಿಸಿದ ರಾಜ್ಯಪಾಲ ಹಂಸರಾಜ್ ಭಾರಧ್ವಾಜ್ ಇದ್ದರು. ಅವರು ಕೂಡ ಈ ಪ್ರಕರಣವನ್ನು ತನಿಖೆಗೆ ವಹಿಸಿಲ್ಲ. ಅಷ್ಟೇ ಅಲ್ಲದೆ ನ್ಯಾಯಾಲಯ ಕೂಡ ಇದರ ವಿರುದ್ಧ ತನಿಖೆ ಮಾಡಿಸಲು ಮುಂದಾಗಲಿಲ್ಲ. ರಾಜ್ಯಪಾಲರು ಹಾಗೂ ನ್ಯಾಯಾಲಯವೇ ನಾನು ತಪ್ಪಿತಸ್ಥ ಅಲ್ಲ ಎಂದು ಅಭಿಪ್ರಾಯಪಟ್ಟರೆ, ಕಾಂಗ್ರೇಸ್‌ಪಕ್ಷ ಮಾತ್ರ ಇದರಲ್ಲಿ ತೀರ್ಪು ನೀಡಲು ಮುಂದಾಗಿದೆ.

ಅಂದರೆ ಕಾಂಗ್ರೇಸ್‌ಪಕ್ಷ ತನ್ನನ್ನು ನ್ಯಾಯಾಲಯಕ್ಕಿಂತ ದೊಡ್ಡದು ಎಂದುಕೊಂಡಿದೆ ಎಂದು ವ್ಯಂಗ್ಯವಾಡಿದರು.

ಗೃಹ ಸಚಿವ ಡಾ.ಜಿ.ಪರಮೇಶ್ವರ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್, ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಅಶೋಕ ಲೊಟ್ಟೆಗೊಲ್ಲಹಳ್ಳಿಯಲ್ಲಿ ಅಕ್ರಮವಾಗಿ ಜಮೀನು ಖರೀದಿಸಿ ಲೋಕಾಯುಕ್ತದಲ್ಲಿ ಪ್ರಕರಣ ದಾಖಲಾದ ನಂತರ ಗಿಫ್ಟ್ ಡೀಡ್ ಮೂಲಕ ಬಿಡಿಎಗೆ ಮರಳಿಸಿದ್ದಾರೆ ಎಂದು ಆರೋಪಿಸಿದರು.

ಅಶೋಕ ಅವರು ಕಾನೂನಾತ್ಮಕವಾಗಿ ಜಮೀನು ಖರೀದಿಸಿದ್ದರೂ ಹಳೆಯ ಪ್ರಕರಣದ ಬಗ್ಗೆ ಕಾಂಗ್ರೇಸ್‌ನಾಯಕರು ತಮ್ಮ ಹೆಸರನ್ನು ಹಾಳು ಮಾಡಲು ಚರ್ಚೆ ನಡೆಸುತ್ತಿದ್ದಾರೆ. ಪ್ರಕರಣ ನ್ಯಾಯಾಲಯದ ಮೆಟ್ಟಿಲೇರುವ ಮುನ್ನವೇ ಜಮೀನು ವಾಪಸ್ ನೀಡಿದ್ದೆ ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕರಣದಲ್ಲಿ ಹೈಕೋರ್ಟ್ ಆದೇಶದ ನಂತರ ನಿವೇಶನಗಳನ್ನು ವಾಪಸ್ ನೀಡಲಾಗಿದೆ ಎಂದು ಬಿಜೆಪಿ ಮುಖಂಡರು ಹೇಳಿದ್ದಾರೆ.

ಮಾಜಿ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಹಾಗೂ ಕಾಂಗ್ರೇಸ್ ಮುಖಂಡ ಹಾಗೂ ಮಾಜಿ ಸ್ಪೀಕರ್ ಕೆ.ಬಿ.ಕೋಳಿವಾಡ್ ಕೂಡ ಸಿಎಂ ರಾಜೀನಾಮೆ ನೀಡುವಂತೆ ಸೂಚಿಸಿದ್ದಾರೆ ಎಂದರು. ನೀವು ಆರೋಪಗಳನ್ನು ಎದುರಿಸುತ್ತಿರುವಾಗ, ನೀವು ಅದನ್ನು ನ್ಯಾಯಾಲಯದಲ್ಲಿ ಪರಿಹರಿಸಿಕೊಳ್ಳಬೇಕು ಮತ್ತು ಪ್ರತಿಪಕ್ಷ ನಾಯಕರ ವಿರುದ್ಧ ಸೇಡಿನ ರಾಜಕೀಯವನ್ನುಮಾಡಬಾರದು ಎಂದು ಕಾಂಗ್ರೇಸ್ ನಾಯಕರಿಗೆ ಅಶೋಕ್ ತಿವಿದಿದ್ದಾರೆ.

ತ್ರೈಮಾಸಿಕದಲ್ಲಿ ಬೆಂಗಳೂರಿನಲ್ಲಿ ವಸತಿ ಬೆಲೆ ಏರಿಕೆ

• **ಉದಯವಾಹಿನಿ, ಬೆಂಗಳೂರು**

ಜುಲೈ-ಸೆಪ್ಟೆಂಬರ್ ತ್ರೈಮಾಸಿಕದಲ್ಲಿ (ಕ್ಯೂ 3, 2024) ಬೆಂಗಳೂರಿನಲ್ಲಿ ವಸತಿ ಬೆಲೆಗಳು ವರ್ಷದಿಂದ ವರ್ಷಕ್ಕೆ ಶೇಕಡಾ 10 ರಷ್ಟು ಏರಿಕೆಯಾಗಿದ್ದು, ಪ್ರೀಮಿಯಂ ಮನೆಗಳತ್ತ ಗಮನ ಹರಿಸುತ್ತಿರುವುದರಿಂದ ಭಾರತದ ಎಂಟು ದೊಡ್ಡ ನಗರಗಳಲ್ಲಿ ತೀವ್ರ ಏರಿಕೆ ಕಂಡಿದೆ ಎಂದು ವರದಿಯೊಂದು ತಿಳಿಸಿದೆ. ಟಿಕ್ ಹಬ್ 2023 ರ ಮೂರನೇ ತ್ರೈಮಾಸಿಕದಿಂದ ಶೇಕಡಾ 95 ರಷ್ಟು ಬೆಳವಣಿಗೆಯೊಂದಿಗೆ 1 ಕೋಟಿ ರೂ.ಗಿಂತ ಹೆಚ್ಚಿನ ವಿಭಾಗದಲ್ಲಿ ಮುಂಚೂಣಿಯಲ್ಲಿದೆ ಎಂದು ಪ್ರಾಪರ್ಟಿ ಕನ್ಸಲ್ಟೆನ್ಸಿ ನೈಟ್ ಫ್ರಾಂಕ್ ಇಂಡಿಯಾ ಗುರುವಾರ ತಿಳಿಸಿದೆ.

ಈ ವಿಭಾಗವು ಒಟ್ಟಾರೆ ವಸತಿ ಮಾರುಕಟ್ಟೆಯಲ್ಲಿ ಮುಂಚೂಣಿಯಲ್ಲಿದ್ದು, ಎಲ್ಲಾ ಮಾರಾಟಗಳಲ್ಲಿ ಶೇಕಡಾ 46 ರಷ್ಟಿದೆ ಮತ್ತು 2024 ರ ಮೂರನೇ ತ್ರೈಮಾಸಿಕದಲ್ಲಿ 40,328 ಯುನಿಟ್ ಗಳನ್ನು ಮಾರಾಟ ಮಾಡುವ ಮೂಲಕ ಶೇಕಡಾ 41 ರಷ್ಟು ಏರಿಕೆಯಾಗಿದೆ.

ಆದಾಗ್ಯೂ, ಐಷಾರಾಮಿ ಅಥವಾ ಪ್ರೀಮಿಯಂ ವಿಭಾಗಗಳಿಂದ ನಡೆಸಲ್ಪಡುವ ವಸತಿ ಮಾರಾಟವು

ಉದಯವಾಹಿನಿ ಚಿತ್ರ

ದೀರ್ಘಾವಧಿಯಲ್ಲಿ ಸುಸ್ಥಿರವಲ್ಲ ಮತ್ತು ಕೈಗೆಟುಕುವ ವಸತಿ ಪುನರುಜ್ಜೀವನಗೊಳ್ಳಬೇಕಾಗಿದೆ ಎಂದು ನೈಟ್ ಫ್ರಾಂಕ್ ಎಚ್ಚರಿಸಿದೆ. ಮಾರುಕಟ್ಟೆಯ ಐಷಾರಾಮಿ ಅಂತ್ಯವು ರಿಯಲ್ ಎಸ್ಟೇಟ್ ಉದ್ಯಮವನ್ನು ಉಳಿಸಿಕೊಳ್ಳಲು ಸಾಧ್ಯವಾಗುವುದಿಲ್ಲ, ಮಧ್ಯಮದಿಂದ ಕೆಳ ತುದಿಯೂ ಪುಟಿದೇಳಬೇಕಾಗುತ್ತದೆ, ಅದು ಸಂಭವಿಸುತ್ತದೆ ಎಂದು ನೈಟ್ ಫ್ರಾಂಕ್ನ ಹಿರಿಯ ಕಾರ್ಯನಿರ್ವಾಹಕ ನಿರ್ದೇಶಕ ಗುಲಾಮ್ ಜಿಯಾ ಹೇಳಿದರು.

ಎಚ್ ಡಿ ಕುಮಾರಸ್ವಾಮಿ ವಿರುದ್ಧ ಜೀವ ಬೆದರಿಕೆ ಕೇಸ್

• **ಉದಯವಾಹಿನಿ, ಬೆಂಗಳೂರು**

ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ವಿರುದ್ಧ 50 ಕೋಟಿ ರೂಪಾಯಿ ಆರೋಪ ಕೇಳಿಬಂದಿದ್ದು, ಈ ಕುರಿತು ಬೆಂಗಳೂರಿನ ಅಮೃತಹಳ್ಳಿ ಪೊಲೀಸ್ ಠಾಣೆಯಲ್ಲಿ ನಿನ್ನೆ ಎಚ್ ಡಿ ಕುಮಾರಸ್ವಾಮಿ ವಿರುದ್ಧ ಉದ್ಯಮಿ ವಿಜಯ್ ತಾತಾ ಎಫ್‌ಐಆರ್ ದಾಖಲಿಸಿದ್ದಾರೆ. ಈ ಕುರಿತಂತೆ ಅಮೃತಹಳ್ಳಿ ಠಾಣೆಯ ಪೊಲೀಸರು ಉದ್ಯಮಿ ವಿಜಯ್ ತಾತಾಗೆ ಆರೋಪ ಮಾಡಿರುವ ಕುರಿತು ದಾಖಲೆ ನೀಡಿ ಎಂದು ನೋಟಿಸ್ ನೀಡಿದ್ದಾರೆ.

ಹೌದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರ ವಿರುದ್ಧ ಆರೋಪಿಸಿದೂರಿನ ಸಂಬಂಧ ದಾಖಲೆ ಒದಗಿಸುವಂತೆ ವಿಜಯ್ ತಾತಾಗೆ ಅಮೃತ ಹಳ್ಳಿಯ ಪೊಲೀಸರು ದಾಖಲೆ ಒದಗಿಸುವಂತೆ ನೋಟಿಸ್ ನೀಡಿದ್ದಾರೆ. ರಮೇಶ್ ಗೌಡ ಬಂದಿದ್ದ ಬಗ್ಗೆ ಟೆಕ್ನಿಕಲ್ ಎವಿಡೆನ್ಸ್ ಹಾಗೂ ಹಣ ಕೇಳಿದರ ಬಗ್ಗೆ ಏನಾದರೂ ದಾಖಲೆಗಳಿದ್ದರೆ ನೀಡುವಂತೆ ನೋಟಿಸ್ ನೀಡಿದ್ದಾರೆ ಎಂದು ತಿಳಿದುಬಂದಿದೆ. ಹಣ ಕೇಳಿರುವುದರ ಕುರಿತು ಪ್ರೂವ್ ಮಾಡುತ್ತೇನೆ ಇನ್ನು ವಿಜಯ್ ತಾತಾ ಅವರು ಪ್ರಕರಣದ ಕುರಿತಂತೆ ನನ್ನ ವಿರುದ್ಧ 100 ಕೋಟಿ ರೂಪಾಯಿ ಆರೋಪ ಕೇಳಿ ಬಂದಿದೆ. ಇಂತದಕ್ಕೆಲ್ಲ ಅರ್ಥ ಬೇಡ್ವಾ ಕೇಂದ್ರ ಸಚಿವರ ಹತ

ಚನ್ನಪಟ್ಟಣ ಗೆಲ್ಲಲು ಕನಕಪುರ ಬಂಡೆಯಿಂದ ಅಭಿವೃದ್ಧಿ ಮಂತ್ರ

ಅಭ್ಯರ್ಥಿ ಬಗ್ಗೆ ಆಲೋಚಿಸುತ್ತಿಲ್ಲ, ಇಲ್ಲಿ ನಾನೇ ಅಭ್ಯರ್ಥಿ ಎಂದು ಭಾವಿಸಿ ಮತ ಹಾಕಿ ಎಂದು ನಮ್ಮ ಕಾರ್ಯಕರ್ತರಲ್ಲಿ ಮನವಿ

• ಉದಯವಾಹಿನಿ ಚನ್ನಪಟ್ಟಣ

ಚನ್ನಪಟ್ಟಣ ಕ್ಷೇತ್ರವನ್ನ ಗೆಲ್ಲುವ ನಿಟ್ಟಿನಲ್ಲಿ ಕನಕಪುರ ಬಂಡೆ ಡಿ ಕೆ ಶಿವಕುಮಾರ್ ಅಭಿವೃದ್ಧಿ ಕಾರ್ಯಗಳಿಗೆ ಮುಂದಾಗಿದ್ದು, ಚನ್ನಪಟ್ಟಣದ ಪ್ರತಿ ಪಂಚಾಯ್ತಿಯಲ್ಲಿ 2 ಕೋಟಿಯಿಂದ 5-6 ಕೋಟಿವರೆಗೂ ಅನುದಾನ ನೀಡಿ ಅಭಿವೃದ್ಧಿ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಚನ್ನಪಟ್ಟಣದ ವಿವಿಧ ಪಂಚಾಯ್ತಿ ಮಟ್ಟದಲ್ಲಿ ಅನೇಕ ಕಾಮಗಾರಿಗಳಿಗೆ ಚಾಲನೆ ನೀಡಿದ ವೇಳೆ ಶಿವಕುಮಾರ್ ಅವರು ಮಾಧ್ಯಮಗಳ ಜೊತೆಗೆ ಮಾತನಾಡಿ, ಚನ್ನಪಟ್ಟಣದಲ್ಲಿ 300 ಕೋಟಿಗೂ ಹೆಚ್ಚಿನ ಅನುದಾನದ ಅಭಿವೃದ್ಧಿ ಯೋಜನೆಗಳನ್ನು ನಮ್ಮ ಸರ್ಕಾರ ಕೈಗೆತ್ತಿಕೊಂಡಿದೆ.

ಈ ತಾಲ್ಲೂಕಿನ ಜನರಿಗೆ 5 ಸಾವಿರ ಮನೆಗಳನ್ನು ಮಂಜೂರು ಮಾಡಿ, ಫಲಾನುಭವಿಗಳಿಗೆ ಹಂಚಲಾಗುತ್ತಿದೆ. ಪ್ರತಿ ಪಂಚಾಯ್ತಿಯಲ್ಲಿ 100, 150 ಮನೆಗಳನ್ನು ನೀಡಲಾಗುತ್ತಿದೆ. ಇನ್ನು ನೀರಾವರಿ ಕಾಲುವೆ ಅಭಿವೃದ್ಧಿ, ಕೆರೆ ನೀರು ತುಂಬಿಸುವ ಕೆಲಸ ನಡೆಯಲಿದೆ.

> ಇಡೀ ಮೈಸೂರು ತುಂಬಾ ವಿದ್ಯುತ್ ದೀಪಾಲಂಕಾರ ಮಾಡಲಾಗಿದೆ. ಅದರ ಸೌಂದರ್ಯವನ್ನು ರಾಜ್ಯದ ಜನತೆ ಕಣ್ಣುತುಂಬಿಕೊಳ್ಳಬೇಕು. ದಸರಾ ಮಹೋತ್ಸವವನ್ನು ಬಹಳ ವಿಜೃಂಭಣೆಯಿಂದ ಆಚರಿಸಲಾಗುತ್ತಿದ್ದು ರಾಜ್ಯದ ಎಲ್ಲಾ ಭಾಗಗಳಿಂದ ಜನ ಆಗಮಿಸಿ ಈ ಭವ್ಯ ಆಚರಣೆಯ ಭಾಗವಾಗಬೇಕು ಎಂದು ಮನವಿ ಮಾಡುತ್ತೇನೆ -ಡಿ ಕೆ ಶಿವಕುಮಾರ್

ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾ ರೆಡ್ಡಿ ಇಡೀ ದಿನ ಅನೇಕ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದ್ದಾರೆ. ಶುಕ್ರವಾರ ನಾನು ಹಾಗೂ ರಾಮಲಿಂಗಾ ರೆಡ್ಡಿ ಅವರು ಸೇರಿ ಪಂಚಾಯ್ತಿ ಮಟ್ಟದ ಕಾಮಗಾರಿಗಳ ಉದ್ಘಾಟನೆ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಉದಯವಾಹಿನಿ ಚಿತ್ರ

ಪ್ರತಿ ಪಂಚಾಯ್ತಿಗೆ 2-5 ಕೋಟಿ ಅನುದಾನ

ಕುಮಾರಸ್ವಾಮಿ ಅವರ ವಿರುದ್ಧ 50 ಕೋಟಿ ವಸೂಲಿ ಆರೋಪ ಹಾಗೂ ಎಫ್‌ಐಆರ್ ದಾಖಲಾಗಿರುವ ಕುರಿತು ಮಾತನಾಡಿ, ಗುರುವಾರ ನಡೆದ ದಸರಾ ಮಹೋತ್ಸವದ ಉದ್ಘಾಟನೆ ಕಾರ್ಯಕ್ರಮಗಳಲ್ಲಿ ನಿರತವಾಗಿದ್ದೆ. ಶುಕ್ರವಾರ ಚನ್ನಪಟ್ಟಣ ಪ್ರವಾಸ ಮಾಡುತ್ತಿದ್ದೇನೆ. ಹೀಗಾಗಿ ಈ ಬಗ್ಗೆ ನನಗೆ ಮಾಹಿತಿ ಇಲ್ಲ. ಅವರ ಖಾಸಗಿ ವಿಚಾರಕ್ಕೆ ನಾವು ಹಸ್ತಕ್ಷೇಪ ಮಾಡುವುದಿಲ್ಲ ಎಂದು ಹೇಳಿದರು. ಜಾತಿ ಗಣತಿ ವಿಚಾರವಾಗಿ ಡಿ.ಕೆ. ಸುರೇಶ್ ಅವರ ಹೇಳಿಕೆ ಕುರಿತು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ, ಪಕ್ಷದ ನೀತಿಯಂತೆ ನಾವು ಈ ವಿಚಾರದಲ್ಲಿ ತೀರ್ಮಾನ ಮಾಡುತ್ತೇವೆ. ಎಲ್ಲಾ ಸಮುದಾಯಗಳಿಗೂ ನಾವು ನ್ಯಾಯ ಒದಗಿಸಿಕೊಡುತ್ತೇವೆ.

ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ

ಈ ವರದಿಯಲ್ಲಿ ಏನಾದರೂ ನ್ಯೂನ್ಯತೆ ಇದ್ದರೆ ಸಿದ್ದರಾಮಯ್ಯ, ನಾನು ಹಾಗೂ ನಮ್ಮ ಪಕ್ಷದ ನಾಯಕರು ಕೂತು ಸರಿಪಡಿಸುತ್ತೇವೆ. ಈ ವಿಚಾರವಾಗಿ ಗೊಂದಲ ಮಾಡಿಕೊಳ್ಳುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಒಂದು ವಾರದಲ್ಲಿ ಉಪಚುನಾವಣೆ ದಿನಾಂಕ ಪ್ರಕಟ

ಮುಂದಿನ ಒಂದು ವಾರದಲ್ಲಿ ಉಪಚುನಾವಣೆ ದಿನಾಂಕ ಪ್ರಕಟವಾಗಲಿದ್ದು, ಅಭ್ಯರ್ಥಿ ಆಯ್ಕೆ ಕುರಿತು ಮಾತನಾಡಿ, ನಾವು ಅಭ್ಯರ್ಥಿ ಬಗ್ಗೆ ಆಲೋಚಿಸುತ್ತಿಲ್ಲ. ಇಲ್ಲಿ ನಾನೇ ಅಭ್ಯರ್ಥಿ ಎಂದು ಭಾವಿಸಿ ಮತ ಹಾಕಿ ಎಂದು ನಮ್ಮ ಕಾರ್ಯಕರ್ತರಲ್ಲಿ ಮನವಿ ಮಾಡುತ್ತೇನೆ. ವ್ಯಕ್ತಿ ಹಾಗೂ ಸರ್ಕಾರ ನಾನೇ ಆಗಿದ್ದು, ಅಭ್ಯರ್ಥಿಗಿಂತ ನನ್ನ ಮುಖ ನೋಡಿ ಮತ ಹಾಕಿ ಎಂದು ಮತದಾರರಲ್ಲಿ ಮನವಿ ಮಾಡುತ್ತೇನೆ ಎಂದು ತಿಳಿಸಿದರು.

ಹಳ್ಳಿಗಾಡಿನವರಿಗೆ ಉಚಿತ ಆರೋಗ್ಯ ಶಿಬಿರ ಸಹಕಾರಿ

• ಉದಯವಾಹಿನಿ, ಬೇತಮಂಗಲ

ಉಚಿತ ಆರೋಗ್ಯ ಶಿಬಿರಗಳಿಂದ ಸಾಮಾನ್ಯ ದುರ್ಬಲ ವರ್ಗದ ಹಳ್ಳಿಗಾಡಿನಲ್ಲಿ ನೆಲೆಸಿರುವವರಿಗೆ ಅನುಕೂಲವಾಗಲಿದೆ ಇಂತಹ ಶಿಬಿರಗಳು ಪ್ರತಿ ಗ್ರಾಮಗಳಲ್ಲಿ ನಡೆಸುವ ಮೂಲಕ ಸೇವೆಯನ್ನು ವಿಸ್ತರಿಸಬೇಕೆಂದು ಗ್ರಾಪಂ ಅಧ್ಯಕ್ಷೆ ಸೊಣ್ಣಮ್ಮ ರಮೇಶ್ ಹೇಳಿದರು. ಪಟ್ಟಣದ ಬಳಿಯ ಹುಲ್ಕೂರು ಗ್ರಾಪಂಯ ಆಶ್ರಯದಲ್ಲಿ ವೈದೇಹಿ ಆಸ್ಪತ್ರೆಯ ಸಹಯೋಗದಲ್ಲಿ ಗುಟ್ಟಹಳ್ಳಿಯ ಬಸ್ ನಿಲ್ದಾಣದಲ್ಲಿ ಹಮ್ಮಿಕೊಂಡಿದ್ದ ಉಚಿತ ವೈದ್ಯಕೀಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ, ಗ್ರಾಮೀಣ ಮಟ್ಟದಲ್ಲಿ ವಾಸವಿರುವವರಿಗೆ ಆರೋಗ್ಯದ ಕಡೆ ಹೆಚ್ಚಿನ ಅರಿವು ಇಲ್ಲ, ಆದ್ದರಿಂದ ಇಂತಹ ಉಚಿತ ಆರೋಗ್ಯ ಶಿಬಿರಗಳನ್ನು ಆಯೋಜಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಸೊಣ್ಣಮ್ಮ ರಮೇಶ್, ಉಪಾಧ್ಯಕ್ಷೆ ಸುಧಾರಾಣಿ ಶಿವಕುಮಾರ್, ಸದಸ್ಯರಾದ ಕಾರಿ ಚಲಪತಿ, ಜಯರಾಮರೆಡ್ಡಿ, ಮಂಜುನಾಥರೆಡ್ಡಿ, ಅನೇಕ ಸದಸ್ಯರು ಮುಖಂಡರು, ಗ್ರಾಪಂ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ವೈದೇಹಿ ಆಸ್ಪತ್ರೆಯ ವೈದ್ಯರು ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

> ಇಂತಹ ಉಚಿತ ಆರೋಗ್ಯ ಶಿಬಿರದಿಂದ ಬಡವರಿಗೆ ಅನುಕೂಲವಾಗಲಿದ್ದು, ಕೀಲು ಸಂಬಂಧಿತ ಇಸಿಜಿ, ರಕ್ತ ಪರೀಕ್ಷೆ ಸೇರಿದಂತೆ ವಿವಿಧ ಕಾಯಿಲೆಗಳ ಪರೀಕ್ಷೆಯನ್ನು ಹೆಚ್ಚಿನ ಸಂಖ್ಯೆಯಲ್ಲಿ ಪಡೆದುಕೊಂಡಿದ್ದು, ಇಂತಹ ಸಾಮಾಜಿಕ ಕಾರ್ಯಕ್ರಮಗಳಿಗೆ ಗ್ರಾಪಂಯು ಸದಾ ಸಹಕಾರ ನೀಡುತ್ತದೆ -ಪಿಡಿಒ ಮಂಜುನಾಥ್

ಅ.17 ರಂದು ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

• ಉದಯವಾಹಿನಿ ಮಂಡ್ಯ

ಜಿಲ್ಲಾಡಳಿತದ ವತಿಯಿಂದ ಅ.17ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿ ಕಾವೇರಿ ಸಭಾಂಗಣದಲ್ಲಿ ಮಹರ್ಷಿ ವಾಲ್ಮೀಕಿ ಅವರ ಜಯಂತಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಕುಮಾರ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯ ಸಂಬಂಧ ಅಧಿಕಾರಿಗಳು ಹಾಗೂ ಸಂಘ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಪೂರ್ವಭಾವಿ ಸಿದ್ಧತಾ ಸಭೆ ನಡೆಸಿ ಮಾತನಾಡಿದರು.

ಪೂರ್ವಭಾವಿ ಸಿದ್ಧತಾ ಸಭೆ

ಮಹರ್ಷಿ ವಾಲ್ಮೀಕಿ ಅವರ ಕೊಡುಗೆ, ಸಾಧನೆ ಅಪಾರ. ಅವರ ಮೌಲ್ಯಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು. ಸಂಘ ಸಂಸ್ಥೆಗಳ ಮುಖ್ಯಸ್ಥರು ಹೆಚ್ಚಿನ ಜನರನ್ನು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಸಂಘಟಿಸಬೇಕು ಎಂದು ಹೇಳಿದರು.

ಅ.17ರಂದು ಬೆಳಿಗ್ಗೆ 9.30 ಗಂಟೆಯಿಂದ ಸಿಲ್ವರ್ ಜುಬ್ಲಿ ಪಾರ್ಕ್‌ನಿಂದ ಜಿಲ್ಲಾ ಪಂಚಾಯಿತಿವರೆಗೆ ಮೆರವಣಿಗೆ ನಡೆಯಲಿದೆ. ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ವೀರಗಾಸೆ ಸೇರಿದಂತೆ ವಿವಿಧ ಕಲಾತಂಡಗಳು ಭಾಗವಹಿಸಲಿದೆ. ಇದರೊಂದಿಗೆ ಪೂರ್ಣಕುಂಭ ಹೊತ್ತ ಮಹಿಳೆಯರು ಭಾಗವಹಿಸಿ ಮೆರವಣಿಗೆಗೆ ವಿಶೇಷ ಮೆರುಗು ನೀಡಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಕುಡಿಯುವ ನೀರು ಹಾಗೂ ಊಟದ ವ್ಯವಸ್ಥೆಯಾಗಬೇಕು. ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಯ ಮುದ್ರಣ ಹಾಗೂ ವಿತರಣೆಯ ಕೆಲಸವಾಗಬೇಕು ಎಂದರು.

ಸಭೆಯಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಕೆ.ಎನ್ ಕೇಶವಮೂರ್ತಿ, ಸಮಾಜ ಕಲ್ಯಾಣಾಧಿಕಾರಿ ಸಿದ್ದಲಿಂಗೇಶ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಚ್.ಶಿವರಾಮೇಗೌಡ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ರಾಘವೇಂದ್ರ, ಬಿ.ಇ.ಒ ಮಹಾದೇವ, ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೋಮಲ್ ಕುಮಾರ್ ಎಸ್.ಎಸ್, ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ ಕಾವ್ಯಾ, ನಗರಸಭೆ ಪರಿಸರ ಎಂಜಿನಿಯರ್ ರುದ್ರೇಗೌಡ ಇದ್ದರು.

ಉದಯವಾಹಿನಿ ಚಿತ್ರ

> ಜಿಲ್ಲೆಯಲ್ಲಿ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ.ಯಲ್ಲಿ ಅತಿ ಹೆಚ್ಚು ಅಂಕಗಳಿಸಿದವರಿಗೆ ಸನ್ಮಾನ ಮಾಡಲಾಗುವುದು ಮತ್ತು ಕೃಷಿ, ಶಿಕ್ಷಣ ಹಾಗೂ ಸಾಹಿತ್ಯ ಸೇರಿದಂತೆ ಒಟ್ಟು ಐದು ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿರುವವರನ್ನು ಗುರುತಿಸಿ ವೇದಿಕೆ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು -ಜಿಲ್ಲಾಧಿಕಾರಿ

ತಾಲ್ಲೂಕು ಆಡಳಿತ ವತಿಯಿಂದ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಶಿಡ್ಲಘಟ್ಟ

ಮಹರ್ಷಿ ವಾಲ್ಮೀಕಿ ಜಯಂತಿ ಯಾವುದೋ ಒಂದು ವರ್ಗ ಅಥವಾ ಪಕ್ಷಕ್ಕೆ ಸೀಮಿತಗೊಳಿಸದೆ ಎಲ್ಲರೂ ಸೇರಿ ಅರ್ಥಪೂರ್ಣವಾಗಿ ಆಚರಿಸಲು ಸಹಕಾರ ನೀಡಬೇಕು ಎಂದು ಶಾಸಕ ಬಿ.ಎನ್. ರವಿಕುಮಾರ್ ಹೇಳಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ ವತಿಯಿಂದ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಮಹರ್ಷಿ ವಾಲ್ಮೀಕಿ ಸೇರಿದಂತೆ ವಿವಿಧ ಮಹನೀಯರ ಜಯಂತಿ ವಿಜೃಂಭಣೆಯಿಂದ ಮಾಡುವ ಬದಲಿಗೆ ಅರ್ಥಪೂರ್ಣವಾಗಿ ಆಚರಿಸಿದಾಗ ಮಾತ್ರ ಜಯಂತಿ ಆಚರಣೆಗೆ ಗೌರವ ಬರಲಿದೆ ಎಂದರು. ಬೆಳಿಗ್ಗೆ 8ಕ್ಕೆ ತಾಲ್ಲೂಕಿನ ತಲಕಾಯಲಬೆಟ್ಟದಲ್ಲಿರುವ ಮಹರ್ಷಿ ವಾಲ್ಮೀಕಿ ದೇವಾಲಯದಲ್ಲಿ ಗಣ್ಯರಿಂದ ಪೂಜೆ ಸಲ್ಲಿಸಲಾಗುತ್ತದೆ. ನಂತರ ನಗರದ ಮಯೂರ ವೃತ್ತದಲ್ಲಿರುವ ವಾಲ್ಮೀಕಿ ದೇವಾಲಯದಿಂದ ಸಾಂಸ್ಕೃತಿಕ ಕಲಾತಂಡಗಳು ಹಾಗೂ ಪೂರ್ಣಕುಂಭದೊಂದಿಗೆ ಪಲ್ಲಕ್ಕಿ ಮೆರವಣಿಗೆ ಪ್ರಮುಖ ರಸ್ತೆಗಳ ಮೂಲಕ ಸಾಗಿ ತಾಲ್ಲೂಕು ಕಚೇರಿ ಮುಂಭಾಗದಲ್ಲಿನ ವೇದಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ತೀರ್ಮಾನಿಸಲಾಯಿತು.

ತಾಲ್ಲೂಕು ಪಂಚಾಯಿತಿ ಇಒ ಹೇಮಾವತಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಜಗದೀಶ್, ಸಮುದಾಯದ ಹಿರಿಯ ಮುಖಂಡ ಎನ್.ಮುನಿಯಪ್ಪ, ನಗರಸಭೆ ಪೌರಾಯುಕ್ತ ಮಂಜುನಾಥ್, ಜೆಡಿಎಸ್ ಮುಖಂಡ ತಾದೂರು ರಘು ಸಮುದಾಯದ ಮುಖಂಡರು ಇದ್ದರು.

> ಸ್ತ್ರೀ-ಪುರುಷ ಸರಿಸಮಾನತೆಯೊಂದಿಗೆ ಕಲ್ಯಾಣ ರಾಜ್ಯದ ಆಶಯ ಹೊಂದಿದ್ದ ಮಹರ್ಷಿ ವಾಲ್ಮೀಕಿಯು ರಾಮಾಯಣದಲ್ಲಿ ವಿವಿಧ ಪಾತ್ರಗಳ ಮೂಲಕ ಬದುಕಿನ ಪ್ರತಿ ಹಂತದಲ್ಲೂ ಅನುಸರಿಸಬೇಕಾದ ನೀತಿ ಬೋಧಿಸಿದ್ದು ಪ್ರತಿಯೊಬ್ಬರೂ ಅವರ ಆದರ್ಶ ಮೈಗೂಡಿಸಿಕೊಳ್ಳಬೇಕು. ಇದೇ ಅಕ್ಟೋಬರ್ 17ರಂದು ನಡೆಯಲಿರುವ ಮಹರ್ಷಿ ವಾಲ್ಮೀಕಿ ಜಯಂತಿ ಅರ್ಥಪೂರ್ಣವಾಗಿ ಆಚರಿಸಲು ಸಮುದಾಯದ ಮುಖಂಡರು ಶ್ರಮಿಸಬೇಕು
- ಬಂಕ್ ಮುನಿಯಪ್ಪ, ಸಮುದಾಯದ ಹಿರಿಯ ಮುಖಂಡ, ಜಿ.ಪಂ ಮಾಜಿ ಸದಸ್ಯ

> ಕ್ಷೇತ್ರದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯನ್ನು ಈ ಹಿಂದಿನಂತೆ ಅರ್ಥಪೂರ್ಣವಾಗಿ ಆಚರಿಸಲು ತಾಲ್ಲೂಕು ಆಡಳಿತ ಸಂಪೂರ್ಣ ಸಹಕಾರ ನೀಡಲಿದೆ -ಬಿ.ಎನ್.ಸ್ವಾಮಿ, ತಹಶೀಲ್ದಾರ್

ನಗದು, ಡಿವಿಆರ್ ಕದ್ದೊಯ್ದ ಕಳ್ಳರು: ಪತ್ರದ ಮೂಲಕ ಬೆದರಿಕೆ

• ಉದಯವಾಹಿನಿ, ಚಾಮರಾಜನಗರ

ನಗರದಲ್ಲಿ ಒಂದೇ ದಿನ ಮೂರು ವಾಣಿಜ್ಯ ಮಳಿಗೆಗಳಲ್ಲಿ ಕಳವು ನಡೆದಿದ್ದು ಸ್ಥಳೀಯ ವ್ಯಾಪಾರಿಗಳಲ್ಲಿ ಭೀತಿ ಹುಟ್ಟಿಸಿದೆ. ಭುವನೇಶ್ವರಿ ವೃತ್ತದ ಬಳಿ ಇರುವ ಸ್ವಾಗತ್ ಟ್ರೇಡರ್ಸ್, ಪ್ರಭು ಎಲೆಕ್ಟ್ರಿಕಲ್ಸ್, ವಿನಯ್ ಮೋಟರ್ಸ್‌ನಲ್ಲಿ ಕಳ್ಳತನ ನಡೆದಿದೆ. ಸ್ವಾಗತ್ ಟ್ರೇಡರ್ಸ್‌ನ ಕಿಟಕಿಯ ಗಾಜು ಒಡೆದು ವಾಷ್‌ರೂಂ ಮೂಲಕ ಒಳಪ್ರವೇಶಿಸಿ ಕ್ಯಾಷ್ ಕೌಂಟರ್‌ನಲ್ಲಿದ್ದ 20 ರಿಂದ 30 ಸಾವಿರ ನಗದು ದೋಚಲಾಗಿದೆ. ಪ್ರಭು ಎಲೆಕ್ಟ್ರಿಕಲ್ ಹಾಗೂ ವಿನಯ್ ಮೋಟರ್ಸ್‌ನಲ್ಲೂ ಕ್ಯಾಷ್ ಕೌಂಟರ್‌ನಲ್ಲಿದ್ದ ನಗದು ಕಳವು ಮಾಡಲಾಗಿದೆ.

ಡಿವಿಆರ್ ಹೊತ್ತೊಯ್ದ ಕಳ್ಳರು: ಪೊಲೀಸರಿಗೆ ಕಳ್ಳತನದ ಸಾಕ್ಷ್ಯ ಸಿಗಬಾರದು ಎಂಬ ಉದ್ದೇಶದಿಂದ ಕಳವು ನಡೆದ ಮೂರು ಮಳಿಗೆಗಳ ಸಿಸಿಟಿವಿ ಕ್ಯಾಮೆರಾಗಳ ಡಿವಿಆರ್‌ಗಳನ್ನು ಹೊತ್ತೊಯ್ಯಲಾಗಿದೆ.

ಸ್ಥಳಕ್ಕೆ ಶ್ವಾನದಳ ಹಾಗೂ ಬೆರಳಚ್ಚು ತಜ್ಞರು ಭೇಟಿನೀಡಿ ಪರಿಶೀಲಿಸಿದ್ದಾರೆ. ಕೊಳ್ಳೇಗಾಲ, ಮೈಸೂರು ಹಾಗೂ ಬೆಂಗಳೂರಿನಲ್ಲಿ ಇದೇ ಮಾದರಿಯಲ್ಲಿ ಕಳವು ನಡೆದಿರುವ ಮಾಹಿತಿ ಲಭ್ಯವಾಗಿದ್ದು ಶೀಘ್ರ ಆರೋಪಿಯನ್ನು ಬಂಧಿಸುವುದಾಗಿ ಪೊಲೀಸರು ತಿಳಿಸಿದ್ದಾರೆ.

ಉದಯವಾಹಿನಿ ಚಿತ್ರ

ಪತ್ರದ ಮೂಲಕ ಬೆದರಿಕೆ: ಅಂಗಡಿ ಮಳಿಗೆಗಳಿಗೆ ಹಾಕಿರುವ ಸಿಸಿಟಿವಿ ಕ್ಯಾಮೆರಾಗಳನ್ನು ತೆಗೆದುಹಾಕುವಂತೆ ನಗರದ ಮೂವರು ವ್ಯಾಪಾರಿಗಳಿಗೆ ಬೆದರಿಕೆ ಪತ್ರ ಬರೆಯಲಾಗಿದೆ. ಅಂಗಡಿ ಬೀದಿಯಲ್ಲಿರುವ ಎಂ.ಕೆ.ಸುಬ್ರಹ್ಮಣ್ಯ, ಎಂ.ಕೆ. ಶ್ರೀನಿವಾಸ್, ವಾಸುಕಿ ಸುಬ್ರಹ್ಮಣ್ಯ ಅವರಿಗೆ ಬರೆದಿರುವ ಪತ್ರದಲ್ಲಿ 'ತಕ್ಷಣ ನಿಮ್ಮ ಅಂಗಡಿಯ ಹೊರಭಾಗದಲ್ಲಿ ಹಾಕಿರುವ ಸಿಸಿಟಿವಿ ಕ್ಯಾಮೆರಾಗಳನ್ನು ತೆಗೆದುಹಾಕಬೇಕು, ತೆಗೆಯದಿದ್ದರೆ ಯಾವ ರೂಪದಲ್ಲಾದರೂ ಕೆಡಕು ಮಾಡಲು ನಮ್ಮ ಸಂಘ ಸದಾ ಕಾರ್ಯಪ್ರವೃತ್ತವಾಗಿರಲಿದೆ. ಉದಾಸೀನ ಮಾಡಿದರೆ ಅಥವಾ ಕಾನೂನು ಮೊರೆಹೋದರೆ ಪರಿಣಾಮ ಭೀಕರವಾಗಿರಲಿದೆ' ಎಂದು ಎಚ್ಚರಿಕೆ ನೀಡಲಾಗಿದೆ.

ಸಂವಿಧಾನದ ಅಪವ್ಯಾಖಾನ ಅಪಾಯಕಾರಿ ಎಚ್.ಎನ್.ನಾಗಮೋಹನ್ ದಾಸ್ ಕಳವಳ

• ಉದಯವಾಹಿನಿ, ಮಡಿಕೇರಿ

ದೇಶದಲ್ಲಿ ಸಂವಿಧಾನದ ಅಪವ್ಯಾಖ್ಯಾನ ಮಾಡುತ್ತಿರುವುದು ಹಾಗೂ ಅದನ್ನು ಅಪ್ರಸ್ತುತಗೊಳಿಸಲು ಯತ್ನಿಸುತ್ತಿರುವುದು ಅಪಾಯಕಾರಿ ಎಂದು ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನದಾಸ್ ಅಭಿಪ್ರಾಯಪಟ್ಟರು.

ನಗರದಲ್ಲಿ ಮಾನವ ಬಂಧುತ್ವ ವೇದಿಕೆಯ ಕೊಡಗು ಜಿಲ್ಲಾ ಸಂಚಾಲನಾ ಸಮಿತಿ, ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ಏರ್ಪಡಿಸಿದ್ದ 'ಭಾರತೀಯ ದಂಡ ಸಂಹಿತೆ ಅವಲೋಕನ ಮತ್ತು ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸಂವಿಧಾನವನ್ನು ಬದಲಾಯಿಸುತ್ತೇವೆ, ನಾವು ಬಂದಿರುವುದೇ ಸಂವಿಧಾನ ಬದಲಾಯಿಸಲು ಎಂದು ಕೆಲವು ನಾಯಕರು ಹಿಂದೆ ಹೇಳುತ್ತಿದ್ದರು. ಆದರೆ, ಯಾವುದೇ ತಿದ್ದುಪಡಿಯಾದರೂ ಅದು ಸಂವಿಧಾನದ ಮೂಲತತ್ವಗಳಿಗೆ ವಿರುದ್ಧವಾಗಿರಬಾರದು, ಸಂವಿಧಾನದ ಪೀಠಿಕೆಯೂ ಅದರ ಭಾಗವೇ ಆಗಿದೆ ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿದ ನಂತರ ದೇಶದಲ್ಲಿ ಸಂವಿಧಾನದ ಅಪವ್ಯಾಖ್ಯಾನ ಹೆಚ್ಚುತ್ತಿದೆ' ಎಂದು ಆತಂಕ ವ್ಯಕ್ತಪಡಿಸಿದರು.

'ಅನೇಕ ಸಂಸದರನ್ನು ಸಂಸತ್‌ನಿಂದ ಅಮಾನತು ಮಾಡಿದ್ದ ಸಂದರ್ಭದಲ್ಲಿ ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎ), ಭಾರತೀಯ ಸಾಕ್ಷ್ಯ ಸಂಹಿತಾ (ಬಿಎಸ್‌ಎ) ಹಾಗೂ ಭಾರತೀಯ ನಾಗರಿಕ ಸುರಕ್ಷಾ ಸಂಹಿ

ಅಂತರಾಳದಿಂದ... EDITORIAL

ಜಾತಿ ಗಣತಿ ವರದಿ-ಒಳಮೀಸಲಾತಿ

ರಾಜ್ಯ ಸರಕಾರ ಯಾರಿಗೆ ಹೆದರುತ್ತಿದೆ?

ಜಾತಿ ಗಣತಿ ವರದಿ ಜಾರಿಗೊಳಿಸಿಯೇ ಸಿದ್ಧ ಎಂದು ಇತ್ತೀಚಿನ ಸಮಾರಂಭವೊಂದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಜಾತಿ ಗಣತಿ ವರದಿಯನ್ನು ಜಾರಿಗೊಳಿಸುವಲ್ಲಿ ಸಿದ್ದರಾಮಯ್ಯ ಅವರನ್ನು ಈವರೆಗೆ ತಡೆದವರು ಯಾರು ಎನ್ನುವುದನ್ನು ಮಾತ್ರ ಅವರು ಸ್ಪಷ್ಟಪಡಿಸಿಲ್ಲ. 'ಈ ಹಿಂದೆ ನಡೆಸಿದ್ದ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷಾ ವರದಿ ನನ್ನ ಕೈ ಸೇರಿದ್ದು ಶೀಘ್ರದಲ್ಲೇ ಕ್ಯಾಬಿನೆಟ್‌ನಲ್ಲಿ ಇಟ್ಟು ಜಾರಿಗೆ ತರುತ್ತೇನೆ. ಜಾತಿ ಗಣತಿ ವರದಿ ನಮ್ಮ ಪಕ್ಷದ ಅಜೆಂಡಾ ಎಂದು ಅವರು ಹೇಳಿಕೊಂಡಿದ್ದಾರೆ. ಇಂತಹ ಹೇಳಿಕೆಯನ್ನು ಈ ಹಿಂದೆಯೂ ಹಲವು ಬಾರಿ ಅವರು ನೀಡಿರುವುದರಿಂದ, ಈ ಬಾರಿ ಅದನ್ನು ಯಾರೂ ಗಂಭೀರವಾಗಿ ತೆಗೆದುಕೊಂಡಂತಿಲ್ಲ ವಿಪರ್ಯಾಸವೆಂದರೆ, ದೇಶದಲ್ಲೇ ಮೊದಲಿಗೆ ಜಾತಿ ಗಣತಿಯನ್ನು ನಡೆಸಿರುವುದು ಕರ್ನಾಟಕ. ನಮ್ಮ ರಾಜ್ಯದಲ್ಲಿ ನಡೆದ ಬಳಿಕ ಬಿಹಾರದಲ್ಲಿ ಈ ಗಣತಿ ನಡೆಯಿತು. ಆದರೆ, ವರದಿ ಮೊದಲು ಮಂಡನೆಯಾದದ್ದು ಬಿಹಾರದಲ್ಲಿ 2015ರಲ್ಲಿ ಸಿದ್ದರಾಮಯ್ಯ ಸರಕಾರವೇ ಜಾತಿ ಗಣತಿಗೆ ಆದೇಶ ನೀಡಿತ್ತು. ಆದರೆ ಈ ವರದಿಯನ್ನು ಸ್ವೀಕರಿಸಲು ಆ ಬಳಿಕದ ಸರಕಾರಗಳು ಹಿಂದೇಟು ಹಾಕಿದವು ವಿಪರ್ಯಾಸವೆಂದರೆ, ಕಾಂಗ್ರೇಸ್‌ನೇತೃತ್ವದ ಮೈತ್ರಿ ಸರಕಾರದ ಅವಧಿಯಲ್ಲೂ ಜಾತಿ ಗಣತಿ ವರದಿ ನನೆಗುದಿಗೆ ಬಿತ್ತು. ಇದೇ ಸಂದರ್ಭದಲ್ಲಿ ಜಾತಿ ಗಣತಿಯ ಅಧಿಕೃತತೆಯನ್ನು ಕೆಲವರು ಪ್ರಶ್ನಿಸತೊಡಗಿದರು. ವರದಿ ಸೋರಿಕೆಯಾಗಿದೆ ಎನ್ನುವುದು ಕೆಲವರ ಆರೋಪವಾಗಿದ್ದರೆ, ಸಮೀಕ್ಷೆಗೆ ಬಳಸಿರುವ ಮಾನದಂಡವೇ ಸರಿಯಿಲ್ಲ ಎಂದು ಕೆಲವರು ತಕರಾರು ತೆಗೆದರು. ಅವರಿಗೆ ಜಾತಿ ಗಣತಿ ವರದಿಯನ್ನು ಸರಕಾರ ಸ್ವೀಕರಿಸುವುದೇ ಬೇಡವಾಗಿತ್ತು. ಕಾಂಗ್ರೇಸ್‌ತನ್ನ ಒಳಗಿರುವ ನಾಯಕರಿಗೆ ಹೆದರಿಯೇ ಜಾತಿ ಗಣತಿ ವರದಿಯನ್ನು ಸ್ವೀಕರಿಸಲು ಹಿಂದೇಟು ಹಾಕುತ್ತಾ ಬಂದಿದೆ. ಜೆಡಿಎಸ್ ಮುಖಂಡ ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾಗಿದ್ದಾಗಲೂ ಜಾತಿ ಗಣತಿ ವರದಿಗೆ ಮುಕ್ತಿ ದೊರಕಲಿಲ್ಲ. ಬಿಜೆಪಿಯಂತೂ ಜಾತಿ ಗಣತಿಯ ವಿರುದ್ಧ ಬಹಿರಂಗವಾಗಿ ಹೇಳಿಕೆ ನೀಡುತ್ತಾ ಬಂದಿರುವುದರಿಂದ, ಅದು ವರದಿಯನ್ನು ಸ್ವೀಕರಿಸಿ ಜಾರಿಗೊಳಿಸುವ ಪ್ರಶ್ನೆಯೇ ಬರುವುದಿಲ್ಲ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೇಸ್‌ಭರ್ಜರಿ ಬಹುಮತ ಪಡೆದು ಸಿದ್ದರಾಮಯ್ಯ ಅವರು ಮತ್ತೆ ರಾಜ್ಯದ ಮುಖ್ಯಮಂತ್ರಿಯಾದ ಬೆನ್ನಿಗೇ ಜಾತಿ ಗಣತಿ ವರದಿ ಮುನ್ನೆಲೆಗೆ ಬಂತು. ಈ ಬಾರಿ ವರದಿಯನ್ನು ಸ್ವೀಕರಿಸಲೇ ಬೇಕಾದ ಅನಿವಾರ್ಯ ಕಾಂಗ್ರೇಸ್‌ಸರಕಾರಕ್ಕೆ ಎದುರಾಯಿತು. ಆದರೆ ಸರಕಾರದಲ್ಲಿ ಅತ್ಯುನ್ನತ ಸ್ಥಾನದಲ್ಲಿರುವ ಒಕ್ಕಲಿಗ ಮತ್ತು ಲಿಂಗಾಯತ ಮುಖಂಡರು ತಮ್ಮ ತಮ್ಮ ಜಾತಿ ಸಭೆಗಳಲ್ಲಿ ಈ ಜಾತಿಗಣತಿಗೆ ವಿರೋಧ ವ್ಯಕ್ತಪಡಿಸಿದರು. ಈ ಎಲ್ಲ ವಿರೋಧಗಳ ನಡುವೆಯೇ ಕಳೆದ ಫೆಬ್ರವರಿ ತಿಂಗಳಲ್ಲಿ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರು ಕಾಂತರಾಜು ಸಮಿತಿ ದತ್ತಾಂಶ ಪ್ರಕಾರ ಸಿದ್ಧಪಡಿಸಿದ ವರದಿಯನ್ನು ಮುಖ್ಯಮಂತ್ರಿಗೆ ಸಲ್ಲಿಸಿದರು. ಪರಿಶಿಷ್ಟ ಜಾತಿ, ವರ್ಗ, ಹಿಂದುಳಿದ ವರ್ಗಗಳು ಸೇರಿದಂತೆ ಎಲ್ಲ ಸಮುದಾಯಗಳ ಜನಸಂಖ್ಯೆ ಮತ್ತು ಅವರ ಶೈಕ್ಷಣಿಕ, ಸಾಮಾಜಿಕ ಸ್ಥಾನಮಾನಗಳನ್ನು ಈ ಸಮೀಕ್ಷೆ ಒಳಗೊಂಡಿರುವುದರಿಂದ ನಾಡಿನ ಒಟ್ಟು ಅಭಿವೃದ್ಧಿಯ ರೂಪುರೇಷೆಯಲ್ಲಿ ಈ ವರದಿ ಮಹತ್ವದ ಪಾತ್ರವನ್ನು ವಹಿಸುತ್ತದೆ. ಆದುದರಿಂದ, ವರದಿ ಸ್ವೀಕರಿಸಿದ ಬೆನ್ನಿಗೇ ಅದನ್ನು ಸಂಪೂರ್ಣ ಅಧ್ಯಯನ ಮಾಡಿ, ಸಂಪುಟದಲ್ಲಿ ಮಂಡಿಸುವ ಕೆಲಸವನ್ನು ಮುಖ್ಯಮಂತ್ರಿ ಆದ್ಯತೆಯ ಮೇಲೆ ಮಾಡಬೇಕಾಗಿತ್ತು ವರದಿ ಸ್ವೀಕರಿಸಿದ ಸಂದರ್ಭದಲ್ಲಿ ವರದಿಯನ್ನು ಸಂಪುಟದ ಮುಂದಿಟ್ಟು ಚರ್ಚೆ ನಡೆಸಿ ಮುಂದಿನ ತೀರ್ಮಾನವನ್ನು ತೆಗೆದುಕೊಳ್ಳುತ್ತೇವೆ ಎಂದು ಅವರು ಭರವಸೆ ನೀಡಿದ್ದರು. ಇದಾದ ಬಳಿಕ ಹಲವು ವೇದಿಕೆಗಳಲ್ಲಿ ವರದಿ ಮಂದನೆಯ ಬಗ್ಗೆ ಭರವಸೆ ನೀಡುತ್ತಾ ಬಂದಿದ್ದಾರಾದರೂ ಆ ಭರವಸೆ ನಿಜವಾಗಲೇ ಇಲ್ಲ ಇದೀಗ ಮುಡಾ ಹಗರಣದಲ್ಲಿ ವಿಪಕ್ಷಗಳು ರಾಜೀನಾಮೆಗಾಗಿ ಒತ್ತಡ ಹೇರುತ್ತಿರುವ ಸಂದರ್ಭದಲ್ಲಿ ಜಾತಿ ಗಣತಿ ವರದಿಯನ್ನು ಜಾರಿಗೊಳಿಸಿಯೇ ಸಿದ್ಧ ಎಂದು ಮುಖ್ಯಮಂತ್ರಿ ಘೋಷಿಸಿರುವುದನ್ನು ಜನರು ಎಷ್ಟರಮಟ್ಟಿಗೆ ಗಂಭೀರವಾಗಿ ತೆಗೆದುಕೊಳ್ಳಬೇಕು ಎನ್ನುವ ಗೊಂದಲದಲ್ಲಿದ್ದಾರೆ. ವರದಿ ಜಾರಿಗೊಳಿಸುವ ಭರವಸೆಯನ್ನು ಮುಖ್ಯಮಂತ್ರಿ ನೀಡುತ್ತಿರುವಾಗಲೇ, ಅತ್ತ ಒಕ್ಕಲಿಗರ ಸಂಘಟನೆಯೊಂದು 'ಹೊಸದಾಗಿ ಸಮೀಕ್ಷೆಯನ್ನು ಮಾಡಬೇಕು ಎನ್ನುವ ಬೇಡಿಕೆಯನ್ನು ಮುಂದಿಟ್ಟಿದೆ. ವರದಿಯೊಳಗೆ ಏನಿದೆ, ಎಲ್ಲಿ ತಪ್ಪಾಗಿದೆ. ಎನ್ನುವುದು ಇನ್ನೂ ಸ್ಪಷ್ಟವಿಲ್ಲದೇ ಇರುವಾಗ ಸಂಘಟನೆ, ಸಮೀಕ್ಷೆ ಸರಿಯಿಲ್ಲ ಎಂದು ತಕರಾರು ತೆಗೆಯುವುದೇ ವಿಚಿತ್ರವಾಗಿದೆ. ಆಳದಲ್ಲಿ ಆ ಸಂಘಟನೆಗೆ ವರದಿಯಲ್ಲಿರುವ ಸತ್ಯಾಂಶಗಳು ಬಹಿರಂಗವಾಗುವುದು ಮತ್ತು ಜಾರಿಗೊಳ್ಳುವುದು ಬೇಡವಾಗಿದೆ. ಒಂದೆಡೆ ಕಾಂಗ್ರೇಸ್‌ಪಕ್ಷ ರಾಷ್ಟ್ರಮಟ್ಟದಲ್ಲಿ ಜಾತಿ ಗಣತಿಯ ಪರವಾಗಿ ಹೇಳಿಕೆಗಳನ್ನು ನೀಡುತ್ತಾ ಬಂದಿದೆ. ಅಧಿಕಾರಕ್ಕೆ ಬಂದರೆ ದೇಶಾದ್ಯಂತ ಜಾತಿಗಣತಿಯನ್ನು ನಡೆಸುವುದಾಗಿ ರಾಹುಲ್‌ಗಾಂಧಿ ಭರವಸೆಯನ್ನು ನೀಡಿದ್ದಾರೆ. ಕಳೆದ ಸೆಪ್ಟೆಂಬರ್‌ನಲ್ಲಿ ಗೃಹ ಸಚಿವ ಅಮಿತ್ ಶಾ ಅವರು ಕೂಡ ಜಾತಿ ಗಣತಿಯ ಬಗ್ಗೆ ಮೃದು ನಿಲುವು ತಳೆದಿದ್ದಾರೆ. ಹೀಗಿರುವಾಗ, ರಾಜ್ಯದಲ್ಲಿ ಪೂರ್ಣ ಪ್ರಮಾಣದ ಜನಬೆಂಬಲವಿರುವ ಕಾಂಗ್ರೇಸ್‌ಸರಕಾರಕ್ಕೆ ಜಾತಿ ಗಣತಿಯ ಕುರಿತಂತೆ ಸ್ಪಷ್ಟ ನಿಲುವಿಗೆ ಬರಲು ಸಾಧ್ಯವಾಗದೇ ಇರುವುದು ದೊಡ್ಡ ಹಿನ್ನಡೆಯಾಗಿದೆ. ಇದೇ ಸಂದರ್ಭದಲ್ಲಿ ಒಳಮೀಸಲಾತಿಯ ಬಗ್ಗೆಯೂ ರಾಜ್ಯ ಸರಕಾರ ಗೊಂದಲದಲ್ಲಿದೆ. ಸುಪ್ರೀಂಕೋರ್ಟ್ ಒಳ ಮೀಸಲಾತಿ ಅನುಷ್ಠಾನದ ಜವಾಬ್ದಾರಿಯನ್ನು ರಾಜ್ಯಗಳ ಮೇಲೆ ಹಾಕಿದಾಗ, ಅದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ವಾಗತಿಸಿದ್ದರು. ದಲಿತ ಸಮುದಾಯದ ಒಂದು ಗುಂಪು ಒಳ ಮೀಸಲಾತಿಯ ಬೇಡಿಕೆಯಿಟ್ಟಾಗ ರಾಜ್ಯ ಸರಕಾರಗಳು ಕೇಂದ್ರ ಮತ್ತು ಸುಪ್ರೀಂಕೋರ್ಟ್‌ನ ಕಡೆಗೆ ಕೈತೋರಿಸಿದ್ದವು ಇದೀಗ ಸುಪ್ರೀಂಕೋರ್ಟ್ ಹಸಿರು ನಿಶಾನೆ ನೀಡಿದ ಬಳಿಕ ಒಳಮೀಸಲಾತಿ ಜಾರಿಗೊಳಿಸುವ ಪ್ರಕ್ರಿಯೆಗೆ ಚಾಲನೆ ನೀಡಲು ಸರಕಾರ ಮೀನಾಮೇಷ ಎಣಿಸುತ್তಿದೆ.

> **ಈ ವರದಿಯನ್ನು ಕುಂಟು ನೆಪ ತೆಗೆದು ತಿರಸ್ಕರಿಸುವ ಸಂಘಟನೆಗಳು ನಾಳೆ ಹೊಸದಾಗಿ ಸಮೀಕ್ಷೆ ನಡೆದರೂ ಅದನ್ನೂ ಅದು ಬೇರೆ ಬೇರೆ ನೆಪಗಳನ್ನು ಒಡ್ಡಿ ತಿರಸ್ಕರಿಸುವುದರಲ್ಲಿ ಅನುಮಾನವಿಲ್ಲ ವಿಪರ್ಯಾಸವೆಂದರೆ, ಕಾಂಗ್ರೆಸ್‌ನೊಳಗಿರುವ ಲಿಂಗಾಯತ ಮತ್ತು ಒಕ್ಕಲಿಗ ನಾಯಕರು ಈಗಲೂ ಸಮೀಕ್ಷೆಯ ಬಗ್ಗೆ ತಮ್ಮ ತಮ್ಮ ಜಾತಿ ಸಂಘಟನೆಗಳ ಮನವೊಲಿಸುವುದರಲ್ಲಿ ವಿಫಲವಾಗಿದ್ದಾರೆ. ಜಾತಿ ಗಣತಿಯನ್ನು ಜಾರಿಗೊಳಿಸುವಲ್ಲಿ ಸಿದ್ದರಾಮಯ್ಯ ತನ್ನ ಪಕ್ಷದೊಳಗಿರುವ ಬಲಿಷ್ಠ ಜಾತಿ ಶಕ್ತಿಗಳಿಗೆ ಹೆದರುತ್ತಿರುವುದು ಮೇಲ್ನೋಟಕ್ಕೆ ಸ್ಪಷ್ಟವಾಗುತ್ತಿದೆ.**

ಚಂದ್ರಘಂಟಾದೇವಿಯ ಕಥೆ..

ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಹಿಂದೂ ಧರ್ಮದ ಪ್ರಕಾರ ನವರಾತ್ರಿ ದುರ್ಗಾದೇವಿಯ ಮೂರನೇ ಅವತಾರವೇ ಚಂದ್ರಘಂಟಾ. ಚಂದ್ರಘಂಟಾ ಅಂದರೆ ಘಂಟೆಯಾಕಾರದ ಚಂದ್ರನನ್ನು ಮಸ್ತಕದಲ್ಲಿ ಧರಿಸಿದವಳು ಹಾಗೂ ಚಂದ್ರ ಘಂಟೆಯ ಮೂರನೇ ಕಣ್ಣು ತೆರೆದೇ ಇದ್ದು ಯಾವ ಸಮಯದಲ್ಲಿ ಆದರೂ ದುಷ್ಟ ಶಕ್ತಿಗಳ ನಿಗ್ರಹಕ್ಕೆ ಸಿದ್ಧಳಾಗಿರುವಂತೆ ಕಾಣುತ್ತಾಳೆ. ಚಂದ್ರ ಘಂಟೆಯನ್ನು ಚಂದ್ರಿಕಾ, ರಣಚಂಡಿ ಎಂದೂ ಕರೆಯುತ್ತಾರೆ. ಇವಳಿಗೆ ಹತ್ತು ಕೈಗಳಿದ್ದು, ಹತ್ತೂ ಕೈಗಳಲ್ಲಿ ಶಸ್ತ್ರಾಸ್ತ್ರವನ್ನು ಹಿಡಿದುಕೊಂಡು ಸಿಂಹವಾಹಿನಿಯಾಗಿ ರಾರಾಜಿಸುತ್ತಾಳೆ.

ಚಂದ್ರಘಂಟೆಯ ಮಹತ್ವ: ಚಂದ್ರಘಂಟೆಯು ಶುಕ್ರ ಗ್ರಹದ ಅಧಿದೇವತೆಯಾಗಿರುತ್ತಾಳೆ. ಚಂದ್ರಘಂಟೆಯು ಭೂಮಿಯ ಮೇಲಿರುವ ಎಲ್ಲಾ ಜೀವಿಗಳಿಗೂ ಸಂತೋಷವನ್ನು ನೀಡುವ ತಾಯಿ. ಇವಳ ಆರಾಧನೆಯಿಂದ ಸಂಪತ್ತು ಹಾಗೂ ಸಮೃದ್ಧಿ ನೆಲೆಸುತ್ತದೆ.

ಚಂದ್ರಘಂಟೆಯ ಪುರಾಣ ಕಥೆ: ಹೊಸದಾಗಿ ವಿವಾಹವಾದ ಸ್ವರೂಪವನ್ನು ದುರ್ಗಾಮಾತೆಯು ಚಂದ್ರಘಂಟ ರೂಪದಲ್ಲಿ ತೋರಿಸಿದ್ದಾರೆ.

ಹಿಮವಂತ ಹಾಗೂ ಮೈನಾ ದೇವಿಯ ಪುತ್ರಿಯಾಗಿ ಜನಿಸಿದ ಪಾರ್ವತಿಯು ಶಿವನನ್ನು ಪಡೆಯಲು ಕಠಿಣ ತಪಸ್ಸನ್ನು ಕೈಗೊಳ್ಳುತ್ತಾಳೆ. ಪಾರ್ವತಿಯ ಕಠೋರ ತಪಸ್ಸನ್ನು ಮೆಚ್ಚಿದ ಶಿವನು ಮದುವೆಯಾಗಲು ಒಪ್ಪಿಕೊಳ್ಳುತ್ತಾನೆ. ಇದರಂತೆ ಹಿಮವಾನನ ಅರಮನೆಯಲ್ಲಿ ಮದುವೆಯ ಏರ್ಪಾಡುಗಳು ನಡೆಯುತ್ತದೆ.



ಸ್ಮಶಾನವಾಸಿಯಾದ ಶಿವನು ತನ್ನ ಭಯಾನಕ ರೂಪದಲ್ಲೇ, ತನ್ನ ಗಣಗಳೊಂದಿಗೆ ಮೆರವಣಿಗೆಯಲ್ಲಿ ಅರಮನೆಯನ್ನು ತಲುಪುತ್ತಾನೆ. ಬೂದಿಯಿಂದ ಮುಚ್ಚಲ್ಪಟ್ಟ ಶರೀರ, ಕೊರಳಿನಲ್ಲಿ ಸುತ್ತಿದ ಹಾವುಗಳು, ಗಂಟಿನಂತಿರುವ ಜಟೆಧಾರಿಯಾದ ಶಿವ, ಅವನೊಂದಿಗೆ ದೆವ್ವಗಳು, ಪಿಶಾಚ, ಗಣಗಳು, ಋಷಿಮುನಿಗಳು, ಅಘೋರಿಗಳನ್ನು ಒಳಗೊಂಡ ವಿಚಿತ್ರ ಮೆರವಣಿಗೆಯನ್ನು ನೋಡಿ, ಪಾರ್ವತಿಯ ತಾಯಿ ಮೂರ್ಛೆ ಹೋಗುತ್ತಾಳೆ. ವಿವಾಹಕ್ಕೆಂದು ಸೇರಿದ್ದವರು ಶಿವನ ರೂಪ, ಅವನ ಗಣಗಳನ್ನು ನೋಡಿ ಆಘಾತವನ್ನು ಅನುಭವಿಸುತ್ತಾರೆ. ಇದನ್ನು ಕಂಡ ಪಾರ್ವತಿಯು ಶಿವನಿಗೆ ಮುಜುಗರವಾಗದಿರಲೆಂದು ಭಯಾನಕ ರೂಪವಾಗಿ ಚಂದ್ರಘಂಟೆಯಾಗಿ ಪರಿವರ್ತನೆಯಾಗುತ್ತಾಳೆ.

ಚಿನ್ನದ ಮೈಬಣ್ಣವನ್ನು ಹೊಂದಿದ ಚಂದ್ರ ಘಂಟೆಯು ಹತ್ತು ತೋಳುಗಳನ್ನು ಹೊಂದಿದ್ದಳು. ಒಂಭತ್ತು ತೋಳು ಗಳಲ್ಲಿ ತ್ರಿಶೂಲ, ಗದೆ, ಬಿಲ್ಲು-ಬಾಣ, ಖಡ್ಗ, ಕಮಲ, ಘಂಟೆ, ಕಮಂಡಲ ಹಾಗೂ ಒಂದು ತೋಳಿನಲ್ಲಿ ಅಭಯ ಮುದ್ರೆಯಿಂದ, ಸಿಂಹವಾಹಿನಿಯಾಗಿ ರೂಪ ತಾಳುತ್ತಾಳೆ. ತನ್ನ ಭಕ್ತರಿಗೆ ತಾಯಿಯಂತೆ ಆದಿಶಕ್ತಿಯು ಸಹಾನುಭೂತಿಯನ್ನು ತೋರುತ್ತಾಳೆ. ಹಾಗೂ ಕೆಟ್ಟವರಿಗೆ ಭಯಾನಕ ರೂಪದಲ್ಲಿ ಕಾಣಿಸಿಕೊಳ್ಳುತ್ತಾಳೆ.

> **ಪಾರ್ವತಿಯ ಮಾತಿಗೆ ಒಪ್ಪಿದ ಶಿವನು ಸುಂದರ ರೂಪತಾಳಿ, ಆಭರಣ**

ಚಂದ್ರಘಂಟೆಯ ರೂಪತಾಳಿದ ಪಾರ್ವತಿಯು ಶಿವನಿಗೆ ಸುಂದರವಾದ ವರನ ರೂಪವನ್ನು ತಾಳಲು ಭಿನ್ನವಿಸುತ್ತಾಳೆ. ಪಾರ್ವತಿಯ ಮಾತಿಗೆ ಒಪ್ಪಿದ ಶಿವನು ಸುಂದರ ರೂಪತಾಳಿ, ಆಭರಣಗಳಿಂದ ಅಲಂಕೃತನಾಗಿ ಕಾಣಿಸಿಕೊಳ್ಳುತ್ತಾನೆ. ಶಿವ ಪಾರ್ವತಿಯ ವಿವಾಹವು ಸಾಂಗವಾಗಿ ನೆರವೇರುತ್ತದೆ. ಹೀಗೆ ಶಿವ ಹಾಗೂ ಪಾರ್ವತಿಯು ವಿವಾಹವಾದ ದಿನವನ್ನು ಪ್ರತಿವರ್ಷ ಮಹಾಶಿವರಾತ್ರಿಯೆಂದು ಆಚರಿಸಲಾಗುತ್ತದೆ. ರಾಕ್ಷಸರಾದ ಶುಂಭ ಹಾಗೂ ನಿಶುಂಭನನ್ನು ಸೋಲಿಸುವ ಸಲುವಾಗಿ, ಪಾರ್ವತಿ ದೇವಿಯು ಕೌಶಿಕಿ ಯಾಗಿ ಅವತಾರವೆತ್ತುತ್ತಾಳೆ.

> **ವಿವಾಹ ಸಂದರ್ಭದಲ್ಲಿ**
>
> **ಪಾರ್ವತಿ ದೇವಿಯು ಕಠಿಣವಾದ ತಪಸ್ಸನ್ನು ಮಾಡಿ, ಶಿವನನ್ನು ಮದುವೆಯಾಗುವಲ್ಲಿ ಸಫಲರಾಗುತ್ತಾರೆ. ವಿವಾಹ ಸಂದರ್ಭದಲ್ಲಿ ಕೈಲಾಸದ ಗಣಗಳೊಂದಿಗೆ ಶಿವನು ಪಾರ್ವತಿಯ ಅರಮನೆಯನ್ನು ಪ್ರವೇಶಿಸುತ್ತಾನೆ. ಅತಿ ಭಯಂಕರನಾಗಿ ಕಾಣುತ್ತಿದ್ದ ಶಿವನನ್ನು ನೋಡಿ ಪಾರ್ವತಿ ದೇವಿಯ ತಾಯಿ ಮೂರ್ಛೆಹೋಗುತ್ತಾಳೆ. ಆಗ ಪಾರ್ವತಿಯು ಚಂದ್ರಘಂಟ ರೂಪದಲ್ಲಿ ಶಿವನ ಮುಂದೆ ಪ್ರತ್ಯಕ್ಷಳಾಗಿ ಶಿವನು ರಾಜಕುಮಾರನ ರೂಪವನ್ನು ತಾಳಬೇಕಾಗಿ ವಿನಂತಿಸಿಕೊಳ್ಳುತ್ತಾಳೆ. ಹೀಗೆ ಶಿವನು ಸುಂದರ ವರನ ರೂಪವನ್ನು ತಾಳಿದ ನಂತರ ಶಿವ ಪಾರ್ವತಿಯ ಮದುವೆ ನೆರವೇರುತ್ತದೆ.**

ಕೌಶಿಕಿಯ ರೂಪವೇ ರಕ್ಕಸರ ವಿನಾಶವನ್ನು ಸೂಚಿಸುವಂತಿತ್ತು. ಶುಂಭನು ತನ್ನ ಸಹೋದರನಾದ ನಿಶುಂಭನಿಗೆ ಮದುವೆ ಮಾಡಲು ಯೋಜನೆ ಹಾಕಿದ ಶುಂಭ ಅವಳನ್ನು ಕರೆತರಲು ಧೂಮ್ರಲೋಚನನೆಂಬ ರಾಕ್ಷಸನನ್ನು ಕಳುಹಿಸುತ್ತಾನೆ. ಕೌಶಿಕಿಯು ಒಪ್ಪದಿದ್ದಾಗ ಧೂಮ್ರಲೋಚನನು ಹಲ್ಲೆಯನ್ನು ಮುಂದಾದಾಗ ಕೋಪಗೊಂಡ ಕೌಶಿಕಿ ಮಾತೆಯು ಕೇವಲ 'ಹೂಂಕಾರ' ದಿಂದಲೇ ಧೂಮ್ರಲೋಚನನ್ನು ನಿರ್ನಾಮ ಮಾಡುತ್ತಾಳೆ. ದುಷ್ಟರನ್ನು ಸಂಹಾರ ಮಾಡಲು ಸದಾ ಸಿದ್ಧವಾಗಿರುವ ಭಂಗಿಯಲ್ಲಿರುವ ಚಂದ್ರಘಂಟೆಯ ಘಂಟಾನಾದದಿಂದಲೇ ಸಾವಿರಾರು ಅಸುರರು ನಿರ್ನಾಮವಾದರು. ಈಕೆಯ ಕೃಪೆಯಿಂದ ಭಕ್ತರ ಎಲ್ಲಾ ಪಾಪಗಳು, ಕಷ್ಟಗಳು, ದೈಹಿಕ ನೋವು, ಮಾನಸಿಕ ತೊಂದರೆಗಳು ನಿವಾರಣೆಯಾಗುತ್ತವೆ. ಸಿಂಹವಾಹಿನಿಯಾದ ಈಕೆಯು ಭಕ್ತರಲ್ಲಿ ನಿರ್ಭಯತೆಯನ್ನು ಮೂಡಿಸುತ್ತಾಳೆ.

ಚರ್ಚ್ ಸ್ಟ್ರೀಟ್ ರಸ್ತೆಯಲ್ಲಿ ಪಾದಾಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ

• ಉದಯವಾಹಿನಿ, ಬೆಂಗಳೂರು

ನಗರದ ಪೂರ್ವ ವಲಯ ವ್ಯಾಪ್ತಿಯಲ್ಲಿ ಬರುವ ಚರ್ಚ್ ಸ್ಟ್ರೀಟ್ ರಸ್ತೆಯಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಯಿತು. ಪೂರ್ವ ವಲಯ ಆಯುಕ್ತರಾದ ಶ್ರೀಮತಿ ಸ್ನೇಹಲ್ ರವರ ನೇತೃತ್ವದಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆಯನ್ನು ನಡೆಸಲಾಯಿತು. ಪಾದಚಾರಿ ಮಾರ್ಗ ಒತ್ತುವರಿ ಮಾಡದಂತೆ ಈಗಾಗಲೇ ಅಂಗಡಿ ಮಳಿಗೆಗಳ ಮಾಲೀಕರಿಗೆ ಸಾಕಷ್ಟು ಬಾರಿ ಎಚ್ಚರಿಕೆ ನೀಡಲಾಗಿರುತ್ತದೆ.

ಆದರೂ ಪಾದಚಾರಿ ಮಾರ್ಗ ಒತ್ತುವರಿ ಮಾಡಿಕೊಂಡಿದ್ದು, ಅದರಿಂದ ಪಾದಚಾರಿಗಳ ಓಡಾಟಕ್ಕೆ ಸಾಕಷ್ಟು ಸಮಸ್ಯೆಯಾಗುತ್ತಿರುತ್ತದೆ.

ಚರ್ಚ್ ಸ್ಟ್ರೀಟ್ ರಸ್ತೆಯ ಎರಡೂ ಬದಿಯಲ್ಲಿ ಬರುವ ಸುಮಾರು 50 ಅಂಗಡಿ/ಮಳಿಗೆಗಳು ಪಾದಚಾರಿ ಮಾರ್ಗ ಒತ್ತವರಿ ಮಾಡಿಕೊಂಡು, ಪಾದಚಾರಿ ಮಾರ್ಗದಲ್ಲಿರಿಸಿದ್ದ ಸಾಮಗ್ರಿಗಳನ್ನು ತೆರವುಗೊಳಿಸಲಾಗಿದೆ. ಚರ್ಚ್ ಸ್ಟ್ರೀಟ್ ರಸ್ತೆಯ ಸುಮಾರು 1 ಕಿ.ಮೀ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಪೊಲೀಸ್ ಸಿಬ್ಬಂದಿ,

ಉದಯವಾಹಿನಿ ಚಿತ್ರ

ಪಾಲಿಕೆ ಅಧಿಕಾರಿಗಳು ಹಾಗೂ ಮಾರ್ಷಲ್‌ಗಳ ಸಹಯೋಗದಲ್ಲಿ ನಡೆಸಲಾಗಿದೆ. ತೆರವು ಕಾರ್ಯಾಚರಣೆಯ ವೇಳೆ 20ಕ್ಕೂ ಹೆಚ್ಚು ಗ್ಯಾಂಗ್‌ಮ್ಯಾನ್‌ಗಳು, 2 ಟಿಪ್ಪರ್‌ಗಳು ಹಾಗೂ 6 ಟ್ರ್ಯಾಕ್ಟರ್‌ಗಳ ಮೂಲಕ ಪಾದಚಾರಿ ಮಾರ್ಗದಲ್ಲಿರಿಸಿದ್ದ ಸಾಮಗ್ರಿಳನ್ನು ಪಾಲಿಕೆ ವಶಕ್ಕೆ ಪಡೆಯಲಾಗಿದೆ. ಮತ್ತೆ ಪಾದಚಾರಿ ಮಾರ್ಗ ಒತ್ತುವರಿ ಮಾಡದಂತೆ ಎಲ್ಲಾ ಮಳಿಗೆಯ ಮಾಲೀಕರಿಗೆ ಎಚ್ಚರಿಕೆ ನೀಡಲಾಗಿದೆ. ಈ ವೇಳೆ ವಲಯ ಜಂಟಿ ಆಯುಕ್ತರಾದ ಸರೋಜಾ, ಕಾರ್ಯಪಾಲಕ ಅಭಿಯಂತರರಾದ ಮುನಿರೆಡ್ಡಿ ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

> **ಸುಮಾರು 1 ಕಿ.ಮೀ ವ್ಯಾಪ್ತಿಯಲ್ಲಿ ಪಾದಾಚಾರಿ ಮಾರ್ಗ ಒತ್ತುವರಿ ತೆರವು**

> **ಪಾದಚಾರಿ ಮಾರ್ಗದಲ್ಲಿ ಆಹಾರ ತಯಾರಿಸುವುದರಿಂದ ಆರೋಗ್ಯ ಮತ್ತು ನೈರ್ಮಲ್ಯದ ಮೇಲೆ ದುಷ್ಪರಿಣಾಮ ಬೀರಲಿದೆ. ಅಲ್ಲದೆ ತ

ರಸ್ತೆ ಅಭಿವೃದ್ಧಿ ಬಗ್ಗೆ ಪ್ರತಿಭಟನೆ ಮಾಡಿದರೆ ಗ್ರಾಮದವರಿಗೆ ಜೈಲು ಭಾಗ್ಯ

ದಶಕದಿಂದಲೂ ಕವಲೂರ ಗ್ರಾಮ ಸುತ್ತಮುತ್ತಲ ಹಳ್ಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳು ಹದಗೆಟ್ಟಿದ್ದು ಪ್ರಯಾಣಕ್ಕಾಗಿ ನಿತ್ಯ ನರಕಯಾತನೆ

• ಉದಯ ತೋಟದ ಮೈನಹಳ್ಳಿ
• ಉದಯವಾಹಿನಿ, ಕೊಪ್ಪಳ

ತಾಲ್ಲೂಕಿನ ಕವಲೂರು ಗ್ರಾಮಕ್ಕೆ ಸಂಪರ್ಕಿಸುವ ರಸ್ತೆ ಅಭಿವೃದ್ಧಿ ಪಡಿಸುವಲ್ಲಿ ದೀರ್ಘ ವಿಳಂಬ ಖಂಡಿಸಿ ಪ್ರತಿಭಟನೆ ಮಾಡಿದವರಿಗೆ ಜೈಲು ಭಾಗ್ಯ ಕರುಣಿಸುತ್ತಿರುವುದು ಖಂಡನೀಯ ಎಂದು ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಬಸವರಾಜ ಕ್ಯಾವಟರ್ ಬೇಸರ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕವಲೂರು ಗ್ರಾಮದ ಕಲ್ಲವ್ವಕ್ಕ ಸಂಜೀವಿನಿ ಮಹಿಳಾ ಒಕ್ಕೂಟದವರು ಮತ್ತು ಊರಿನ ಗ್ರಾಮದವರು ಕವಲೂರು ಬಂದ್ ಪ್ರತಿಭಟನೆಗೆ ಕರೆ ನೀಡಿದ್ದರು. ಅದರಂತೆ ಮಂಗಳವಾರ ಗ್ರಾಮದ ಬಸ್ ನಿಲ್ದಾಣದ ಮುಂದೆ ಪ್ರತಿಭಟನೆ ನಡೆಸಿದರು.

ಬೆಳಿಗ್ಗೆ ಗ್ರಾಮದ ಪಂಚಲಿಂಗೇಶ್ವರ ದೇವಸ್ಥಾನ ದಿಂದ ಆರಂಭವಾದ ಪ್ರತಿಭಟನಾ ಮೆರವಣಿಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ನಂತರ ಗ್ರಾಮದ ಬಸ್ ನಿಲ್ದಾಣದ ಮುಂದೆ ಆಗಮಿಸಿ, ಘೋಷಣೆ ಕೂಗಿ ಪ್ರತಿಭಟಿಸಲಾಯಿತು. ಸಂಜೆಯವರೆಗೂ ಪ್ರತಿಭಟನಕಾರರು ಧರಣಿನ ಡೆಸಿದರು. ದಶಕದಿಂದಲೂ ಕವಲೂರ ಗ್ರಾಮ, ಸುತ್ತಮುತ್ತಲ ಹಳ್ಳಿಗೆ ಸಂಪರ್ಕ ಕಲ್ಪಿಸುವ . ರಸ್ತೆಗಳು ಹದಗೆಟ್ಟಿದ್ದು ಸಾರ್ವಜನಿಕರು ಪ್ರಯಾಣಕ್ಕಾಗಿ ನಿತ್ಯ ನರಕಯಾತನೆ ಅನುಭವಿಸುತ್ತಿದ್ದಾರೆ.

ರಸ್ತೆ ಸರಿ ಇಲ್ಲದ್ದರಿಂದ ಬಸ್ ಸಂಚಾರ ಕೂಡ ಆಗಾಗ ಸ್ಥಗಿತವಾಗುತ್ತಿದೆ. ಇದರಿಂದ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಿದೆ. ದುರಸ್ತಿಗೆ ಹಲವಾರು ಬಾರಿ ಗ್ರಾಮದವರು ಮನವಿ ಮಾಡಿಕೊಂಡುರು ಪ್ರಯೋಜನ ಆಗಿಲ್ಲ ಅದಕ್ಕಾಗಿ ಗ್ರಾಮದವರು ಪ್ರತಿಭಟನೆ ನಡೆಸಿದ್ದರು ಇದನ್ನು ತಿಳಿದುಕೊಂಡು ಪೋಲಿಸರು ಹಾಗೂ ತಹಶಿಲ್ದಾರರು ಗ್ರಾಮದ 14 ಜನರ ಮೇಲೆ ಎಫ್ಐಆರ್ ದಾಖಲಿಸಿ ಸಮಾನ್ಯ ಜನರಮೇಲೆ ಆಧಿಕಾರದ ದರ್ಪ ತೋರಿದ್ದಾರೆ.

ಈ ಕೂಡಲೆ ಗ್ರಾಮದ ಜನರ ಮೇಲೆ ದಾಖಲು ಹಾಗಿರು ಕೇಸ್ ಹಿಂಪಡೆಯಬೇಕು ಮತ್ತು ಗ್ರಾಮದ ಸುತ್ತ ಮುತ್ತ ಇರುವ ರಸ್ತೆಗಳನ್ನು ಅಭಿವೃದ್ಧಿ ಪಡೆಸಬೇಕು. ಇಲ್ಲದಿದ್ದರೆ ಅಧಿಕಾರಗಳ ವಿರುದ್ಧ ಜಿಲ್ಲೆಯಾದ್ಯಂತ ಪ್ರತಿಭಟನೆ ಮಾಡುತ್ತೇವೆ ಎಚ್ಚರಿಕೆ.

ಉದಯವಾಹಿನಿ ಚಿತ್ರ

ಸಾಮನ್ಯ ಜನರ ಮೇಲೆ ಆಧಿಕಾರದ ದರ್ಪ

ಹತ್ತಿಕ್ಕುವ ಪ್ರಯತ್ನ

ಜನರು ಎಷ್ಟು ಭಯಭೀತರಾಗಿದ್ದಾರೆಂದರೆ ನಮ್ಮ ಹಳ್ಳಿಯಲ್ಲಿ ಅಭಿವೃದ್ಧಿಯ ವಿಷಯ ಕೇಳಿದರೆ ಅಧಿಕಾರಿಗಳು ತಮ್ಮ ದರ್ಪವನ್ನು ತೋರುತ್ತಿದ್ದಾರೆ ನಮ್ಮ ಜನರ ಅಭಿವೃದ್ಧಿ ಬಗ್ಗೆ ಧ್ವನಿ ಎತ್ತುವುದು ತಪ್ಪಾ? ಮಹಿಳೆಯರು ಹಾಗೂ ಹಳ್ಳಿಯ ಜನರು ಮುಂದೆ ಬಂದು ತಮ್ಮ ಊರಿನ ಅಭಿವೃದ್ಧಿ ಬಗ್ಗೆ ಧ್ವನಿ ಎತ್ತಿದ್ದಾರೆ. ಅವರಿಗೆ ಸಿಗುವುದು ಜೈಲು ಶಿಕ್ಷೆ ಭಾಗ್ಯವ ಈ ಊರಿನ ಮಹಿಳಾ ಮಣಿಗಳಿಗೆ ಹತ್ತಿಕ್ಕುವ ಕೆಲಸವಾಗುತ್ತಿದೆ ಎಂದು ಬಸವರಾಜ ಎಸ್ ಕ್ಯಾವಟರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸಚಿವ ಸಂಪುಟ ಸಭೆ ಚರ್ಚೆಯ ನಂತರ ಜಾತಿ ಗಣತಿ ವರದಿ ಜಾರಿ ಬಗ್ಗೆ ತೀರ್ಮಾನ

• ಉದಯವಾಹಿನಿ, ಕೊಪ್ಪಳ

ಜಾತಿ ಗಣತಿ ವರದಿಯನ್ನು ಸ್ವೀಕರಿಸಿದ್ದು , ವರದಿಯನ್ನು ಇಲಾಖೆ ಸಚಿವರೊಂದಿಗೆ ಮತ್ತು ಸಂಪುಟ ಸಭೆಯಲ್ಲಿರಿಸಿ ಚರ್ಚೆ ನಡೆಸಿದ ನಂತರ ಅದರ ಜಾರಿ ಮಾಡುವ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಶುಕ್ರವಾರ ಗಿಣಿಗೇರ ಏರ್ ಸ್ಟ್ರಿಪ್ ಕೊಪ್ಪಳದಲ್ಲಿ ಮಾಧ್ಯಮದವರೊಂದಿಗೆ ಮಾತ ನಾಡಿದರು. ಜಾತಿ ಗಣತಿ ಜಾರಿ ಮಾಡುವ ಬಗ್ಗೆ ಶಾಸಕ ಬಸವರಾಜ ರಾಯರೆಡ್ಡಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ, ರಾಯರೆಡ್ಡಿಯವರು ತಮ್ಮ ಅಭಿಪ್ರಾಯವನ್ನು ತಿಳಿಸಿದ್ದಾರೆ. ಮುಂದಿನ ವಾರ ಹಿಂದುಳಿದ ವರ್ಗಗಳ ಇಲಾಖಾ ಸಚಿವರ ಜೊತೆ ಚರ್ಚೆ ನಡೆಸುವುದಾಗಿ ತಿಳಿಸಿದರು.

ಒಳಮೀಸಲಾತಿ ಜಾರಿ ಬಗ್ಗೆ ಪರಿಶೀಲನೆ: ಒಳಮೀಸಲಾತಿ ಜಾರಿ ತರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸುತ್ತಾ , ಒಳಮೀಸಲಾತಿ ಜಾರಿಯ ಬಗ್ಗೆ ಸರ್ವೋಚ್ಚನ್ಯಾಯಾಲಯ ಆದೇಶ ನೀಡಿದೆ. ಈ ಸಂಬಂಧ ಸಚಿವ ಸಂಪುಟದಲ್ಲಿ ಹಾಗೂ ಪಕ್ಷದ ವರಿಷ್ಠರೊಂದಿಗೆ ಚರ್ಚೆ ನಡೆಸಲಾಗುವುದು ಎಂದರು.

ಬಿಜೆಪಿ ಜೆಡಿಎಸ್ ಪಕ್ಷ ದುರ್ಬಲವಾಗುವ ಭಯ ಕಾಡುತ್ತಿದೆ: ಜೆಡಿಎಸ್ ಶಾಸಕ ಜಿ.ಟಿ.ದೇವೇಗೌಡು, ಸಿದ್ದರಾಮಯ್ಯನವರ ಪರವಾಗಿ ಬ್ಯಾಟಿಂಗ್ ಮಾಡಿದ ಬಗ್ಗೆ ಕುಮಾರಸ್ವಾಮಿಯವರು ಟೀಕೆ ಮಾಡಿರುವುದಕ್ಕೆ ಪ್ರತಿಕ್ರಿಯೆ ನೀಡಿ, ಜಿ.ಟಿ. ದೇವೇಗೌಡರು ಅವರು ಜೆಡಿಎಸ್ ಪಕ್ಷದ ಕೋರ್ ಕಮಿಟಿ ಅಧ್ಯಕ್ಷರಾಗಿದ್ದು ಹೇಳಿಕೆ ಸರಿಯಾಗಿಯೇ ಇರುತ್ತದೆ. ಭಾಜಪ ಮತ್ತು ಜೆಡಿಎಸ್ ನವರಿಗೆ ನಾನು ಅಧಿಕಾರದಲ್ಲಿದ್ದರೆ , ಅವರ ಪಕ್ಷಗಳು ದುರ್ಬಲವಾಗುವ ಭಯ ಅವರನ್ನು ಕಾಡುತ್ತಿದೆ ಎಂದರು.

ಉದಯವಾಹಿನಿ ಚಿತ್ರ

ಊಹಾಪೋಹಗಳು ಬೇಡ

ಸಚಿವ ಸತೀಶ್ ಜಾರಕಿಹೊಳಿಯವರು ಪಕ್ಷದ ವರಿಷ್ಠರನ್ನು ಭೇಟಿಯಾಗಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಎಐಸಿಸಿ ಅಧ್ಯಕ್ಷರಾಗಿರುವ ಖರ್ಗೆಯವರನ್ನು ಪಕ್ಷದಲ್ಲಿ ಸಚಿವರಾಗಿರುವ ಸತೀಶ್ ಜಾರಕಿಹೊಳಿಯವರು ಭೇಟಿಯಾಗುವುದು ತಪ್ಪೇನಲ್ಲ. ಇಲ್ಲಸಲ್ಲದ ಊಹಾಪೋಹಗಳಿಗೆ ಅವಕಾಶ ನೀಡಬಾರದು ಎಂದರು.

ಪಿಡಿಒಗಳ ಬೆಂಗಳೂರು ಚಲೋ ಆರಂಭ

• ಉದಯವಾಹಿನಿ, ನರಗುಂದ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ವೃಂದ ಸಂಘಗಳು ಅ.4ರಿಂದ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಹಮ್ಮಿಕೊಂಡಿರುವ ಅನಿರ್ದಿಷ್ಟಾವಧಿ ಹೋರಾಟದಲ್ಲಿ ಭಾಗವಹಿಸಲು ತೆರಳುವ ಕುರಿತು ತಾಲ್ಲೂಕಿನ 13 ಗ್ರಾಮ ಪಂಚಾಯಿತಿಗಳ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯ ನೂರಕ್ಕೂ ಅಧಿಕ ಅಧಿಕಾರಿಗಳು ಮತ್ತು ನೌಕರರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗೆ ಗುರುವಾರ ಮನವಿ ಸಲ್ಲಿಸಿ ಬೆಂಗಳೂರ ಚಲೋ ಕೈಗೊಂಡರು. ಪಿಡಿಒ ಸಂಘದ ಜಿಲ್ಲಾ ಖಜಾಂಚಿ ಮಂಜುನಾಥ ಗಣಿ, ಪಿಡಿಒ ಹಿರೇಮನಿ, ವೈ.ಬಿ. ಸಂಕನಗೌಡ್ರ, ವಿ.ಆರ್. ರಾಯನಗೌಡ್ರ, ಶ್ರುತಿ ಸಂಗಳ, ಎಂ.ಎಂ. ಪೂಜಾರ ಇದ್ದರು.

ಉದಯವಾಹಿನಿ ಚಿತ್ರ

ಹಕ್ಕೊತ್ತಾಯ

'ಜನರಿಂದ ಆಯ್ಕೆ ಗೊಂಡಿರುವ ಗ್ರಾಮ ಪಂಚಾಯಿತಿ ಸದಸ್ಯರಿಗೆ ಸ್ಥಳೀಯ ಮಟ್ಟದಲ್ಲಿ ಸರಿಯಾಗಿ ಶಿಷ್ಟಾಚಾರ ಪಾಲನೆ ಆಗುತ್ತಿಲ್ಲ. ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಮತ್ತು ಉಪಾಧ್ಯಕ್ಷರಿಗೆ ಹಾಗೂ ಸದಸ್ಯರಿಗೆ ಗೌರವಧನ ಹೆಚ್ಚಳ ಸೇರಿದಂತೆ ಆಡಳಿತ ನಡೆಸಲು ಮತ್ತು ಕೆಲವು ತೀರ್ಮಾನ ಕೈಗೊಳ್ಳಲು ನಮಗೆ ಅಧಿಕಾರ ನೀಡಬೇಕು. ನಾವು ಕೂಡ ಈ ಹೋರಾಟದಲ್ಲಿ ಭಾಗಿಯಾಗಿ ನಮ್ಮ ಬೇಡಿಕೆ ಈಡೇರಿಕೆಗೆ ಹಕ್ಕೊತ್ತಾಯ ಮಾಡುತ್ತಿದ್ದೇವೆ

ಹಿಂದುಳಿದ ವರ್ಗದ ನಾಯಕನಿಗೆ ಬಿಜೆಪಿ ಅವಕಾಶ

• ಉದಯವಾಹಿನಿ, ಮಂಗಳೂರು

ಉಡುಪಿ- ದಕ್ಷಿಣ ಕನ್ನಡ ಜಿಲ್ಲೆಗಳ ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್‌ಗೆ ಆಯ್ಕೆಗೆ ನಡೆಯುತ್ತಿರುವ ಉಪಚುನಾವಣೆಯಲ್ಲಿ ಬಿಜೆಪಿಯು 3,500 ಕ್ಕೂ ಹೆಚ್ಚು ಮತದಾರ ಸದಸ್ಯರನ್ನು ಹೊಂದಿದೆ. ಹಿಂದುಳಿದ ವರ್ಗದ, ಅದರಲ್ಲೂ ಅತಿ ಸಣ್ಣ ಸಮುದಾಯದ ನಾಯಕನಿಗೆ ಪಕ್ಷವು ಅವಕಾಶ ನೀಡಿದ್ದು, ನಮ್ಮ ಅಭ್ಯರ್ಥಿ ನಿರಾಯಾಸವಾಗಿ ಗೆಲ್ಲಲಿದ್ದಾರೆ' ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು.

ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಉಭಯ ಜಿಲ್ಲೆಗಳಲ್ಲಿ ನಮ್ಮ ಪಕ್ಷದ ಎಲ್ಲಾ ಶಾಸಕರು ಶಾಸಕರು, ಸಂಸದರು ಹಾಗೂ ಸ್ಥಳೀಯ ಸಂಸ್ಥೆಗಳ ಸದಸ್ಯರು ಕಿಶೋರ್ ಕುಮಾರ್ ಬೊಟ್ಯಾಡಿ ಅವರನ್ನು ಗೆಲ್ಲಿಸಿಕೊಂಡು ಬರಲಿದ್ದಾರೆ' ಎಂದರು.'ಗ್ರಾಮ ಪಂಚಾಯಿತಿ ಸದಸ್ಯರಿಗೂ 2 ಸಾವಿರ ಗೌರವ ಧನವನ್ನು ಬಿ.ಎಸ್.ಯಡಿಯೂರಪ್ಪ ನೇತೃತ್ವದ ಬಿಜೆಪಿ ಸರ್ಕಾರ 2008ರಲ್ಲಿ ಘೋಷಣೆ ಮಾಡಿತ್ತು. ಅಧಿಕಾರ ವಿಕೇಂದ್ರೀಕರಣಕ್ಕೆ ಒತ್ತು ನೀಡಿತ್ತು' ಎಂದರು.

ಸುದ್ದಿಗೋಷ್ಠಿಯಲ್ಲಿ ಪಕ್ಷದ ಅಭ್ಯರ್ಥಿ ಕಿಶೋರ್ ಕುಮಾರ್ ಬೊಟ್ಯಾಡಿ, ಶಾಸಕ ಡಿ.ವೇದವ್ಯಾಸ ಕಾಮತ್, ಪಕ್ಷದ ಮುಖಂಡರಾದ ಸಂಜಯ ಪ್ರಭು, ನಿತಿನ್, ಪ್ರೇಮಾನಂದ ಶೆಟ್ಟಿ ಭಾಗವಹಿಸಿದ್ದರು.

ಉದಯವಾಹಿನಿ ಚಿತ್ರ

ನಮ್ಮ ಅಭ್ಯರ್ಥಿ ನಿರಾಯಾಸವಾಗಿ ಗೆಲ್ಲಲಿ

ಸಚಿವ ಮಧು ಬಂಗಾರಪ್ಪ 'ತಾಳಗುಪ್ಪ ಜನಸ್ಪಂದನ ಸಭೆ'ಗೆ ಭರ್ಜರಿ ರೆಸ್ಪಾನ್ಸ್

• ಉದಯವಾಹಿನಿ, ಶಿವಮೊಗ್ಗ

ಶುಕ್ರವಾರ ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಸಾಗರ ತಾಲ್ಲೂಕಿನ ತಾಳಗುಪ್ಪದಲ್ಲಿ ಮಹತ್ವದ ಜನಸ್ಪಂದನ ಸಭೆ ನಡೆಸಿದರು. ಇಂದಿನ ಜನಸ್ಪಂದನ ಸಭೆಗೆ ಭರ್ಜರಿ ರೆಸ್ಪಾನ್ಸ್ ದೊರೆತಿದ್ದು, 15ಕ್ಕೂ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿವೆ. ಈ ಎಲ್ಲವುಗಳನ್ನು ಕಾಲಮಿತಿಯಲ್ಲಿ ಸಮಸ್ಯೆ ಪರಿಹರಿಸುವುದಾಗಿ ಸಚಿವರು ಭರವಸೆ ನೀಡಿದ್ದಾರೆ.

ಸಾಗರ ತಾಲ್ಲೂಕಿನ ತಾಳಗುಪ್ಪ ಹೋಬಳಿಯ ರಂಗನಾಥ ಕಲ್ಯಾಣ ಮಂಟಪದಲ್ಲಿ ತಾಲೂಕು ಆಡಳಿತ, ತಾಲ್ಲೂಕು ಪಂಚಾಯತಿ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಜನಸ್ಪಂದನ ಸಭೆ ಯಲ್ಲಿ ಪಾಲ್ಗೊಂಡು, ಜನರಿಂದ ನೇರವಾಗಿ ಅಹವಾಲು ಸ್ವೀಕರಿಸಿ, ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸಲಾಯಿತು.

ಉದಯವಾಹಿನಿ ಚಿತ್ರ

ವಿವಿಧ ಇಲಾಖೆಗಳ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಹಲವಾರು ದೂರುಗಳನ್ನು ಪರಿಶೀಲಿಸಿ, ಸ್ಥಳದಲ್ಲೇ ಅನೇಕರಿಗೆ ಪರಿಹಾರ ಒದಗಿಸಲಾಯಿತು.

ಈ ವೇಳೆ ಸಾಗರ ಉಪವಿಭಾಗಾಧಿಕಾರಿಗಳಾದ ಯತೀಶ್, ಸಾಗರ ಇಒ ಗುರುಕೃಷ್ಣಶೆಣೈ, ತಹಶೀಲ್ದಾರ್ ಚಂದ್ರಶೇಖರ್, ಯೋಜನಾ ಅಧಿಕಾರಿ ಶಶಿರೇಖಾ ಸೇರಿದಂತೆ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು, ಮುಖಂಡರು ಹಾಗೂ ತಾಲ್ಲೂಕು ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

150 ಕ್ಕೂ ಹೆಚ್ಚು ಅರ್ಜಿ

ಬಳಿಕ 94.ಸಿ ಕಾಯ್ದೆಯಡಿ ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಲಾಯಿತು. ಸಾಮಾಜಿಕ ಭದ್ರತಾ ಯೋಜನೆಯಡಿ ಹಲವು ಅರ್ಜಿದಾರರಿಗೆ ಸಂಧ್ಯಾಸುರಕ್ಷಾ ಪಿಂಚಣಿ ಪತ್ರ, ಅಂಗವಿಕಲ ಪೋಷಣಾ ವೇತನ ಪತ್ರವನ್ನು ವಿತರಿಸಲಾಯಿತು. ಸುಮಾರು 150 ಕ್ಕೂ ಹೆಚ್ಚು ಅರ್ಜಿಗಳು ಬಂದಿದ್ದು, ಕಾಲಮಿತಿಯೊಳಗೆ ಎಲ್ಲರ ಸಮಸ್ಯೆ ಬಗೆಹರಿಸಿ ಸೂಕ್ತ ಪರಿಹಾರ ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು.

ಅವರು ಮಾಡಿಕೊಂಡಿರುವ ಗಾಯಕ್ಕೆ ಅವರೇ ಔಷಧಿ ಹಚ್ಚಿಕೊಳ್ಳಬೇಕು

• ಉದಯವಾಹಿನಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಲಿನ ಮೇಲೆ ಒಂದು ಕಲ್ಲು ಹಾಕಿಕೊಳ್ಳುವ ಬದಲು ಹತ್ತಾರು ಕಲ್ಲು ಹಾಕಿಕೊಂಡು ಔಷಧಿ ಇಲ್ಲದ ಹಾಗೇ ಗಾಯ ಮಾಡಿಕೊಂಡಿದ್ದಾರೆ ಎಂದು ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದರು.ಸಿಎಂ ಸಿದ್ದರಾಮಯ್ಯ ಅವರ ನಡವಳಿಗೆ ದಿನ ಒಂದೊಂದು ರೀತಿಯಲ್ಲಿ ಬದಲಾಗಿ ಕಾಣಿಸುತ್ತಿದೆ.

ಅವರು ಮಾಡಿಕೊಂಡಿರುವ ಗಾಯಕ್ಕೆ ಅವರೇ ಔಷಧಿ ಹಚ್ಚಿಕೊಳ್ಳಬೇಕು. ಈವಾಗ ರಾಜೀನಾಮೆ ನೀಡಬೇಕು. ತಪ್ಪಿತಸ್ಥರಲ್ಲಾ ಅಂದರೆ ಮತ್ತೇ ಸಿಎಂ ಆಗಿ ಮುಂದುವರಿಯಬಹುದು, ಮುಡಾ ಪ್ರಕರಣ ಜಗಜ್ಜಾಹೀರವಾಗಿದೆ. ಆದರೆ ಅದನ್ನು ಸಿಎಂ ಅರ್ಥ ಮಾಡಿಕೊಳ್ಳುತ್ತಿಲ್ಲಾ, ಸಿಎಂ ಸಿದ್ದರಾ ಮಯ್ಯ ಅವರ ನಡವಳಿಕೆ ದಿನಾ ದಿನಾ ಒಂ ದೊಂದು ತರ ಆಗುತ್ತಿದೆ. ಈಗ ಬೆಕ್ಕಿಗೆ ಗಂಟೆ ಕಟ್ಟವರು ಯಾರು? ನಾವು ನೀ ವು ಕಟ್ಟಲು ಆಗುತ್ತಾ? ಎಂದು ಪ್ರಶ್ನಿ ಸಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ನಾನು ಒಟ್ಟಿಗೆ ರಾಜಕೀಯಕ್ಕೆ ಬಂದವರು. ಮುಡಾ ಪ್ರಕರಣ ಜಗಜ್ಜಾಹೀರವಾಗಿದ್ದು, ಅದನ್ನು ಸಿಎಂ ಅರ್ಥ ಮಾಡಿಕೊಳ್ಳುತ್ತಿಲ್ಲ. ಸಿಎಂ ಸಿದ್ದರಾಮಯ್ಯ ಅವರೇ ಆತ್ಮಸಾಕ್ಷಿ ಬಗ್ಗೆ ಮಾತನಾಡಿದ್ದಾರೆ. ಮೊದಲೇ ನಿವೇಶನಗಳನ್ನು ವಾಪಸ್ ಕೊಡಬೇಕಿತ್ತು. ವ್ಯವಸ್ಥೆಯಲ್ಲಿ ಯಾರೂ ದೊಡ್ಡವರಲ್ಲ. ಕಾನೂನು ಎಲ್ಲರಿಗೂ ಒಂದೇ' ಎಂದು ಹೇಳಿದರು. ರಾಜಕೀಯವಾಗಿ ಹೇಳುವುದಾದರೆ ಸಿಎಂ ಸಿದ್ದರಾಮಯ್ಯ ಹಾಗೂ ನಾನು ಒಟ್ಟಿಗೆ ರಾಜಕೀಯಕ್ಕೆ ಕ್ಷೇತ್ರಕ್ಕೆ ಬಂದಿದ್ದೇವೆ. ಉಳಿದವರಂತೆ ನಾನು ಬೇರೆ ಭಾಷೆಯಲ್ಲಿ ಮಾತನಾಡಲು ಆಗೋದಿಲ್ಲ, ಅದು ಸಾಧ್ಯವೂ ಇಲ್ಲ, ಏಕೆಂದರೆ ನಮಗೆ ಸಂಸ್ಕಾರ ಇದೆ. ಸಿದ್ದರಾಮಯ್ಯ ಅವರು ಶಾಸನ ಸಭೆಯಲ್ಲಿ ಸೈಟ್ ವಾಪಸ್ ಕೊಡಬೇಕಾಗಿತ್ತು. ಆದರೆ ಅವರು ಹಾಗೆ ನಡೆದುಕೊಡಿಲ್ಲ ಎಂದು ಸಿಎಂ ಅವರನ್ನು ಸೋಮಣ್ಣ ದೂರಿದರು.

ಬೆಕ್ಕಿಗೆ ಗಂಟೆ ಕಟ್ಟುವವರು ಯಾರು

ಇನ್ನು ನಮ್ಮ ಆರ್ ಅಶೋಕ ಅವರ ಹೆಸರನ್ನು ಸಿಎಂ ಸಿದ್ದರಾಮಯ್ಯ ಅವರ ಪ್ರಕರಣಕ್ಕೆ ಸಂಬಂಧ ಕಲ್ಪಿಸಿ ತಳಕು ಹಾಕಲಾಗುತ್ತಿದೆ. ಆದರೆ ಆರ್ ಆಶೋಕ್ ಅವರ ಹೆಸರು ಏಕೆ ಇಲ್ಲಿ ಬಂತು ಎತ್ತಣ ಮಾಮರ ಎತ್ತಣ ಕೋಗಿಲೆ ಎಂಬಂತಾಗಿದೆ

-ವಿ. ಸೋಮಣ್ಣ, ಕೇಂದ್ರ ಸಚಿವ

ಅರಕಲಗೂಡು ದಸರಾ ತಾಲ್ಲೂಕಿನ ಸಾಂಸ್ಕೃತಿಕ ಹೆಮ್ಮೆ ; ಶಾಸಕ

• ಉದಯವಾಹಿನಿ, ಅರಕಲಗೂಡು

ಪಟ್ಟಣದಲ್ಲಿ ವೈಭವದಿಂದ ನಡೆಯುತ್ತಿರುವ ದಸರಾ ಉತ್ಸವ ತಾಲ್ಲೂಕಿನ ಸಾಂಸ್ಕೃತಿಕ ಹೆಮ್ಮೆಯಾಗಿದೆ ಎಂದು ಶಾಸಕ ಎ. ಮಂಜು ತಿಳಿಸಿದರು.ಗ್ರಾಮ ದೇವತೆ ದೊಡ್ಡಮ್ಮ ದೇವಾಲಯದ ಆವರಣದಲ್ಲಿ ಗುರುವಾರ ಸಂಜೆ ಅರಕಲಗೂಡು ದಸರಾ ಉತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪಟ್ಟಣದಲ್ಲಿ ಬಹಳ ಹಿಂದಿನಿಂದಲೂ ದಸರಾ ಉತ್ಸವ ನಡೆದು ಬಂದಿತ್ತು.

ಕಾರಣಾಂತರಿಂದ ಕೆಲಕಾಲ ಸ್ಥಗಿತಗೊಂಡಿದ್ದ ಇದಕ್ಕೆ 24 ವರ್ಷಗಳ ಹಿಂದೆ ಮರುಚಾಲನೆ ನೀಡಿ ವೈಭವದಿಂದ ನಡೆಸಿಕೊಂಡು ಬರುತ್ತಿದ್ದು ರಾಜ್ಯದಾದ್ಯಂತ ಗಮನ ಸೆಳೆದಿದೆ ಎಂದರು. 2025ಕ್ಕೆ ದಸರಾ ಉತ್ಸವಕ್ಕೆ ಮರು ಚಾ ಲನೆ ನೀಡಿ 25 ವರ್ಷ ಗಳಾಗಲಿದ್ದು ಬೆಳ್ಳಿ ಹಬ್ಬದ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಿಸಲು ಕ್ರಮ ವಹಿಸುವುದಾಗಿ ಹೇಳಿದರು. 10 ದಿನಗಳ ಕಾಲ ನಡೆಯುವ ದಸರಾ ಉತ್ಸವದಲ್ಲಿ ಮಹಿಳಾ ದಸರಾ, ನೌಕರರ ದಸರಾ, ಯುವದಸರಾ, ಪರಿಸರ ದಸರಾ, ರೈತರ ದಸರಾ, ಭೂಮಿದಸರಾ, ಪಂಚಾಯತ್ ರಾಜ್ ದಸರಾ ಆಯೋಜಿಸಲಾಗಿದೆ. ಆಯುಧ ಪೂಜೆಯಂದು ಪಪಮ ಕಚೇರಿ ಆವರಣದಲ್ಲಿ ಸರ್ಕಾರ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	09:00 ರಿಂದ 10:30
ಗುಳಿಕ ಕಾಲ	ಬೆಳಿಗ್ಗೆ	06:00 ರಿಂದ 07:30
ಯಮಗಂಡ ಕಾಲ	ಮಧ್ಯಾಹ್ನ	01:30 ರಿಂದ 03:00

ಮೇಷ ಆರೋಗ್ಯ ಚೆನ್ನಾಗಿರುತ್ತದೆ. ಇಂದು ನಿಮ್ಮ ಯಾವುದೇ ಚಲಿಸಬಲ್ಲ ಆಸ್ತಿಯನ್ನು ಕದಿಯಬಹುದು ಆದ್ದರಿಂದ ಸಾಧ್ಯವಾದಷ್ಟು ಅದರ ಬಗ್ಗೆ ಗಮನ ಹರಿಸಿ. ನಿವಾಸದ ಬದಲಾವಣೆ ಹೆಚ್ಚು ಶ್ರೇಯಸ್ಕರವಾಗಿರುತ್ತದೆ.

ವೃಷಭ ಒಮ್ಮೆ ಈ ಭಾವನೆಗಳು ಸಂಪೂರ್ಣವಾಗಿ ಹತೋಟಿಗೆ ತೆಗೆದುಕೊಂಡ ನಂತರ ಮನಸ್ಸು ತಾನಾಗಿಯೇ ಪ್ರತಿ ಪರಿಸ್ಥಿತಿಗೂ ಧನಾತ್ಮಕವಾಗಿ ಪ್ರತಿಕ್ರಿಯಿಸುತ್ತದೆ. ಆಸ್ತಿ ವ್ಯವಹಾರಗಳು ಅಸಾಧಾರಣ ಲಾಭ ತರುತ್ತವೆ.

ಮಿಥುನ ಒಟ್ಟಾರೆ ಆರೋಗ್ಯ ಉತ್ತಮವಾಗಿದ್ದರೂ ಪ್ರಯಾಣ ಒತ್ತಡಮಯವೂ ಮತ್ತು ಕಷ್ಟಕರವೂ ಆಗಿರುತ್ತದೆ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ.

ಕರ್ಕಾಟಕ ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ.

ಸಿಂಹ ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ.

ಕನ್ಯಾ ನಿಮ್ಮ ಹೆಚ್ಚು ಆತ್ಮವಿಶ್ವಾಸವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಒತ್ತಡದ ದಿನದ ಹೊರತಾಗಿಯೂ ನೀವು ನಿಮ್ಮ ಚೈತನ್ಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ.

ತುಲಾ ಚಾಲನೆ ಮಾಡುವಾಗ ಎಚ್ಚರ ವಹಿಸಿ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ.

ವೃಶ್ಚಿಕ ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ ಮತ್ತು ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ .

ಧನಸ್ಸು ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು.

ಮಕರ ವಿಶ್ರಾಂತಿಯ ಸಲುವಾಗಿ ನಿಕಟ ಸ್ನೇಹಿತರೊಂದಿಗೆ ಸ್ವಲ್ಪ ಸಮಯ ಕಳೆಯಿರಿ. ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು.

ಕುಂಭ ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ.

ಮೀನ ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ.

ಶ್ರೀ ಮಹಾಲಕ್ಷ್ಮಿ ದೇವಿಯ ತೊಟ್ಟಿಲೋತ್ಸವ ಕಾರ್ಯಕ್ರಮ

ಶ್ರೀ ಭಾಗಪ್ಪ ಹರಿಜನ ಅವರು ಗ್ರಾಮಸ್ಥರ ಜೊತೆಗೂಡಿ ಗ್ರಾಮದ ಒಳಿತಿಗಾಗಿ ಅತೀ ಶ್ರದ್ಧಾ ಭಕ್ತಿಯಿಂದ ಆಚರಣೆ

• ಉದಯವಾಹಿನಿ, ಇಂಡಿ

ಸಮೀಪದ ಆಲಮೇಲ ಗುರುವಾರ ವಾರ ಶ್ರೀ ಮಹಾಲಕ್ಷ್ಮಿ ದೇವಿಯ ದೇವಸ್ಥಾನದಲ್ಲಿ ದೇವಿಯ ಭಕ್ತರಾದ ಶ್ರೀ ಭಾಗಪ್ಪ ಹರಿಜನ ಅವರಿಂದ ತೊಟ್ಟಿಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಬೆಳಗ್ಗೆಯಿಂದ ಶ್ರೀ ಮಹಾಲಕ್ಷ್ಮಿ ದೇವಿಯ ಮೂರ್ತಿಗೆ ಬಿಲ್ವಾರ್ಚಾನೆ, ಮಹಾಭಿಷೇಕ, ಹೋಮ, ಪಂಚಾಮೃತ ಅಭಿಷೇಕ, ಮಹಾನೈವೇದ್ಯ, ಮಂಗಳಾರತಿ ಹೀಗೆ ನಾನಾ ಧಾರ್ಮಿಕ ಕಾರ್ಯ ಕ್ರಮ ಶ್ರೀ ಭಾಗಪ್ಪ ಹರಿಜನ ಅವರ ನೇತೃತ್ವದಲ್ಲಿ ನೆರವೇರಿಸಲಾಯಿತು.

ಸಂಜೆ ಮಹಿಳೆಯರು, ಶರಣರು ಭಕ್ತಾದಿಗಳು ಗ್ರಾಮಸ್ಥರು ದೇವರ ತೊಟ್ಟಿಲು ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಶ್ರೀ ಮಹಾಲಕ್ಷ್ಮಿ ದೇವಿಯ ಕಟ್ಟಡಕ್ಕೆ ಕಾರಣಕರ್ತರಾದ ಶ್ರೀ ಭಾಗಪ್ಪ ಹರಿಜನ ಅವರು ಶ್ರೀ ಮಹಾಲಕ್ಷ್ಮಿ ದೇವಿಯ ತೊಟ್ಟಿಲು ಕಾರ್ಯಕ್ರಮವನ್ನು ಗ್ರಾಮಸ್ಥರ ಜೊತೆ ಗೂಡಿ ಗ್ರಾಮಸ್ಥರ ಒಳಿತಿಗಾಗಿ ಅತೀ ಶ್ರದ್ಧಾ ಭಕ್ತಿಯಿಂದ ಆಚರಿಸಿದರು.

ಬೆಳಿಗ್ಗೆಯೇ ವಿಶೇಷ ಪೂಜೆ

ದೇವಸ್ಥಾನವನ್ನು ಹೂಗಳಿಂದ ಅಲಂಕರಿಸಲಾಗಿತ್ತು. ಬೆಳಿಗ್ಗಿಯೇ ವಿಶೇಷ ಪೂಜೆ, ವಿವಿಧ ಧಾರ್ಮಿಕ ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಿದವು.

ಗ್ರಾಮದಲ್ಲಿ ಶ್ರೀ ಮಹಾಲಕ್ಷ್ಮಿ ದೇವಿಯ ದೇವಸ್ಥಾನದಲ್ಲಿ ಬೆಳಿಗ್ಗೆಯೇ ತೊಟ್ಟಿಲೋತ್ಸವ ನಡೆಯಿತು. ಗ್ರಾಮಸ್ಥರು ಸುತ್ತ ಮುತ್ತಲಿನ ಹಳ್ಳಿಗಳಿಂದ, ನಗರಗಳಿಂದ ನೂರಾರು ಜನರು ಸರತಿ ಸಾಲಿನಲ್ಲಿ ನಿಂತು ಶ್ರೀ ಮಹಾಲಕ್ಷ್ಮಿ ದೇವಿಯ ತೊಟ್ಟಿಲು ಕಾರ್ಯಕ್ರಮದಲ್ಲಿ ಭಾಗಿಯಾಗಿ ಭಕ್ತಿ ಭಾವ ಮೆರೆದರು. ಕೊಡುಗೈ ಧಾನಿ ಶ್ರೀ ಭಾಗಪ್ಪ ಹರಿಜನ ಅವರ ಸ್ವಖರ್ಚಿನಿಂದ ದೇವಸ್ಥಾನವನ್ನು


ಉದಯವಾಹಿನಿ ಚಿತ್ರ

ಕಟ್ಟಿಸಿ ಗ್ರಾಮಸ್ಥರ ಒಳಿತಿಗಾಗಿ ಪೂಜೆಸಲ್ಲಿಸಿ ಶ್ರೀ ಮಹಾಲಕ್ಷ್ಮಿ ದೇವಿಯ ನೈವೇದ್ಯ ಭಕ್ತಾದಿಗಳಿಗೆ ತೀರ್ಥ ಪ್ರಸಾದವನ್ನು ವಿತರಿಸಿ ನೂರಾರು ಜನರ ಗಮನಸೆಳೆದರು.

ತಾಯಿಯ ಯಲ್ಲಮನ ಕೊಡಗಳ ವಿಜೃಂಭಣೆ ನೃತ್ಯ ಮಾಡುತ್ತಾ ವಾದ್ಯ ಮೇಳಗಳ ಮುಖಾಂತರ ಊರಿನ ಬಿದಿಗಳಲ್ಲಿ ಮೇರೆವಣಿಗೆ ಮುಖಾಂತರ ಊರಿನ ಹಿರಿಯರು ಕಾರ್ಯಕ್ರಮ ನೆರೆವೇರಿಸಿದರು. ಈ ಕಾರ್ಯಕ್ರಮವನ್ನು ದೇವಿಯ ಭಕ್ತರಾಗಿ ಸೇವಕರಾಗಿ ಬಾಗಪ್ಪ ಹರಿಜನ ಮಾಹಾಲಕ್ಷ್ಮಿ

ಶ್ರೀ ಮಹಾಲಕ್ಷ್ಮಿ ದೇವಿಯ ತೊಟ್ಟಿಲೋತ್ಸವ ಕಾರ್ಯಕ್ರಮ

ಸ್ಥಳೀಯ ಪ್ರಮುಖ ರಸ್ತೆ, ವೃತ್ತ ಗ್ರಾಮದ ಬೀದಿ ಬೀದಿಗಳಲ್ಲಿ ಶ್ರೀ ಮಹಾಲಕ್ಷ್ಮಿ ದೇವಿಯ ಮೂರ್ತಿ, ಕುಂಭ ಕಳಸದ ಮೆರವಣಿಗೆ ನಡೆಯಿತು. ಡೊಳ್ಳು ಕುಣಿತ ತಾಳ-ಮೇಳಗಳೊಂದಿಗೆ ತೊಟ್ಟಿಲೋತ್ಸವ ನಡೆಯಿತು. ಮುಖಂಡರಾದ ಶ್ರೀ ಭಾಗಪ್ಪ ಹರಿಜನ, ಮತ್ತಿತರರು ಇದ್ದರು.

ತಾಯಿ ಭಕ್ತಿಗೆ ಶರಣು

ಹಲವಾರು ಕಾರ್ಯ ಕ್ರಮವನ್ನು ವಿಜೃಂಭಣೆಯಿಂದ ಹಳೆ ಊರಿನ ಗರ್ಭ್ ಗುಡಿಯಿಂದ ನಂದಿ ಮಾರ್ಗ ವಾಗಿ ಹಲವಾರು ಕಾರ್ಯಕ್ರಮ ಮಾಡುತ್ತಾ ದೇವಿ ಸ್ವರೂಪವನ್ನು ಎತ್ತಿನ ಗಾಡಿಯ ಮೂಲಕ ಸುಮಾರು ಮೂರರಿಂದ ನಾಲ್ಕು ಕಿಲೋಮೀಟರ್ ಭಕ್ತರ ಸಾಲು ಸಾಲಾಗಿ ಪ್ರತಿಯೊಬ್ಬರ ಮನೆಯಿಂದ ದೇವಿಯ ಪಾದ ಪೂಜೆ ಮಾಡಿ ಕಾಯಿ ಕರ್ಪೂರ ನೈವಿದ್ಯಾ ನೀಡುತ್ತಾ ತಾಯಿ ಭಕ್ತಿಗೆ ಶರಣಾಗಿ ಇಡೀ ಊರಿನ ಜನ ತಾಯಿ ಮಡಿಲ್ಲಿ ತೊಟ್ಟಿಲು ಕಾರ್ಯ ಕ್ರಮಜರಿಗಿಸಿ ಕೊಟ್ಟರು.

ದೇವಿ ಪ್ರತಿಷ್ಠಾಪನೆ ಮಾಡಿ ಊರಿನ ಜನತೆಗೆ ಪ್ರೀತಿ ಪಾತ್ರರಾಗಿ ಜನರ ಮನಸಿನಲ್ಲಿ ಮಾಹಾಲಕ್ಷ್ಮಿ ನೆಲಿಸಲು ಕಾರಣ ಭೂತರಾಗಿ ಕಾರ್ಯಕ್ರಮ ಯಶಸ್ವಿಯಾಗಿ ಮಾಡಿದರು. ಬ್ಯಾಡಗಿಹಾಳ ಗ್ರಾಮದಲ್ಲಿ ನಡೆದ ಅದ್ದೂರಿ ತೊಟ್ಟಿಲು ಕಾರ್ಯಕ್ರಮ ಭಕ್ತಾದಿಗಳು ಯಶಸ್ವಿಗೊಳಿಸಿದರು. ಹರಕೆ ಹೊತ್ತ ನೂರಾರು ಭಕ್ತರು ದೇವಸ್ಥಾನಕ್ಕೆ ಆಗಮಿಸಿ ಕಾಯಿ ಕರ್ಪೂರ ಒಡೆದು ಭಕ್ತಿಯಿಂದ ನಮಸ್ಕರಿಸಿ ಜೀವನದಲ್ಲಿ ಶಾಂತಿ ನೆಮ್ಮದಿ ಪ್ರಾಪ್ತಿಯಾಗಲಿ ಎಂದು ಬೇಡಿಕೊಂಡರು.

ಜಾನಪದ ಸಾಹಿತ್ಯದಿಂದ ಸಾಮಾಜಿಕ ಪರಿವರ್ತನೆ ಸಾಧ್ಯ

• ಉದಯವಾಹಿನಿ, ಯಡ್ರಾಮಿ

ನಮ್ಮತನ, ಹೃದಯ ಶ್ರೀಮಂತಿಕೆ, ಮಾನವೀಯ ಮೌಲ್ಯಗಳು, ಸಾಮಾಜಿಕ ಕಾಳಜಿ, ಕೌಟುಂಬಿಕ ಸಾಮರಸ್ಯ ಸೇರಿದಂತೆ ಬದುಕಿನ ಶ್ರೀಮಂತಿಕೆಯನ್ನು ಕಟ್ಟಿ ಕೊಡುವ, ನಮ್ಮ ದೇಶದ ಮೂಲ ಸಂಸ್ಕೃತಿ, ಪರಂಪರೆಯಾದ ಜಾನಪದ ಸಾಹಿತ್ಯದಿಂದ ಸಾಮಾಜಿಕ ಪರಿವರ್ತನೆ ಸಾಧ್ಯವಿದೆ ಎಂದು ಪೂಜ್ಯ ಶ್ರೀ ಸಿದ್ಧಲಿಂಗ ಸ್ವಾಮೀಜಿ ಅಭಿಮತಪಟ್ಟರು.

ಪಟ್ಟಣದ ಕನ್ಯಾ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ 'ಕನ್ನಡ ಜಾನಪದ ಪರಿಷತ್‌ನ ತಾಲ್ಲೂಕಾ ಘಟಕದಿಂದ ಹಮ್ಮಿಕೊಳ್ಳಲಾಗಿದ್ದ ಪರಿಷತ್ ನೂತನ ಪದಾಧಿಕಾರಿಗಳ ಪದಗ್ರಹಣ, ವಿಶ್ವ ಜಾನಪದ ದಿನಾಚರಣೆ, ಮೋಹನರಾಗ' ಮತ್ತು 'ಅಮೃತ ಧಾರೆ' ಕವನ ಸಂಕಲನ ಬಿಡುಗಡೆ ಹಾಗೂ ಜಾನಪದ ಕಲಾವಿದರು, ಶಿಕ್ಷಕರು, ನಿವೃತ್ತ ಶಿಕ್ಷಕರಿಗೆ ಸತ್ಕಾರ, ಕಲಾ ಪ್ರದರ್ಶನ ಕಾರ್ಯಕ್ರಮ ದಲ್ಲಿ ಅವರು

ಉದಯವಾಹಿನಿ ಚಿತ್ರ

ಕವನ ಸಂಕಲನ ಬಿಡುಗಡೆ

ಆಶೀರ್ವಚನ ನೀಡಿ, ಸತ್ವಯುತ ಸಾಹಿತ್ಯ ಹೊರಬರಬೇಕಾಗಿದೆ. ಜಾನಪದ ಸಂಸ್ಕೃತಿ, ಪರಂಪರೆ ಉಳಿಸಿ-ಬೆಳೆಸಿ ಅದನ್ನು ಮುಂದಿನ ಪೀಳಿಗೆಗೆ ವರ್ಗಾಯಿಸುವ ಕಾರ್ಯ ಎಲ್ಲರು ಮಾಡಬೇಕಾಗಿದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕಜಾಪ ಜಿಲ್ಲಾಧ್ಯಕ್ಷ ಎಂ.ಬಿ.ನಿಂಗಪ್ಪ, ಜನರಿಂದ, ಜನರಿಗಾಗಿ, ಸಾಮಾನ್ಯ ಜನರೇ ರಚಿಸಿದ ಸಾಹಿತ್ಯ ಜನಪದವಾಗಿದೆ. ಇದು ಶಿಷ್ಟ ಸಾಹಿತ್ಯಕ್ಕೆ ತಾಯಿಬೇರಾಗದ್ದು, ಬದುಕುವ ಕಲೆಯನ್ನು ಕಲಿಸಿಕೊಡುತ್ತದೆ. ಜನಪದ ಸಂಸ್ಕೃತಿ, ಪರಂಪರೆಯನ್ನು ಉಳಿಸಿ, ಬೆಳೆಸಬೇಕು ಎಂಬ ಉದ್ದೇಶಕ್ಕಾಗಿಯೇ ನಮ್ಮ ಪರಿಷತ್ ಕಳೆದ ಒಂಬತ್ತು ವರ್ಷಗಳಿಂದ ಅನೇಕ ಕಾರ್ಯಕ್ರಮಗಳ ಮೂಲಕ ಜನಜಾಗೃತಿ ಮಾಡುತ್ತಿದೆ. ಎಲ್ಲಾ ಜಾನಪದ ಕಲಾವಿದರಿಗೆ ಮಾಸಾಶನ, ಪ್ರಶಸ್ತಿ-ಪುರಸ್ಕಾರ, ಗೌರವಗಳು, ಕಲಾವಿದರ ಮಕ್ಕಳಿಗೆ ಶಿಕ್ಷಣ ಮತ್ತು ಉದ್ಯೋಗಾವಕಾಶಗಳಲ್ಲಿ ಆದ್ಯತೆ, ವಸತಿ ಸೌಕರ್ಯ ಸೇರಿದಂತೆ ಮುಂತಾದ ಸೌಲಭ್ಯಗಳನ್ನು ಸರ್ಕಾರವು ನೀಡಬೇಕು ಎಂದು ಇದೇ ಸಂದರ್ಭದಲ್ಲಿ ಮನವಿ ಮಾಡಿದರು.

ಮೋಹನರಾಗ ಮತ್ತು ಅಮೃತಧಾರೆ ಕವನ ಸಂಕಲನಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಹಿರಿಯ ಸಂಶೋಧಕ ಡಿ.ಎನ್.ಅಕ್ಕಿ, ಸಾಹಿತ್ಯ ರಚನೆಗೆ ನಿರಂತರ ಹಾಗೂ ಆಳವಾದ ಅಧ್ಯಯನ ಅಗತ್ಯ. ಆಶಯಕ್ಕೆ ಒತ್ತು ನೀಡಿ ಕಾವ್ಯಗಳು ರಚಿಸುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು. ನಂತರ ವಿವಿಧ ಜಾನಪದ ಕಲಾ ಪ್ರದರ್ಶನ ಜರುಗಿತು.

ಆರ್ಥಿಕ, ಶೈಕ್ಷಣಿಕ ಗಣತಿ ಅನುಷ್ಠಾನಕ್ಕೆ ಆಗ್ರಹ

• ಉದಯವಾಹಿನಿ, ಕೊಪ್ಪಳ

ರಾಜ್ಯದ ಎಲ್ಲಾ ಸಮುದಾಯಗಳ ಜನರ ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕ ಸ್ಥಿತಿಗತಿ ಬಗ್ಗೆ ಕ್ರಮ ತಿಳಿಯಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಂದು ವಾರದ ಒಳಗೆ ಹಿಂದುಳಿದ ವರ್ಗಗಳ ಆಯೋಗದ ವರದಿ ಬಹಿರಂಗಗೊಳಿಸಬೇಕು, ನವೆಂಬರ್ ಒಂದರಿಂದ ಅನುಷ್ಠಾನಗೊಳಿಸಬೇಕು ಎಂದು ಸಿ.ಎಂ. ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಆಗ್ರಹಿಸಿದರು.

ತಾಲ್ಲೂಕಿನ ಗಿಣಗೇರಾದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಆಯೋಗದ ವರದಿ ಅನುಷ್ಠಾನಕ್ಕೆ ತರುವುದರಿಂದ ಸಾಮಾಜಿಕ ನ್ಯಾಯ ಸಿಗಲಿದೆ. ಮುಂದಿನ ವಾರದೊಳಗೆ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಬೇಕು. ಸಿಂಧನೂರಿನಲ್ಲಿ ಇಂದು ನಡೆಯುವ ಕಾರ್ಯಕ್ರಮದಲ್ಲಿ ಇದನ್ನು ಘೋಷಣೆ ಮಾಡಬೇಕು ಎಂದರು. 2014ರಲ್ಲಿ ನಮ್ಮ ಸರ್ಕಾರವಿದ್ದಾಗ ಆಯೋಗ ರಚಿಸಲಾಗಿತ್ತು. ಬಜೆಟ್ ನಲ್ಲಿ 165 ಕೋಟಿ ಮೀಸಲಿಟ್ಟು, ಕಾಂತರಾಜ್ ನೇತೃತ್ವದ ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ರಚಿಸಲಾಗಿತ್ತು. ಈ ಆಯೋಗದ ವರದಿಯು ಅಪೂರ್ಣ ವಾಗಿತ್ತು. ಜಯಪ್ರಕಾಶ ಹೆಗ್ಡೆ ಫೆಬ್ರುವರಿಯಲ್ಲಿ ಸಲ್ಲಿಸಿರುವ ವರದಿ ಅನುಷ್ಠಾನ ಮಾಡಬೇಕು ಎಂದರು.

ಈ ವಿಷಯದ ಕುರಿತು ಸಿದ್ದರಾಮಯ್ಯ ಅವರೊಂದಿಗೂ ಮಾತನಾಡಿದ್ದೇನೆ. ಆದರೆ, ಇದು ಜಾತಿಗಣತಿ ಅಲ್ಲ. ಆಯೋಗದ ವರದಿ ಅನುಷ್ಠಾನಕ್ಕೆ ತಂದರೆ ಒಳಮೀಸಲಾತಿ ಕುರಿತು ಸ್ಪಷ್ಟ ತೀರ್ಮಾನ ಕೈಗೊಳ್ಳಲು ಸಾಧ್ಯವಾಗುತ್ತದೆ ಎಂದರು.

ಶಸ್ತ್ರತ್ಯಾಗ ಮಾಡಿದ ಕಾಂಗ್ರೇಸ್

• ಉದಯವಾಹಿನಿ, ಯಾದಗಿರಿ

ಇಲ್ಲಿನ ನಗರಸಭೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆದು ಬಿಜೆಪಿ ಗದ್ದುಗೆ ಅಲಂಕರಿಸಿದೆ. ಈ ಮೂಲಕ 10ನೇ ಅವಧಿಯನ್ನು ಬಿಜೆಪಿ ತನ್ನಲ್ಲೆ ಉಳಿಸಿಕೊಂಡಿದೆ. ಆದರೆ, ಕಾಂಗ್ರೇಸ್ ಶಾಸಕ, ಸಂಸದರಿದ್ದರೂ ಶಸ್ತ್ರತ್ಯಾಗ ಮಾಡುವ ಮೂಲಕ ಬಿಜೆಪಿಗೆ ಅಧಿಕಾರ ಬಿಟ್ಟುಕೊಟ್ಟಿದೆ ಎನ್ನುವ ಮಾತುಗಳು ಕಾಂಗ್ರೇಸ್‌ನಲ್ಲಿ ಕೇಳಿ ಬರುತ್ತಿವೆ.

ಯಾದಗಿರಿ ನಗರಸಭೆಯಲ್ಲಿ ಕಾಂಗ್ರೇಸ್‌ನ 12 ಸದಸ್ಯರಿದ್ದರೂ ಕೂಡ ಸೂಕ್ತ ಒಬ್ಬರನ್ನು ಆಯ್ಕೆ ಮಾಡದೆ ಬಿಜೆಪಿಯೊಂದಿಗೆ ಹೊಂದಾಣಿಕೆ ಮಾಡಿಕೊಂಡಿರುವ ಜೆಡಿಎಸ್ ಸದಸ್ಯರಿಗೆ ಬೆಂಬಲಿಸಿದ್ದನ್ನು ಗಮನಿಸಿದರೆ ಯುದ್ದ ಭೂಮಿಗಿಳಿಯದೇ ಶರಣಾಗತರರಾಗುವುದು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಕಾಂಗ್ರೇಸ್‌ನಲ್ಲಿ ಹಲವರು ಅಧ್ಯಕ್ಷ ಸ್ಥಾನದ ಆಕಾಂಕ್ಷಿಗಳಾಗಿದ್ದರು. ಆದರೆ, ಅವರಿಗೆ ಅವಕಾಶ ವಂಚಿತರನ್ನಾಗಿ ಮಾಡಲಾಗಿದೆ


ಉದಯವಾಹಿನಿ ಚಿತ್ರ

ಎನ್ನುವ ಮಾತುಗಳು ಕೇಳಿ ಬರುತ್ತಿವೆ. ಬಿಜೆಪಿ, ಕಾಂಗ್ರೇಸ್ ಮತ್ತು ಜೆಡಿಎಸ್ ತೀವ್ರ ರಾಜಕೀಯ ತಂತ್ರಗಳ ನಡುವೆ, ಬಿಜೆಪಿ ಅಂತಿಮವಾಗಿ ನಗರಸಭೆಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆಯಾಗಿ ಅಧ್ಯಕ್ಷ ಸ್ಥಾನ ಆಕ್ರಮಿಸಿ ಕೊಳ್ಳುವಲ್ಲಿ ಯಶಸ್ವಿಯಾಗಿದೆ.

ಚುನಾವಣೆ ಪೂರ್ವದಲ್ಲಿ ಬಿಜೆಪಿ ಒಳಗಡೆ ಅಸಮಾಧಾನದ ಹೊಗೆ ಹರಿದಾಡುತ್ತಿತ್ತು ಎಂದು ಹೇಳಲಾಗಿತ್ತು.

ಅಸಮಾಧಾನ ಲಾಭ ಪಡೆಯುವಲ್ಲಿ ಕಾಂಗ್ರೆಸ್ ವಿಫಲವಾಗಿದೆ ಎಂದು ಕಾಂಗ್ರೇಸ್ ಸದಸ್ಯರ ಅಂಬೋಣ. ಕಾಂಗ್ರೇಸ್ ಪಕ್ಷದ ನಾಯಕರಲ್ಲಿ ಸಮನ್ವಯ ಕೊರತೆ ಎದ್ದು ಕಾಣುತ್ತಿತ್ತು ಎಂದು ಅರ್ಥೈಸಲಾಗುತ್ತಿದೆ.

ಸಮುದಾಯ ಆರೋಗ್ಯಾಧಿಕಾರಿಗಳಿಗೆ ತುರ್ತು ಚಿಕಿತ್ಸೆ ತರಬೇತಿ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲೆಯ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಕಾವೇರಿ ಆಸ್ಪತ್ರೆ ವತಿಯಿಂದ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ತುರ್ತು ಚಿಕಿತ್ಸೆ, ಸ್ಟ್ರೋಕ್, ಸಿಪಿಆರ್ ಬಗ್ಗೆ ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಹಾವು, ನಾಯಿ ಮತ್ತು ಬೇರೆ ಬೇರೆ ಪ್ರಾಣಿಗಳ ಕಡಿತ, ಅಲರ್ಜಿ, ಅಲರ್ಜಿಯಿಂದಾದ ಕಾಯಿಲೆಗಳು, ಅಪಘಾತಗಳು, ಪಾಶ್ವವಾಯು, ಮೆದುಳಿನ ಜೀವಕೋಶಗಳಿಗೆ ಹಾನಿಯುಂಟಾದಾಗ ಉದ್ಭವಿಸುವ ದೈಹಿಕ ತೊಂದರೆ. ಇದರ ಸಾಮಾನ್ಯ ಲಕ್ಷಣಗಳೆಂದರೆ ಅಂಗಾಂಗಗಳ ಸ್ವಾಧೀನ ತಪ್ಪುವಿಕೆ. ಸಮತೋಲನ, ಮಾತು ಮತ್ತು

ಉದಯವಾಹಿನಿ ಚಿತ್ರ

ಎಲ್ಲರೂ ಒಂದಾಗಿ ಇಸ್ರೇಲ್ ದೇಶವನ್ನು ಸೋಲಿಸೋಣ

ಇರಾನ್ ಸರ್ವೋಚ್ಚ ನಾಯಕ ಖಮೇನಿ ಶುಕ್ರವಾರದ ಘೋಷಣೆ, ಇಸ್ರೇಲ್ ಮೇಲೆ ಇರಾನ್ ನಡೆಸಿದ ಖಂಡಾಂತರ ಕ್ಷಿಪಣಿ ದಾಳಿ ಕಾನೂನು ಬದ್ಧ

ಇರಾನ್: ಇಸ್ರೇಲ್ ದೇಶದ ಮೇಲೆ ನೂರಾರು ಖಂಡಾಂತರ ಕ್ಷಿಪಣಿಗಳನ್ನು ಏಕಕಾಲಕ್ಕೆ ಉಡಾಯಿಸಿ ತನ್ನ ಶಕ್ತಿ ಪ್ರದರ್ಶನ ಮಾಡಿದ್ದ ಇರಾನ್, ಇದೀಗ ಯುದ್ಧ ಭೀತಿಯಲ್ಲಿದೆ. ಆದಾಗ್ಯೂ ಇರಾನ್ ಸರ್ವೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಇರಾನ್ ರಾಜಧಾನಿ ತೆಹರಾನ್‌ನಲ್ಲಿ ಲಕ್ಷ ಲಕ್ಷ ಜನರನ್ನು ಉದ್ದೇಶಿಸಿ ತಮ್ಮ ಶುಕ್ರವಾರದ ಧರ್ಮೋಪದೇಶ ನೀಡಿದರು. ಬರೋಬ್ಬರಿ 5 ವರ್ಷಗಳ ಬಳಿಕ ಇದೇ ಮೊದಲ ಬಾರಿಗೆ ಶುಕ್ರವಾರದ ಬೃಹತ್ ಧರ್ಮೋಪದೇಶ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಖಮೇನಿ, ಎಲ್ಲರೂ ಒಂದಾಗಿ ನಮ್ಮ ಶತ್ರುವನ್ನು ಮಣಿಸೋಣ' ಎಂದು ಘೋಷಿಸಿದರು. ತೆಹರಾನ್ ನಗರದ ಕೇಂದ್ರ ಭಾಗದಲ್ಲಿ ಇರುವ ಇಮಾಮ್ ಖೊಮೇನಿ ಗ್ರ್ಯಾಂಡ್ ಮೊಸಲ್ಲಾ ಮಸೀದಿಯಲ್ಲಿ ಲಕ್ಷಾಂತರ ಸಂಖ್ಯೆಯಲ್ಲಿ ಜನರು ಸೇರಿದ್ದರು. ಈ ವೇಳೆ ಮಾತನಾಡಿದ ಇರಾನ್ ಸರ್ವೋಚ್ಚ ನಾಯಕ, ಧರ್ಮ ಗುರು ಅಯತೊಲ್ಲಾ ಅಲಿ ಖಮೇನಿ, ವಿಶ್ವಾದ್ಯಂತ ಇರುವ ಮುಸ್ಲಿಮರಿಗೆ ಶತ್ರುಗಳು ಇದ್ದಾರೆ. ನಾವೆಲ್ಲರೂ ಒಂದಾಗಿ ಸೇರಿ ಆ ಶತ್ರುವನ್ನು ಮಣಿಸಬೇಕು' ಎಂದು ಇಸ್ರೇಲ್‌ನ ಹೆಸರು ಹೇಳದೆ ಸಮರದ ಕರೆ ನೀಡಿದರು.



ಇಸ್ರೇಲ್ ಮೇಲಿನ ದಾಳಿಗೆ ಖಮೇನಿ ಸಮರ್ಥನೆ: ಇಸ್ಲಾಮಿಕ್ ರಿಪಬ್ಲಿಕ್ ದೇಶವಾದ ಇರಾನ್ ಕೆವ್ರು ದಿನಗಳ ಹಿಂದೆ ಇಸ್ರೇಲ್ ಮೇಲೆ ನಡೆಸಿದ ಖಂಡಾಂತರ ಕ್ಷಿಪಣಿ ದಾಳಿಗಳನ್ನು 'ಕಾನೂನುಬದ್ಧ' ಎಂದು ಪ್ರತಿಪಾದಿಸಿದ ಖಮೇನಿ, 2023ರ ಅಕ್ಟೋಬರ್ 7 ರಂದು ಇಸ್ರೇಲ್ ಮೇಲೆ ಹಮಾಸ್ ಉಗ್ರರು ನಡೆಸಿದ ದಾಳಿಯನ್ನೂ 'ನ್ಯಾಯಸಮ್ಮತ' ಎಂದು ಪ್ರತಿಪಾದಿಸಿದರು. ಪ್ಯಾಲಸ್ತೀನ್ ಹಾಗೂ ಲೆಬನಾನ್‌ನಲ್ಲಿ ನಡೆಯುತ್ತಿರುವ ಹೋರಾಟಗಳನ್ನು ಸಮರ್ಥಿಸಿಕೊಂಡ ಖಮೇನಿ, ಅತಿಕ್ರಮಣದ ವಿರುದ್ಧ ಹೋರಾಟ ಮಾಡುತ್ತಿರುವ ಪ್ಯಾಲಸ್ತೀನ್ ಹಾಗೂ ಲೆಬನಾನ್ ಜನತೆಯ ನಡೆಯಲು ಈ ವಿಶ್ವದ ಯಾವುದೇ ಅಂತಾರಾಷ್ಟ್ರೀಯ ಕಾನೂನಿಗೂ ಕೂಡಾ ವಿರೋಧ ಮಾಡಲು ಹಕ್ಕು ಇಲ್ಲ ಎಂದು ಹೇಳಿದರು.

ಉಗ್ರರು ನಡೆಸಿದ ದಾಳಿ ನ್ಯಾಯ ಸಮ್ಮತ

ಲೆಬನಾನ್‌ನ ಹೆಜ್ಬೊಲ್ಲಾ ಸಂಘಟನೆ ಇರಾನ್ ವಿರುದ್ಧ ನಡೆಸುತ್ತಿರುವ ಸಮರವನ್ನು ಸಮರ್ಥಿಸಿ ಕೊಂಡ ಖಮೇನಿ, ಇರಾನ್ ಮತ್ತದರ ಮಿತ್ರ ಪಡೆಗಳು ಒಂದಾಗಿ ಇಸ್ರೇಲ್ ದೇಶವನ್ನು ಮಣಿಸುತ್ತೇವೆ ಎಂದು ಹೇಳಿದರು. ಇತ್ತ ಗಾಜಾ ಪಟ್ಟಿಯಲ್ಲಿ ಇರುವ ಹಮಾಸ್ ಸಂಘಟನೆಯು ಅಲ್ಲಿನ ಮುಸ್ಲಿಮರ ಹಕ್ಕಿಗಾಗಿ ಹೋರಾಟ ನಡೆಸುತ್ತಿದೆ.

ಹೆಜ್ಬೊಲ್ಲಾ ಕೂಡಾ ಹಮಾಸ್ ಸಂಘಟನೆ ಪರವಾಗಿ ಹೋರಾಟ ನಡೆಸುತ್ತಿದೆ ಎಂದು ಆಯತೊಲ್ಲಾ ಅಲಿ ಖಮೇನಿ ಹೇಳಿದರು.

ಪ್ಯಾಲಸ್ತೀನ್‌ಗಾಗಿ ಇರಾನ್ ದಾಳಿ ಎಚ್ಚರಿಕೆ!

ಇರಾನ್ ದೇಶವು ಇಸ್ರೇಲ್‌ನಿಂದ ಆಕ್ರಮಣ ಆಗಿರುವ ಪ್ಯಾಲಸ್ತೀನ್ ದೇಶದ ರಕ್ಷಣೆಗಾಗಿ ದಾಳಿ ನಡೆಸಲಿದೆ ಎಂದು ಎಚ್ಚರಿಕೆ ನೀಡಿದ ಅಯತೊಲ್ಲಾ ಅಲಿ ಖಮೇನಿ, ನೀವು ನಮ್ಮನ್ನು ಪ್ರಚೋದನೆ ಮಾಡಿದಷ್ಟೂ ನಾವು ದಾಳಿ ನಡೆಸುತ್ತೇವೆ ಎಂದು ಹೇಳಿದರು. ಇರಾನ್ ದೇಶವು ಇಸ್ರೇಲ್‌ನಿಂದ ಎದುರಾಗುವ ಯಾವುದೇ ದಾಳಿಯನ್ನು ತಡೆಯಲಿದೆ, ಅಷ್ಟೇ ಅಲ್ಲ, ನಮ್ಮನ್ನು ನಾವು ರಕ್ಷಣೆ ಮಾಡಿಕೊಳ್ಳಲು ಹಕ್ಕು ಹೊಂದಿದ್ದೇವೆ ಎಂದು ಖಮೇನಿ ಹೇಳಿದರು.

ಇಸ್ರೇಲ್ ದೇಶದ ಪ್ರತೀಕಾರದ ದಾಳಿ ಭೀತಿ ನಡುವಲ್ಲೂ ಇರಾನ್ ದೇಶದ ರಾಜಧಾನಿ ತೆಹರಾನ್‌ನಲ್ಲಿ ಇರಾನ್ ದೇಶದ ಸರ್ವೋಚ್ಚ ನಾಯಕ ಹಾಗೂ ಧರ್ಮ ಗುರು ಅಯಾತೊಲ್ಲಾ ಅಲಿ ಖಮೇನಿ ಬೃಹತ್ ಸಾರ್ವಜನಿಕ ಸಮಾವೇಶ ನಡೆಸಿದರು. 5 ವರ್ಷಗಳ ಬಳಿಕ ಇದೇ ಮೊದಲ ಬಾರಿಗೆ ಶುಕ್ರವಾರದ ಬಹಿರಂಗ ಧರ್ಮೋಪದೇಶ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಖಮೇನಿ, ವಿಶ್ವದೆಲ್ಲೆಡೆಯ ಮುಸ್ಲಿಮರ ಶತ್ರುವಾದ ಇಸ್ರೇಲ್ ದೇಶದ ವಿರುದ್ಧ ಒಗ್ಗಟ್ಟಿನ ಹೋರಾಟ ಮಾಡಿ ಗೆಲ್ಲುವ ಘೋಷಣೆ ಮಾಡಿದರು.

ನಮ್ಮ ತಂಟೆಗೆ ಬಂದ್ರೆ ಅಣ್ವಸ್ತ್ರ ಪ್ರಯೋಗಿಸಿ ಸರ್ವನಾಶ ಮಾಡ್ತೀನಿ : ಕಿಮ್

ಸಿಯೋಲ್: ನಮ್ಮನ್ನು ದಕ್ಷಿಣ ಕೊರಿಯಾದವರು ಕೆಣಕಿದರೆ ಆ ದೇಶವನ್ನು ಅಣ್ವಸ್ತ್ರ ಬಳಸಿ ನಿರ್ನಾಮ ಮಾಡುವುದಾಗಿ ಉತ್ತರ ಕೊರಿಯಾ ಸರ್ವಾಧಿಕಾರಿ ಕಿಮ್ ಜಾಂಗ್ ಉನ್ ಎಚ್ಚರಿಸಿದ್ದಾರೆ.

ಉಭಯ ಕೊರಿಯಾಗಳ ನಡುವೆ ಇಂತಹ ವಾಕ್ಚಾತುರ್ಯದ ವಿನಿಮಯವು ಹೊಸದೇನಲ್ಲ, ಆದರೆ ಇತ್ತೀಚಿನ ಕಾಮೆಂಟ್‌ಗಳು ಉತ್ತರದ ಇತ್ತೀಚಿನ ಪರಮಾಣು ಸೌಲಭ್ಯದ ಬಹಿರಂಗಪಡಿಸುವಿಕೆ ಮತ್ತು ಕ್ಷಿಪಣಿ ಪರೀಕ್ಷೆಗಳ ಮುಂದುವರಿಕೆಯ ಮೇಲಿನ ದ್ವೇಷದ ಸಮಯದಲ್ಲಿ ಬಂದಿರುವುದು ವಿಶೇಷವಾಗಿದೆ. ಮುಂದಿನ ವಾರ, ಉತ್ತರ ಕೊರಿಯಾದ ರಬ್ಬರ್ ಸ್ಟ್ಯಾಂಪ್ ಸಂಸತ್ತು ಸಾಂವಿಧಾನಿಕವಾಗಿ ದಕ್ಷಿಣ ಕೊರಿಯಾದೊಂದಿಗಿನ ಸಮನ್ವಯವನ್ನು ಔಪಚಾರಿಕವಾಗಿ ತಿರಸ್ಕರಿಸಲು ಮತ್ತು ಹೊಸ ರಾಷ್ಟ್ರೀಯ ಗಡಿಗಳನ್ನು ಕ್ರೋಡೀಕರಿಸಲು ಕೊರಿಯನ್ ಪೆನಿನ್ಸುಲಾದಲ್ಲಿ ಪ್ರತಿಕೂಲವಾದ ಎರಡು-ರಾಜ್ಯ ವ್ಯವಸ್ಥೆಯನ್ನು ಘೋಷಿಸುವ ನಿರೀಕ್ಷೆಯಿದೆ ಎಂದು ವೀಕ್ಷಕರು ಹೇಳುತ್ತಾರೆ.

ತನ್ನ ದೇಶದ ಸಶಸ್ತ್ರ ಪಡೆಗಳ ದಿನದಂದು ದಕ್ಷಿಣ ಕೊರಿಯಾದ ಅಧ್ಯಕ್ಷ ಯೂನ್ ಸುಕ್ ಯೋಲ್ ಮಾಡಿದ ಭಾಷಣಕ್ಕೆ ಕಿಮ್ ಅವರ ಹೇಳಿಕೆಯು ಪ್ರತಿಕ್ರಿಯೆಯಾಗಿದೆ. ದಕ್ಷಿಣ ಕೊರಿಯಾದ ಅತ್ಯಂತ ಶಕ್ತಿಶಾಲಿ ಬ್ಯಾಲಿಸ್ಟಿಕ್ ಕ್ಷಿಪಣಿ ಮತ್ತು ಉತ್ತರ ಕೊರಿಯಾವನ್ನು ಗುರಿಯಾಗಿಸುವ ಇತರ ಶಸ್ತ್ರಾಸ್ತ್ರಗಳನ್ನು ಅನಾವರಣಗೊಳಿಸಿದ ಯೂನ್, ಉತ್ತರ ಕೊರಿಯಾ ಪರಮಾಣು ಶಸ್ತ್ರಾಸ್ತ್ರಗಳನ್ನು ಬಳಸಲು ಪ್ರಯತ್ನಿಸುವ ದಿನವು ಕಿಮ್ ಸರ್ಕಾರದ ಅಂತ್ಯವಾಗಲಿದೆ ಏಕೆಂದರೆ ಕಿಮ್ ದಕ್ಷಿಣದ ದಢವಾದ, ಅಗಾಧ ಪ್ರತಿಕ್ರಿಯೆಯನ್ನು ಎದುರಿಸಬೇಕಾಗುತ್ತದೆ ಎಂದರು.

ವಿಶೇಷ ಕಾರ್ಯಾಚರಣೆ ಪಡೆಗಳ ಘಟಕಕ್ಕೆ ಭೇಟಿ ನೀಡಿದ ಕಿಮ್, ಉತ್ತರ ಕೊರಿಯಾದ ಸಾರ್ವಭೌಮತ್ವವನ್ನು ಅತಿಕ್ರಮಿಸುವ ಸಶಸ್ತ್ರ ಪಡೆಗಳನ್ನು ಬಳಸಲು ದಕ್ಷಿಣ ಕೊರಿಯಾ ಪ್ರಯತ್ನಿಸಿದರೆ, ಅಣ್ವಸ್ತ್ರ ಸೇರಿದಂತೆ ತನ್ನಲ್ಲಿರುವ ಎಲ್ಲಾ ಆಕ್ರಮಣಕಾರಿ ಪಡೆಗಳನ್ನು ಹಿಂಜರಿಕೆಯಿಲ್ಲದೆ ಬಳಸುತ್ತದೆ ಎಂದು ಕಿಮ್ ಎಚ್ಚರಿಸಿದ್ದಾರೆ ಎಂದು ಉತ್ತರದ ಅಧಿಕೃತ ಕೊರಿಯನ್ ಕೇಂದ್ರ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಅಂತಹ ಪರಿಸ್ಥಿತಿ ಬಂದರೆ, ಸಿಯೋಲ್, ರಿಪಬ್ಲಿಕ್ ಆಫ್ ಕೊರಿಯಾದ ಶಾಶ್ವತ ಅಸ್ತಿತ್ವವು ಅಸಾಧ್ಯ ಎಂದು ಕಿಮ್ ದಕ್ಷಿಣ ಕೊರಿಯಾದ ಅಧಿಕೃತ ಹೆಸರನ್ನು ಬಳಸಿ ಹೇಳಿದ್ದಾರೆ ಎನ್ನಲಾಗಿದೆ.

ದೋಣಿ ಮುಳುಗಿ 78 ಮಂದಿ ಜಲಸಮಾಧಿ

ಕಿನ್ಶಾಸಾ: ಮಧ್ಯ ಆಫ್ರಿಕಾದ ಕಾಂಗೋದ ಪೂರ್ವ ಭಾಗದಲ್ಲಿರುವ ಕಿವು ಸರೋವರದಲ್ಲಿ 278 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ದೋಣಿಯೊಂದು ಮುಳುಗಿ ಕನಿಷ್ಠ 78 ಜನರು ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ಅಧಿಕಾರಿ ಯೊಬ್ಬರು ಈ ಮಾಹಿತಿ ನೀಡಿದ್ದಾರೆ. ದೋಣಿಯಲ್ಲಿ ಸಾಮರ್ಥ್ಯಕ್ಕಿಂತ ಹೆಚ್ಚಿನ ಪ್ರಯಾಣಿಕರು ಪ್ರಯಾಣಿಸುತ್ತಿದ್ದುದೇ ಅಪಘಾತಕ್ಕೆ ಕಾರಣ ಎನ್ನಲಾಗಿದೆ.

ಈ ಘಟನೆಯಲ್ಲಿ ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಸ್ಥಳೀಯ ಪ್ರಾಂತ್ಯದ ಗವರ್ನರ್ ಹೇಳಿದ್ದಾರೆ. ಸ್ಥಳೀಯ ಜನರು ಮತ್ತು ರಕ್ಷಣಾ ತಂಡಗಳ ಸಹಾಯದಿಂದ ನೀರಿನಲ್ಲಿ ಮುಳುಗಿದ 50 ಜನರ ಮೃತದೇಹಗಳನ್ನು ಹೊರತೆಗೆಯಲಾಗಿದೆ. ಕಿಟುಕು ಬಂದರಿನಿಂದ ಕೆಲವು ಮೀಟರ್ ದೂರದಲ್ಲಿ ದೋಣಿ ಮುಳುಗಿತು. ದೋಣಿ ದಕ್ಷಿಣ ಕಿವು ಪ್ರಾಂತ್ಯದ ಮಿನೋವಾದಿಂದ ಉತ್ತರ ಕಿವು ಪ್ರಾಂತ್ಯದ ಗೋಮಾಗೆ ಪ್ರಯಾಣಿಸುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಕಾಂಗೋದ ದಕ್ಷಿಣ ಕಿವು ಪ್ರಾಂತ್ಯದ ಮಿನೋದಿಂದ ಉತ್ತರ ಕಿವು ಪ್ರಾಂತ್ಯದ ಗೋಮಾ ಪ್ರದೇಶವನ್ನು ಸಂಪರ್ಕಿಸುವ ಸರೋವರಕ್ಕೆ ನಿನ್ನೆ ಹೆಚ್ಚಿನ ಸಂಖ್ಯೆಯ ಜನರು ದೋಣಿಯಲ್ಲಿ ತೆರಳಿದ್ದಾರೆ. ಕೆರೆಯ ಪಕ್ಕದಲ್ಲಿರುವ ಕಿಟುಗು ಬಂದರಿನ ಬಳಿ ಹೋದಾಗ ಹೆಚ್ಚು ಭಾರ ಹೊರಲಾಗದೆ ದೋಣಿ ಮಗುಚಿ ಬಿದ್ದಿದೆ. ಇದರಲ್ಲಿ 60ಕ್ಕೂ ಹೆಚ್ಚು ಪ್ರಯಾಣಿಕರು ಕೆರೆಯ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ.

ನೀರಿನಲ್ಲಿ ಕೊಚ್ಚಿ ಹೋಗಿದ್ದ 10 ಮಂದಿಯನ್ನು ರಕ್ಷಿಸಲಾಗಿದೆ. ಅಪಘಾತ ಸಂಭವಿಸಿದ ಕೆರೆಯಲ್ಲಿ ರಕ್ಷಣಾ ಕಾರ್ಯ ಮುಂದುವರಿದಿದೆ. ಕಾಂಗೋದ ಹೆಚ್ಚಿನ ಭಾಗಗಳಲ್ಲಿ ಜನರು ದೋಣಿ ಸಾರಿಗೆಯನ್ನು ಅವಲಂಬಿಸಿದ್ದಾರೆ. ಸ್ಥಳೀಯರು ತಮ್ಮ ಜೀವನೋಪಾಯವನ್ನು ಉಳಿಸಿಕೊಳ್ಳಲು ಕೆಲವೊಮ್ಮೆ ಸಾಮಾನ್ಯಕ್ಕಿಂತ ಹೆಚ್ಚಿನ ಪ್ರಯಾಣಿಕರನ್ನು ಸಾಗಿಸುವುದನ್ನು ಅಭ್ಯಾಸ ಮಾಡಿಕೊಂಡಿದ್ದಾರೆ. ಇದರಿಂದ ಸಾಕಷ್ಟು ದೋಣಿ ಅಪಘಾತಗಳು ನಡೆಯುತ್ತಿದ್ದು, ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕೇಂದ್ರ ಸಹಾಯವಿಲ್ಲದೆ ಕೈ ಆಡಳಿತ ನಡೆಸಲು ಸಾಧ್ಯವಿಲ್ಲ

ಬಿಲಾಸ್‌ಪುರ: ಕೇಂದ್ರದ ಸಹಾಯವಿಲ್ಲದೆ ಕಾಂಗ್ರೇಸ್‌ಗೆ ಹಿಮಾಚಲ ಪ್ರದೇಶದಲ್ಲಿ ಒಂದು ದಿನವೂ ಆಡಳಿತ ನಡೆಸಲು ಸಾಧ್ಯವಿಲ್ಲ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ ನಡ್ಡಾ ಹೇಳಿದ್ದಾರೆ. ಬಿಲಾಸ್‌ಪುರದಲ್ಲಿ ರಾಜ್ಯ ಬಿಜೆಪಿ ಘಟಕ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ 500 ಕೋಟಿ ಆದಾಯ ಕೊರತೆ ಅನುದಾನ ಮತ್ತು ಸಂಬಳ ಹಾಗೂ ಪಿಂಚಣಿ ಪಾವತಿಗಾಗಿ 800 ಕೋಟಿ ಅನುದಾನ ನೀಡಿದೆ' ಎಂದು ಹೇಳಿದರು.

ಮುಖ್ಯಮಂತ್ರಿ ಸುಖೀಂದರ್ ಸಿಂಗ್ ಸುಖು ಎರಡು ರೀತಿಯಾಗಿ ಮಾತನಾಡುತ್ತಾರೆ. ಹಿಮಾಚಲ ಪ್ರದೇಶದಲ್ಲಿ ಚುನಾವಣೆ ವೇಳೆ, ರಾಜ್ಯ ಸರ್ಕಾರ ಕೇಂದ್ರದಿಂದ ಏನನ್ನೂ ಪಡೆದು ಕೊಂಡಿಲ್ಲ ಎಂದು ಹೇಳುತ್ತಾರೆ. ಏತನ್ಮಧ್ಯೆ ದೆಹಲಿಯಲ್ಲಿ ಕೇಂದ್ರದ ಹಣಕಾಸು ಸಹಾಯಕ್ಕಾಗಿ ಧನ್ಯವಾದ ತಿಳಿಸುತ್ತಾರೆ ಎಂದು ನಡ್ಡಾ ವಾಗ್ದಾಳಿ ನಡೆಸಿದರು.

ಕೇಂದ್ರದ ಸಹಾಯವಿಲ್ಲದೆ ಕಾಂಗ್ರೇಸ್‌ಗೆ ಹಿಮಾಚಲ ಪ್ರದೇಶದಲ್ಲಿ ಒಂದು ದಿನವೂ ಸರ್ಕಾರ ನಡೆಸಲು ಸಾಧ್ಯವಿಲ್ಲ. ಆದರೆ, ಹಣ ಯಾವುದಕ್ಕಾಗಿ ಖರ್ಚಾಗುತ್ತಿದೆ ಎಂಬುದಕ್ಕೆ ರಾಜ್ಯ ಸರ್ಕಾರದ ಬಳಿ ದಾಖಲೆಗಳಿಲ್ಲ' ಎಂದು ನಡ್ಡಾ ಕಿಡಿಕಾರಿದರು. 'ಕಾಂಗ್ರೇಸ್ ಆಡಳಿತದ ರಾಜ್ಯಗಳಲ್ಲಿ ಮಾದಕ ವ್ಯಸನ ಹೆಚ್ಚಾಗುತ್ತಿದೆ. ಇತ್ತೀಚೆಗೆ ಕಾಂಗ್ರೇಸ್ ನಾಯಕರೊಬ್ಬರಿಗೆ ಸೇರಿದ 5,600 ಕೋಟಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಕಾಂಗ್ರೇಸ್ ಎಂದರೆ, ಭ್ರಷ್ಟಾಚಾರ, ಅಪರಾಧೀಕರಣ ಮತ್ತು ಕಮಿಷನ್ ಎಂದರ್ಥ' ಎಂದು ನಡ್ಡಾ ಆರೋಪಿಸಿದರು.

ಇನ್ಮುಂದೆ ತಿಮ್ಮಪ್ಪನ ದರ್ಶನಕ್ಕೆ ವಾಟ್ಸಾಪ್‌ನಲ್ಲೇ ಬುಕಿಂಗ್ ವ್ಯವಸ್ಥೆ

ತಿರುಪತಿ: ತಿರುಮಲ ಶ್ರೀಗಳ ದರ್ಶನಕ್ಕೆ ಶಿಫಾರಸ್ಸು ಪತ್ರಗಳ ಒತ್ತಡ ಹೆಚ್ಚಿರುವ ಹಿನ್ನೆಲೆಯಲ್ಲಿ ಯಾವುದೇ ಶಿಫಾರಸ್ಸುಗಳಿಲ್ಲದೆ ಜನಸಾಮಾನ್ಯರು ಸುಲಭವಾಗಿ ತಿರುಮಲ ಶ್ರೀಕ್ಷೇತ್ರಕ್ಕೆ ಭೇಟಿ ನೀಡುವಂತೆ ಮುಂಗಡ ಬುಕಿಂಗ್ ವ್ಯವಸ್ಥೆ ಜಾರಿಗೆ ತರಲು ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಇತ್ತೀಚಿನ ಪರಿಶೀಲನೆಯಲ್ಲಿ ಹಲವು ಸಲಹೆಗಳನ್ನು ಪ್ರಸ್ತಾಪಿಸಿದ್ದಾರೆ ಎಂದು ವರದಿಯಾಗಿದೆ. ವಿಶ್ವಾದ್ಯಂತ ಲಕ್ಷಾಂತರ ಜನರ ದೈನಂದಿನ ಜೀವನದ ಭಾಗವಾಗಿರುವ ವಾಟ್ಸಾಪ್ ಮೂಲಕವೇ ಟಿಕೆಟ್ ಬುಕ್ ಮಾಡಲು ಅನುಕೂಲವಾಗುವಂತೆ ಆಂಧ್ರಪ್ರದೇಶ ಸರ್ಕಾರ ಚಿಂತನೆ ನಡೆಸಿದೆ.

ಶ್ರೀ ವೆಂಕಟೇಶ್ವರ ಸ್ವಾಮಿಯ ದರ್ಶನಕ್ಕೆ ಬರುವ ಭಕ್ತರಿಗೆ ಒದಗಿಸುವ ಸೇವೆ ಹಾಗೂ ಇತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಲಭ್ಯವಿರುವ ಬೆಲೆಗಳನ್ನು ಪರಿಶೀಲಿಸಿ ಅನುಕೂಲ ಕಲ್ಪಿಸಲಾಗುತ್ತದೆ ಎಂದು ಹೇಳಲಾಗಿದೆ. ತಿರುಮಲ ದೇವಸ್ಥಾನದ ಲಡ್ಡು ವಿವಾದದಲ್ಲಿ ಸುಪ್ರೀಂಕೋರ್ಟ್‌ನ ಹೇಳಿಕೆಗಳಿಂದ ಯಾರೂ ಎದೆಗುಂದಬಾರದು. ಸಮಿಶ್ರ ಸರಕಾರ ಅಧಿಕಾರಕ್ಕೆ ಬಂದ ಮೇಲೆ ತಂದಿರುವ ಹಲವಾರು ಕ್ರಾಂತಿಕಾರಕ ಬದಲಾವಣೆಗಳನ್ನು ಮಾಡಲಾಗಿದ್ದು, ಭಕ್ತರು ಇದನ್ನು ಗುರುತಿಸುತ್ತಿದ್ದಾರೆ. ಭಕ್ತರಿಗೆ ಮಾಡಿದ ಸೌಲಭ್ಯಗಳು ನಮ ಕೈಹಿಡಿಯುವ ಭರವಸೆ ಇದೆ ಎಂದು ನಾಯ್ಡು ತಿಳಿಸಿದ್ದಾರೆ.

ತುಪ್ಪದಲ್ಲಿ ಕಲಬೆರೆಕೆ ವಿಚಾರದಲ್ಲಿ ಮೌನ ವಹಿಸುವುದು ಸರಿಯಲ್ಲ ಎಂಬ ಭಾವನೆಯಿಂದ ಸತ್ಯವನ್ನು ಜನರ ಮುಂದಿಡುವ ವಿಷಯವನ್ನು ಜವಾಬ್ದಾರಿಯಾಗಿ ತೆಗೆದುಕೊಂಡು ಹೋಗಲು ನಿರ್ಧರಿಸಲಾಗಿತ್ತು. ವಿಷಯ ಗೊತ್ತಾದ ಮೇಲೂ ಗೌಪ್ಯವಾಗಿಟ್ಟು ಬೇರೆ ರೀತಿಯಲ್ಲಿ ಹೊರಬಿದ್ದಿದ್ದರೆ ಸರ್ಕಾರಕ್ಕೆ ಮಾನಹಾನಿಯಾಗುತ್ತಿತ್ತು ಎಂಬ ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.

ಸೌಲಭ್ಯ ಕಲ್ಪಿಸುವ ಆಲೋಚನೆ

ವಾಟ್ಸಾಪ್ ಮೂಲಕ ಸುಲಭವಾಗಿ ಸಿನಿಮಾ ಟಿಕೆಟ್, ಗ್ಯಾಸ್ ಬುಕ್ಕಿಂಗ್, ಫ್ಲೈಟ್ ಟಿಕೆಟ್ ಬುಕ್ ಮಾಡುವಾಗ, ಭಕ್ತರು ತಮ ಇಚ್ಛೆಯ ದಿನದಂದು ದೇವರ ದರ್ಶನಕ್ಕೆ ಅನುಕೂಲ ಮಾಡಿಕೊಡಬೇಕೆಂಬ ಉದ್ದೇಶ ಹೊಂದಿದೆ. ತಿರುಮಲ ತಿರುಪತಿ ದೇವಸ್ಥಾನದಿಂದ ವಾಟ್ಸಪ್ ಮೂಲಕ ದರ್ಶನ ಬುಕ್ಕಿಂಗ್ ಸೇವೆ ಆರಂಭಿಸಿ ಹಂತಹಂತವಾಗಿ ಎಲ್ಲ ದೇವಸ್ಥಾನಗಳಲ್ಲೂ ಲಭ್ಯವಾಗುವಂತೆ ಹಾಗೂ ಶ್ರೀವಾರಿ ದರ್ಶನದ ಜೊತೆಗೆ ಇತರೆ ಸೇವೆಗಳ ಬೆಲೆಯನ್ನು ಕಡಿಮೆ ವೆಚ್ಚದಲ್ಲಿ ಸಾಧ್ಯವಾದಷ್ಟು ಸೌಲಭ್ಯ ಕಲ್ಪಿಸುವ ಸರ್ಕಾರದ ಆಲೋಚನೆಯಾಗಿದೆ.

ಗುಂಡಿಕ್ಕಿ ಶಿಕ್ಷಕನ ಇಡೀ ಕುಟುಂಬವನ್ನು ಹತ್ಯೆ ಮಾಡಿದ ದುಷ್ಕರ್ಮಿಗಳು

ಅಮೇಥಿ: ದುಷ್ಕರ್ಮಿಗಳ ಗುಂಪೊಂದು ಶಿಕ್ಷಕ ಕುಟುಂಬವನ್ನು ಗುಂಡಿಕ್ಕಿ ಹತ್ಯೆ ಮಾಡಿರುವ ಘಟನೆ ಉತ್ತರಪ್ರದೇಶದ ಅಮೇಥಿಯಲ್ಲಿ ನಡೆದಿದೆ. ಮನೆಗೆ ನುಗ್ಗಿ ದುಷ್ಕರ್ಮಿಗಳ ತಂಡ ಶಿಕ್ಷಕ ದಂಪತಿ ಹಾಗೂ ಇಬ್ಬರು ಮಕ್ಕಳನ್ನು ಗುಂಡಿಕ್ಕಿ ಹತ್ಯೆ ಮಾಡಿ ಪರಾರಿಯಾಗಿದೆ. ಮತರನ್ನು ಶಿಕ್ಷಕ ಸುನಿಲ್ ಕುಮಾರ್ ಎಂದು ಗುರುತಿಸಲಾಗಿದೆ, ಅವರ ಪತ್ನಿ ಪೂನಂ ಮತ್ತು ಅವರ ಇಬ್ಬರು ಹೆಣ್ಣುಮಕ್ಕಳು ಎಂದು ಗುರುತಿಸಲಾಗಿದೆ.

ಸುನಿಲ್‌ಗೆ ಸಂಬಂಧಿಸಿದ ಕಾನೂನು ವಿವಾದ ಸೇರಿದಂತೆ ಎಲ್ಲಾ ಕೋನಗಳಲ್ಲಿ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಅನೂಪ್ ಕುಮಾರ್ ಸಿಂಗ್ ಖಚಿತಪಡಿಸಿದ್ದಾರೆ. ಪೂನಂ ಆಗಷ್ಟ 18ರಂದು ಚಂದನ್ ವರ್ಮಾ ಎಂಬಾತನ ವಿರುದ್ಧ ಕಿರುಕುಳ, ಹಲ್ಲೆ ಮತ್ತು ಕೊಲೆ ಬೆದರಿಕೆ ಆರೋಪದಡಿ ದೂರು ದಾಖಲಿಸಿದ್ದರು.

ಈ ಕುಟುಂಬ ಅಹೋರ್ವ ಭವಾನಿ ಕ್

ಸಿಹಿಸುದ್ದಿ ಕೊಟ್ಟ ಶ್ರೀನಿಧಿ ಶೆಟ್ಟಿ



ನನ್ನ ಹೃದಯದ ಒಂದು ಭಾಗ

ಕನ್ನಡದ 'ಕೆಜಿಎಫ್' ಬ್ಯೂಟಿ ಶ್ರೀನಿಧಿ ಶೆಟ್ಟಿ 'ನನ್ನ ಹೃದಯದ ಒಂದು ಭಾಗ' ಎನ್ನುತ್ತಾ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಪ್ಯಾನ್ ಇಂಡಿಯಾ ಸ್ಟಾರ್ ನಟಿಯಾಗಿ ಮಿಂಚಿದಾಯ್ತು, ತಮಿಳಿನ ಸ್ಟಾರ್‌ನ ಜೊತೆ ನಟಿಸಿದ್ದು ಆಯ್ತು, ಈಗ ಟಾಲಿವುಡ್‌ನತ್ತ ನಟಿ ಮುಖ ಮಾಡಿದ್ದಾರೆ. ನ್ಯಾಚುರಲ್ ಸ್ಟಾರ್ ನಾನಿಗೆ ಹೀರೋಯಿನ್ ಆಗಿದ್ದಾರೆ.

ನಾನಿ ನಟನೆಯ 'ಹಿಟ್ -3' ಸಿನಿಮಾಗೆ ಶ್ರೀನಿಧಿ ಶೆಟ್ಟಿ ಹೀರೋಯಿನ್ ಆಗಿ ಆಯ್ಕೆ ಆಗಿದ್ದಾರೆ. ಈ ವಿಚಾರವನ್ನು ಅವರೇ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. 'ನನ್ನ ಹೃದಯದ ಒಂದು ಭಾಗ' ಈ ಸಿನಿಮಾದ ಭಾಗವಾಗಿರುವ ಕುರಿತು ಗುಡ್ ನ್ಯೂಸ್ ಕೊಟ್ಟಿದ್ದಾರೆ. ಕಳೆದ ಕೆಲ ತಿಂಗಳುಗಳಿಂದ ನಾನಿ ಸಿನಿಮಾಗೆ ಇವರೇ ಹೀರೋಯಿನ್ ಎಂಬ ಸುದ್ದಿ ಹರಿದಾಡಿತ್ತು. ಆದರೆ ತಂಡವಾಗಲಿ, ನಟಿಯಾಗಲಿ ಈ ಬಗ್ಗೆ ಸ್ಪಷ್ಟನೆ ನೀಡಿರಲಿಲ್ಲ, ಈಗ ಅವರೇ ತಮ್ಮ ಇನ್ಸ್ಟಾಗ್ರಾಂ ಖಾತೆಯಲ್ಲಿ ಚಿತ್ರದ ಪೋಸ್ಟರ್ ಶೇರ್ ಮಾಡಿ ಸಿಹಿಸುದ್ದಿ ತಿಳಿಸಿದ್ದಾರೆ. ಅಂದಹಾಗೆ, ಯಶ್ ನಟನೆಯ 'ಕೆಜಿಎಫ್ 1' ಮತ್ತು 'ಕೆಜಿಎಫ್ 2' ಸಿನಿಮಾಗಳ ಮೂಲಕ ನಾಯಕಿಯಾಗಿ ಶ್ರೀನಿಧಿ ಶೆಟ್ಟಿಗೆ ಸಕ್ಸಸ್ ಸಿಕ್ಕಿದೆ.

ಹರ್ಷಿಕಾ ಪೂಣಚ್ಚಗೆ ಹೆಣ್ಣು ಮಗು ಜನನ



ಸರಳವಾಗಿ ಜರುಗಿದ ವಿಜಯ್, ಪೂಜಾ ಸಿನಿಮಾ ಮುಹೂರ್ತ

ಕನ್ನಡದ ಕೆವಿಎನ್ ಪ್ರೋಡಕ್ಷನ್ಸ್ ನಿರ್ಮಾಣದ 'ದಳಪತಿ 69' ಚಿತ್ರದ ಮುಹೂರ್ತ ಕಾರ್ಯಕ್ರಮ ಅದ್ಧೂರಿಯಾಗಿ ನಡೆಯಿತು. ಮುಹೂರ್ತ ಕಾರ್ಯಕ್ರಮದ ಫೋಟೋಗಳನ್ನು ನಿರ್ಮಾಣ ಸಂಸ್ಥೆ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದೆ.

ವಿಜಯ್ ದಳಪತಿ ಮತ್ತು ಪೂಜಾ ಹೆಗ್ಡೆ ನಟನೆಯ ಹೊಸ ಸಿನಿಮಾಗೆ ಚಾಲನೆ ನೀಡಲಾಗಿದೆ. 'ದಳಪತಿ 69' ಚಿತ್ರದಲ್ಲಿ ವಿಜಯ್ ಜೊತೆ ಯಾರೆಲ್ಲಾ ನಟನೆ ಮಾಡ್ತಾರೆ ಎಂದು ಚಿತ್ರತಂಡ ರಿವೀಲ್ ಮಾಡಿದ ಬೆನ್ನಲ್ಲೇ ಈಗ ಸಿನಿಮಾ ಮುಹೂರ್ತ ಚೆನ್ನೈನಲ್ಲಿ ನೆರವೇರಿದೆ. ಈ ಕಾರ್ಯಕ್ರಮದಲ್ಲಿ ಕೆವಿಎನ್ ಸಂಸ್ಥೆಯ ನಿರ್ಮಾಪಕರು, ವಿಜಯ್ ದಳಪತಿ, ಪೂಜಾ ಹೆಗ್ಡೆ, ಅನಿಮಲ್ ನಟ ಬಾಬಿ ಡಿಯೋಲ್ ಸೇರಿದಂತೆ ಅನೇಕರು ಭಾಗಿದ್ದರು. ಇನ್ನೂ ಈ ಚಿತ್ರವು ವಿಜಯ್ ನಟಿಸಲಿರುವ ಕೊನೆಯ ಸಿನಿಮಾ ಆಗಿದ್ದು, ರಾಜಕೀಯ ಕುರಿತು ಸಿನಿಮಾ ಮೂಡಿ ಬರಲಿದೆ ಎನ್ನಲಾಗಿದೆ.

ಸ್ಯಾಂಡಲ್‌ವುಡ್ ನಟಿ ಹರ್ಷಿಕಾ ಪೂಣಚ್ಚ ಹೆಣ್ಣು ಮಗುವಿಗೆ ಜನ್ಮ ನೀಡಿದ್ದಾರೆ. ಹರ್ಷಿಕಾ ಪೂಣಚ್ಚ ಹೆಣ್ಣು ಮಗುವಿಗೆ ಜನ್ಮ ನೀಡಿರುವ ಬಗ್ಗೆ ಪತಿ ಭುವನ್ ಪೊನ್ನಣ್ಣ ಸೋಶಿಯಲ್ ಮೀಡಿಯಾದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

ಗುರುವಾರ ಬೆಳಗಿನ ಜಾವ 3 ಗಂಟೆಗೆ ಹರ್ಷಿಕಾ ಹಾಗೂ ಭುವನ್ ಪೊನ್ನಣ್ಣ ಜೋಡಿ ಹೆಣ್ಣು ಮಗುವಿನ ಆಗಮನವಾಗಿದೆ. ಹರ್ಷಿಕಾ ಹಾಗೂ ಭುವನ್ ಕುಟುಂಬಸ್ಥರು ಹೆಣ್ಣು ಮಗುವಿನ ಆಗಮನದಿಂದ ಸಂತಸಗೊಂಡಿದ್ದಾರೆ. ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಹರ್ಷಿಕಾ ಜನ್ಮ ನೀಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೊನ್ನಣ್ಣ, ಎಲ್ಲಾರಿಗೂ ನಮಸ್ಕಾರ, ನಮ್ಮ ''ಚೈಕಾರ್ತಿ ಮೂಡಿ'' ಜನಿಸಿದ್ದನ್ನು ತಿಳಿಸಲು ಸಂತೋಷ ಪಡುತ್ತಿದ್ದೇವೆ. ಹರ್ಷಿ ಮತ್ತು ಮಗಳು ಆರೋಗ್ಯವಾಗಿದ್ದಾರೆ. ನನ್ನ ಪ್ರಕಾರ ಮಗಳು ಹರ್ಷಿಕಾಳಂತೆ ಇದ್ದರೆ ಅವಳ ಪ್ರಕಾರ ಮಗು ನನ್ನ ಕಾಪಿ ಎನ್ನುತ್ತಿದ್ದಾಳೆ.ಎಲ್ಲಾರಿಗೂ ಧನ್ಯವಾದ ಎಂದು ಬರೆದುಕೊಂಡಿದ್ದಾರೆ.

'ಬಿಲ್ಲ ರಂಗ ಭಾಷಾ' ಚಿತ್ರಕ್ಕಾಗಿ ಫಿಟ್ ಆದ

ಖಡಕ್ ಲುಕ್‌ನಲ್ಲಿ ಕಾಣಿಸಿಕೊಂಡ ಕಿಚ್ಚ

ರಗಡ್ ಲುಕ್‌ನಲ್ಲಿ ಕಿಚ್ಚ ಪೋಸ್

ಕಿಚ್ಚ ಸುದೀಪ್ ನಟನೆಯ 'ಮ್ಯಾಕ್ಸ್' ಸಿನಿಮಾ ರಿಲೀಸ್‌ಗೆ ಫ್ಯಾನ್ಸ್ ಎದುರು ನೋಡುತ್ತಿದ್ದಾರೆ. ಇದರ ನಡುವೆ ಸುದೀಪ್ ನಟಿಸಲಿರುವ ಮುಂದಿನ ಚಿತ್ರಕ್ಕಾಗಿ ಹೇಗೆ ತಯಾರಿ ಆಗುತ್ತಿದ್ದಾರೆ ಎಂಬುದನ್ನು ಫೋಟೋಶೂಟ್ ಮೂಲಕ ತಿಳಿಸಿದ್ದಾರೆ.

ರಗಡ್ ಲುಕ್‌ನಲ್ಲಿ ಪೋಸ್ ಕೊಟ್ಟಿರುವ ಸುದೀಪ್ ಫೋಟೋವನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಬಿಲ್ಲ ರಂಗ ಭಾಷಾ ಚಿತ್ರಕ್ಕಾಗಿ ತಯಾರಿಯಾಗುತ್ತಿರುವ ಬಗ್ಗೆ ನಟ ತಿಳಿಸಿದ್ದಾರೆ. ಅಂದಹಾಗೆ, ಈ ಚಿತ್ರವನ್ನು ಅನೂಪ್ ಭಂಡಾರಿ ನಿರ್ದೇಶನ ಮಾಡುತ್ತಿದ್ದಾರೆ. ಸಿನಿಮಾ ಮಾಡುವ ಬಗ್ಗೆ ಅಧಿಕೃತ ಘೋಷಣೆ ಆಗಿದೆ ಬಿಟ್ಟರೆ ಹೆಚ್ಚೆನೂ ಮಾಹಿತಿಯನ್ನು ಅನೂಪ್ ಭಂಡಾರಿ ಎಲ್ಲೂ ಬಿಟ್ಟು ಕೊಟ್ಟಿಲ್ಲ. ವಿಜಯದಶಮಿ ಹಬ್ಬದ ಸಂದರ್ಭದಲ್ಲಿ ಚಿತ್ರದ ಬಗ್ಗೆ ಏನಾದರೂ ಗುಡ್ ನ್ಯೂಸ್ ಸಿಗುತ್ತಾ? ಎಂದು ಫ್ಯಾನ್ಸ್ ಕಾಯುತ್ತಿದ್ದಾರೆ.

ಈ ಸಿನಿಮಾದ ತಯಾರಿಯ ನಡುವೆ ಸುದೀಪ್ 'ಬಿಗ್ ಬಾಸ್ ಕನ್ನಡ 11'ರ ನಿರೂಪಣೆ ಕೂಡ ಮಾಡುತ್ತಿದ್ದಾರೆ. ಶೋ ಜೊತೆ ಸಿನಿಮಾ ಕೆಲಸಗಳಿಗೂ ಸಮಯ ನೀಡುತ್ತಿದ್ದಾರೆ.

ವಿಜಯ್ ಜೊತೆ ಪ್ರಿಯಾಮಣಿ ಹೊಸ ಸಿನಿಮಾ

ಬಹುಭಾಷಾ ನಟಿ, ಕನ್ನಡತಿ ಪ್ರಿಯಾಮಣಿ ಸದ್ಯ ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. 'ಜವಾನ್' ಸಿನಿಮಾದ ಸಕ್ಸಸ್ ನಂತರ ನಟಿಯ ಬೇಡಿಕೆ ಹೆಚ್ಚಾಗಿದೆ. ಇದೀಗ ವಿಜಯ್ ನಟನೆಯ ಕೊನೆಯ ಸಿನಿಮಾದಲ್ಲಿ ಪ್ರಿಯಾಮಣಿ ಕೂಡ ನಟಿಸುತ್ತಿದ್ದಾರೆ. ನಟಿ ಕೂಡ ಚಿತ್ರತಂಡ ಸೇರ್ಪಡೆಯಾಗಿರುವ ಬಗ್ಗೆ ತಂಡ ಅಧಿಕೃತ ಘೋಷಣೆ ಮಾಡಿದೆ.

ಇದೇ ಮೊದಲ ಬಾರಿಗೆ ನಟಿ ಪ್ರಿಯಾಮಣಿ ಅವರು ವಿಜಯ್ ದಳಪತಿ ಜೊತೆ ಕಾಣಿಸಿಕೊಳ್ಳುತ್ತಿದ್ದಾರೆ. ಚಿತ್ರದಲ್ಲಿ ಅವರ ಪಾತ್ರದ ಬಗ್ಗೆ ರಿವೀಲ್ ಮಾಡಿಲ್ಲ. ಆದರೆ ಪವರ್‌ಫುಲ್ ಪಾತ್ರದಲ್ಲಿ ನಟಿ ಕಾಣಿಸಿಕೊಳ್ಳಲಿದ್ದಾರೆ ಎನ್ನಲಾಗಿದೆ. ಈಗಾಗಲೇ ಪೂಜಾ ಹೆಗ್ಡೆ ಮಮಿತಾ ಬೈಜು ಪ್ರಕಾಶ್ ರಾಜ್ ಚಿತ್ರತಂಡ ಸೇರಿಕೊಂಡ ಬೆನ್ನಲ್ಲೇ ಪ್ರಿಯಾಮಣಿ ಕೂಡ 'ದಳಪತಿ 69' ತಂಡ ಸೇರಿಕೊಂಡಿದ್ದಾರೆ.ಇನ್ನೂ ಇತ್ತೀಚಿನ ದಿನಗಳಲ್ಲಿ ಅವರಿಗೆ ಬಾಲಿವುಡ್‌ನಿಂದ ಉತ್ತಮ ಅವಕಾಶಗಳು ಸಿಗುತ್ತಿವೆ. ಪ್ರಿಯಾಮಣಿ ನಟಿಸಿರುವ ಜವಾನ್, ಆರ್ಟಿಕಲ್ 370, ಮೈದಾನ್ ಚಿತ್ರಗಳು ಸಕ್ಸಸ್ ಕಂಡಿವೆ. ತೆಲುಗು, ತಮಿಳು, ಹಿಂದಿಯಲ್ಲಿ ಅವರಿಗೆ ಬೇಡಿಕೆ ಹೆಚ್ಚಾಗಿದೆ.

ಅಂದಹಾಗೆ, ಸ್ಯಾಂಡಲ್‌ವುಡ್‌ನಲ್ಲಿ ರಾಮ್, ಅಣ್ಣಾಬಾಂಡ್, ಚಾರುಲತಾ, ಅಂಬರೀಶ, ಕಲ್ಪನಾ 2 ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ.

ಐಪಿಎಲ್ 2025 ರ ಮೆಗಾ ಹರಾಜಿಗಾಗಿ ಬಿಸಿಸಿಐ ರಿಟೇನ್ ನಿಯಮವನ್ನ ಬಿಡುಗಡೆ ಮಾಡಿದೆ. ಈ ಹೊಸ ನಿಯಮಗಳ ಪ್ರಕಾರ ಪ್ರತಿ ಫ್ರಾಂಚೈಸಿಯು ಆರು ಆಟಗಾರರನ್ನು ಉಳಿಸಿಕೊಳ್ಳಬಹುದು. ನೇರವಾಗಿ ಅಥವಾ ರೈಟ್ ಟು ಮ್ಯಾಚ್ ಕಾರ್ಡ್ ಬಳಸಿಕೊಂಡು ಉಳಿಸಿಕೊಳ್ಳಬಹುದಾಗಿದೆ.

5 ಅಂತಾರಾಷ್ಟ್ರೀಯ ಕ್ರಿಕೆಟಿಗರನ್ನ ಮಾತ್ರ ರಿಟೇನ್ ಮಾಡಿಕೊಳ್ಳಬಹುದು. ಇದಕ್ಕಾಗಿ 75 ಕೋಟಿ ಮೀಸಲಿಡಲಾಗಿದೆ. ಒಬ್ಬ ಅನ್ ಕ್ಯಾಪ್ಡ್ ಆಟಗಾರನನ್ನ ರಿಟೇನ್ ಮಾಡಿಕೊಳ್ಳಲೇಬೇಕಾಗಿದೆ.

ಪ್ರತಿ ತಂಡದ ಪರ್ಸ್ ಮೌಲ್ಯ 120 ಕೋಟಿ ರೂಪಾಯಿ ಇದೆ. ಮೊದಲನೇ ರಿಟೇನ್‌ಗೆ 18 ಕೋಟಿ ರೂ. 2ನೇ ರಿಟೇನ್‌ಗೆ 14 ಕೋಟಿ ರೂ. 3ನೇ ರಿಟೇನ್‌ಗೆ 11 ಕೋಟಿ ರೂ. ನೀಡಬೇಕು. ನೀವು ನಾಲ್ಕನೇ ಅಥವಾ

ಧೋನಿ ಮಾತ್ರವಲ್ಲ! ಈ 8 ಆಟಗಾರರನ್ನೂ ಕೇವಲ 4 ಕೋಟಿಗೆ ರಿಟೇನ್ ಮಾಡಿಕೊಳ್ಳಬಹುದು!

ಐದನೇ ಆಟಗಾರನನ್ನು ಉಳಿಸಿಕೊಳ್ಳಲು ಬಯಸಿದರೆ, ಕ್ರಮವಾಗಿ 18 ಮತ್ತು 14 ಕೋಟಿ ರೂ ನೀಡಬೇಕಾಗುತ್ತದೆ. ಐವರು ಆಟಗಾರರನ್ನು ಉಳಿಸಿಕೊಂಡರೆ ಹರಾಜಿಗೆ ಕೇವಲ 45 ಕೋಟಿ ಮಾತ್ರ ಉಳಿಯುತ್ತದೆ. ಈ ಹಣದಲ್ಲಿ ಹರಾಜಿನಲ್ಲಿ ಐವರ ಜೊತೆಗೆ 15 ಆಟಗಾರರನ್ನು ಖರೀದಿಸಬೇಕಾಗುತ್ತದೆ. ಒಂದು ವೇಳೆ ಅನ್‌ಕ್ಯಾಪ್ಡ್ ಆಟಗಾರರನ್ನು ಉಳಿಸಿಕೊಳ್ಳಲು ಬಯಸಿದರೆ 4 ಕೋಟಿ ರೂ. ಪಾವತಿಸಬೇಕು. ಗರಿಷ್ಠ ಇಬ್ಬರು ಅನ್‌ಕ್ಯಾಪ್ಡ್ ಆಟಗಾರರು ಮತ್ತು ಐದು ಕ್ಯಾಪ್ಡ್ ಆಟಗಾರರನ್ನು ತೆಗೆದುಕೊಳ್ಳಬಹುದು. ಈ ಐವರು ಕ್ಯಾಪ್ ಪಡೆದ ಆಟಗಾರರ ಪೈಕಿ ವಿದೇಶಿ ಆಟಗಾರರಿಗೆ ಯಾವುದೇ ನಿರ್ಬಂಧವಿಲ್ಲ.

ವಿದೇಶಿ ಆಟಗಾರರಿಗೆ ಯಾವುದೇ ನಿರ್ಬಂಧವಿಲ್ಲ

ಅಂತಾರಾಷ್ಟ್ರೀಯ ಕ್ರಿಕೆಟ್ ಆಡದ ಆಟಗಾರರನ್ನ ಅನ್‌ಕ್ಯಾಪ್ಡ್ ಎಂದು ಕರೆಯಲಾಗುತ್ತಿತ್ತು. ಇದೀಗ ಐದು ವರ್ಷಗಳ ಕಾಲ ಅಂತರಾಷ್ಟ್ರೀಯ ಕ್ರಿಕೆಟ್‌ನಿಂದ ದೂರವಿರುವವರನ್ನ ಕೂಡ ಅನ್‌ಕ್ಯಾಪ್ಡ್ ಆಟಗಾರ ಎಂದು ಪರಿಗಣಿಸಬಹುದು ಎಂದು ಬಿಸಿಸಿಐ ನಿಯಮ ಜಾರಿಗೆ ತಂದಿದೆ. ಈ ಅನ್‌ಕ್ಯಾಪ್ಡ್ ನಿಯಮದ ಮರುಪರಿಚಯವು ಸಾಕಷ್ಟು ಚರ್ಚೆಯಾಗುತ್ತಿದೆ. 2018 ರವರೆಗೆ ಜಾರಿಯಲ್ಲಿದ್ದ ಈ ನಿಯಮವನ್ನು 2022 ರ ಮೆಗಾ ಹರಾಜಿನಲ್ಲಿ ತೆಗೆದುಹಾಕಲಾಯಿತು. ಮತ್ತೆ ಹೊಸದಾಗಿ ಪರಿಚಯಿಸಿದೆ. ಆದರೆ, ಈ ನಿಯಮವನ್ನು ಚೆನ್ನೈ ಸೂಪರ್ ಕಿಂಗ್ಸ್ ತಂಡದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ಅವರ ಸಲುವಾಗಿ ತರಲಾಗಿದೆ ಎಂಬ ಮಾತು ಬಲವಾಗಿ ಕೇಳಿಬರುತ್ತಿದೆ. ಬಿಸಿಸಿಐನ ಈ ನಿರ್ಧಾರದೊಂದಿಗೆ ಚೆನ್ನೈ ಸೂಪರ್ ಕಿಂಗ್ಸ್ ಧೋನಿಯನ್ನ ಅನ್‌ಕ್ಯಾಪ್ಡ್ ಆಟಗಾರನನ್ನಾಗಿ ಉಳಿಸಿಕೊಳ್ಳುವ ಅವಕಾಶ ಇದೆ. ಅಲ್ಲದೆ ಅವರಿಗಾಗಿ ಕೇವಲ 4 ಕೋಟಿ ನೀಡಿ ಉಳಿಸಿಕೊಳ್ಳಬಹುದು. ಆದರೆ ಈ ನಿಯಮದ ಅಡಿಯಲ್ಲಿ ಧೋನಿ ಹೊರತುಪಡಿಸಿ ಇತರ 7 ಭಾರತೀಯ ಸ್ಟಾರ್ ಆಟಗಾರರನ್ನು ಸಹಾ ಖರೀದಿಸಬಹುದಾಗಿದೆ.

ಗವಾಸ್ಕರ್, ಸಚಿನ್, ರೋಹಿತ್ ಸಾಧಿಸಲಾಗದ ರೆಕಾರ್ಡ್ ಕ್ರಿಯೇಟ್

ಸರ್ಫರಾಜ್ ಖಾನ್ ದ್ವಿಶತಕ ಸಾಧನೆ

ಬಾಂಗ್ಲಾದೇಶ ವಿರುದ್ಧದ ಟೆಸ್ಟ್ ಸರಣಿಯಲ್ಲಿ ವಿರಾಟ್ ಕೊಹ್ಲಿ, ರಿಷಭ್ ಪಂತ್ ಮತ್ತು ಕೆಎಲ್ ರಾಹುಲ್ ಮರಳಿದ್ದರಿಂದ, ಹಿಂದಿನ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಉತ್ತಮ ಪ್ರದರ್ಶನ ತೋರಿದ ಸರ್ಫರಾಜ್ ಖಾನ್‌ಗೆ ಪ್ಲೇಯಿಂಗ್ ಇಲೆವೆನ್‌ನಲ್ಲಿ ಅವಕಾಶ ಸಿಗದೇ ಬೆಂಚ್ ಕಾಯ್ದಿರಿಸಿದ್ದರು.

ಆದರೆ ಸರ್ಫರಾಜ್ ಖಾನ್ ಇರಾನಿ ಟ್ರೋಫಿಯಲ್ಲಿ ಮತ್ತೆ ಅದ್ಭುತ ಪ್ರದರ್ಶನ ತೋರಿಸಿದ್ದಾರೆ. ರೆಸ್ಟ್ ಆಫ್ ಇಂಡಿಯಾ ವಿರುದ್ಧದ ಪಂದ್ಯದಲ್ಲಿ ತಮ್ಮ ಬ್ಯಾಟಿಂಗ್ ಪರಾಕ್ರಮವನ್ನು ಮೆರೆದರು. ಈ ಟ್ರೋಫಿಯಲ್ಲಿ ಅವರು ದೊಡ್ಡ ದಾಖಲೆಯನ್ನು ನಿರ್ಮಿಸಿದ್ದಾರೆ.

ಇರಾನಿ ಕಪ್ 2024 ರಲ್ಲಿ ಮುಂಬೈ ಬ್ಯಾಟ್ಸ್‌ಮನ್ ಸರ್ಫರಾಜ್ ಖಾನ್ ದ್ವಿಶತಕ (ಅಜೇಯ 222) ಬಾರಿಸಿದರು. ಈ ಮೂಲಕ ಇರಾನಿ ಕಪ್ ನಲ್ಲಿ ಮುಂಬೈ ಪರ ದ್ವಿಶತಕ ಬಾರಿಸಿದ ಮೊದಲ ಬ್ಯಾಟ್ಸ್ ಮನ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

ಒಟ್ಟಾರೆ ಇರಾನಿ ಟ್ರೋಫಿಯಲ್ಲಿ ದ್ವಿಶತಕ ಬಾರಿಸಿದ 11ನೇ ಆಟಗಾರ ಎಂಬ ಹೆಗ್ಗಳಿಕೆಗೆ ಸರ್ಫರಾಜ್ ಪಾತ್ರರಾದರು. ರೆಸ್ಟ್ ಆಫ್ ಇಂಡಿಯಾ ವಿರುದ್ಧದ ಪಂದ್ಯದಲ್ಲಿ ಸರ್ಫರಾಜ್ ಖಾನ್ 253 ಎಸೆತಗಳಲ್ಲಿ ದ್ವಿಶತಕ ಪೂರೈಸಿದರು. ಸರ್ಫರಾಜ್ ಖಾನ್ ತಮ್ಮ ಇಡೀ ಇನ್ನಿಂಗ್ಸ್‌ನಲ್ಲಿ 23 ಬೌಂಡರಿ ಮತ್ತು ಮೂರು ಸಿಕ್ಸರ್ ಬಾರಿಸಿದರು. ಇದು ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಸರ್ಫರಾಜ್ ಅವರ ನಾಲ್ಕನೇ ದ್ವಿಶತಕವಾಗಿದೆ.

ಸರ್ಫರಾಜ್ ಖಾನ್‌ಗಿಂತ ಮೊದಲು ಮುಂಬೈನವರೇ ಆದ ವಾಸಿಂ ಜಾಫರ್, ಪ್ರವೀಣ್, ಯಶಸ್ವಿ ಜೈಶ್ವಾಲ್ ಮತ್ತು ರವಿ ಶಾಸ್ತ್ರಿ ದ್ವಿಶತಕ ಬಾರಿಸಿದ್ದರು. ಆದರೆ ಅವರ್ಯಾರು ಮುಂಬೈ ತಂಡದ ಪರ ಈ ಸಾಧನೆ ಮಾಡಿಲ್ಲ. ಜಾಫರ್ ವಿದರ್ಭ ಪರ ಆಡಿದರೆ, ಉಳಿದವರು ರೆಸ್ಟ್ ಆಫ್ ಇಂಡಿಯಾ ಪರ ಆಡಿ ದ್ವಿಶತಕ ಸಿಡಿಸಿದ್ದರು. ಹಾಗಾಗಿ ಸರ್ಫರಾಜ್ ದ್ವಿಶತಕ ಪಟ್ಟಿಯಲ್ಲಿ 11ನೇ ಸ್ಥಾನದಲ್ಲಿದ್ದರು, ಮುಂಬೈ ಪರ ಈ ಸಾಧನೆ ಮಾಡಿದ ಮೊದಲ ಬ್ಯಾಟರ್ ಎನಿಸಿಕೊಂಡರು.

ಮುಂಬೈ ಪರ ಸುನಿಲ್ ಗವಾಸ್ಕರ್, ಸಚಿನ್ ತೆಂಡೂಲ್ಕರ್ ಅಂತಹ ಆಟಗಾರರಿಂದ ಹಿಡಿದು, ಇಂದಿನ ರೋಹಿತ್ ಶರ್ಮಾ, ಶ್ರೇಯಸ್ ಅಯ್ಯರ್, ಅಜಿಂಕ್ಯ ರಹಾನೆ ಅಂತಹ ಸ್ಟಾರ್ ಆಟಗಾರರು ಪ್ರತಿನಿಧಿಸಿದ್ದರೂ ಕೂಡ ಒಮ್ಮೆಯೂ ದ್ವಿಶತಕ ಸಿಡಿಸಿರಲಿಲ್ಲ. 30 ಬಾರಿ ಮುಂಬೈ ತಂಡ ಇರಾನಿ ಕಪ್ ಆಡಿದ್ದು, ಇದರಲ್ಲಿ ಸರ್ಫರಾಜ್ ಮಾತ್ರ ದ್ವಿಶತಕ ಸಿಡಿಸಿದ ದಾಖಲೆ ಹೊಂದಿದ್ದಾರೆ. ಇದಕ್ಕೂ ಮುನ್ನ ರಾಮ್‌ನಾಥ್ ಪಾರ್ಕರ್ 194ರನ್ ಗಳಿಸಿದ್ದ ಈ ಟೂರ್ನಿಯಲ್ಲಿ ಮುಂಬೈ ತಂಡದ ವೈಯಕ್ತಿಕ ಗರಿಷ್ಠ ಸ್ಕೋರರ್ ಆಗಿತ್ತು. 2010ರಲ್ಲಿ ರಹಾನೆ 191ರನ್ ಗಳಿಸಿ 2ನೇ ಸ್ಥಾನದಲ್ಲಿದ್ದರು. ವಾಸಿಮ್ ಜಾಫರ್ ಇರಾನಿ ಕಪ್‌ನಲ್ಲಿ ಅತಿದೊಡ್ಡ ಇನ್ನಿಂಗ್ಸ್ ಆಡಿದ ದಾಖಲೆ ಹೊಂದಿದ್ದಾರೆ. ವಾಸಿಂ ಜಾಫರ್ 2018ರಲ್ಲಿ ವಿದರ್ಭ ಪರ ಆಡುವಾಗ 286 ರನ್ ಗಳಿಸಿದ್ದರು.

ಸ್ಟಾರ್ ಕ್ರಿಕೆಟಿಗನ ಮೇಲೆ ಆರೋಪಗಳ ಸುರಿಮಳೆ!

ದೂರ ಇದ್ರೂ ಮರ್ಯಾದೆ ಕಳೆಯೋದು ಬಿಡ್ತಿಲ್ಲ!

ಭಾರತ ತಂಡದ ಸ್ಟಾರ್ ವೇಗದ ಬೌಲರ್ ಮೊಹಮ್ಮದ್ ಶಮಿ ಇತ್ತೀಚೆಗೆ ತಮ್ಮ ಮಗಳು ಆಯ್ರಾ ಅವರನ್ನು ಭೇಟಿಯಾಗಿದ್ದರು. ಪತ್ನಿಯಿಂದ ದೂರ ಉಳಿದಿರುವ ಶಮಿ, ಮಗಳನ್ನ ಆಗಾಗ್ಗೆ ಭೇಟಿ ಮಾಡುತ್ತಿರುತ್ತಾರೆ. ಈ ಅನುಭವಿ ವೇಗಿ ತನ್ನ ಮಗಳೊಂದಿಗೆ ಮಾಲ್‌ಗೆ ತೆರಳಿ ಶಾಪಿಂಗ್‌ಗೆ ಮಾಡುವ ವೀಡಿಯೊವನ್ನು ತಮ್ಮ ಸಾಮಾಜಿಕ ಹ್ಯಾಂಡಲ್‌ಗಳಲ್ಲಿ ಹಂಚಿಕೊಂಡಿದ್ದಾರೆ.

ಶಮಿ ಬಹಳ ದಿನಗಳ ನಂತರ ಮಗಳನ್ನು ಭೇಟಿಯಾಗಿದ್ದಾರೆ. ವೀಡಿಯೊವನ್ನು ಹಂಚಿಕೊಳ್ಳುವಾಗ, ಅವರು ಭಾವನಾತ್ಮಕ ಪೋಸ್ಟ್ ಬರಹ ಬರೆದಿದ್ದಾರೆ. ''ನಾನು ದೀರ್ಘ ಸಮಯದ ನಂತರ ಆಕೆ (ಮಗಳು) ನೋಡಿದಾಗ ಸಮಯವೇ ನಿಂತುಹೋಯಿತೇನೋ ಎಂಬಂತಾಯಿತು, ಈ ಅನುಭವವನ್ನ ಪದಗಳು ಹೇಳುವುದಕ್ಕಿಂತ ಹೆಚ್ಚಾಗಿ ನಾನು ನಿನ್ನನ್ನು ಪ್ರೀತಿಸುತ್ತೇನೆ ಎಂದು ಬರೆದುಕೊಂಡಿದ್ದರು.

ಆದರೆ, ಶಮಿ ಪೋಸ್ಟ್ ಬಗ್ಗೆ ಪತ್ನಿ ಹಸೀನಾ ಪ್ರತಿಕ್ರಿಯಿಸಿದ್ದು, ಶಮಿಗೆ ಮಗಳು ಐರಾ ಬಗ್ಗೆ ಏನೂ ಗೊತ್ತಿಲ್ಲ, ಆಕೆ ಹೇಗಿದ್ದಾಳೆ, ಅವಳ ಆಸೆ ಏನು, ಏನು ಬೇಕಾಗಿದೆ ಎಂಬುದರ ಬಗ್ಗೆ ಏನೇನು ತಿಳಿದಿಲ್ಲ ಎಂದು ಹಸಿನ್ ಜಹಾನ್ ಆರೋಪಿಸಿದ್ದಾರೆ. ಆಯ್ರಾ ಗಿಟಾರ್ ಮತ್ತು ಕ್ಯಾಮೆರಾ ಖರೀದಿಸಲೆಂದು ಬಯಸಿದ್ದಳು, ಆದರೆ ಶಮಿ ಅದನ್ನು ಕೊಡಿಸಿಲ್ಲ, ಬದಲಾಗಿ ತನ್ನ ಮಗಳನ್ನು ತಾನು ಅನುಮ